22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 281 | ನವದೆಹಲಿ | ಬೆಲೆ ₹ 10 | ಏಪ್ರಿಲ್ 17 2025, ಗುರುವಾರ

## ಒಳಪುಟಗಳಲ್ಲಿ

ರೈಲ್ವೆಯಿಂದ ಕ್ರಾಂತಿಕಾರಿ ಹೆಜ್ಜೆ; ಪಂಚವಟಿ ಎಕ್ಸ್‌ಪ್ರೆಸ್ ರೈಲಿನಲ್ಲಿ ದೇಶದ ಮೊದಲ ಎಟಿಎಂ ಸ್ಥಾಪನೆಯ ಪ್ರಾಯೋಗಿಕ ಪರೀಕ್ಷೆ ಯಶಸ್ವಿ- ಪು.4

ಜಾತಿಗಣತಿ ಸಮಸಮಾಜ ನಿರ್ಮಾಣಕ್ಕೆ ನಾಂದಿ- ಎಚ್.ಎಂ.ರೇವಣ್ಣ ಸಮರ್ಥನೆ - ಪು.5

# ಕಾಂಗ್ರೆಸ್ ಸರ್ಕಾರ ಉರುಳಿಸಲು ಮೋದಿ ಷಡ್ಯಂತ್ರ: ಖರ್ಗೆ ಆರೋಪ

**ಕಲಬುರ್ಗಿ, ಏ, 16;** ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಉರುಳಿಸಲು ಪ್ರಧಾನಿ ನರೇಂದ್ರ ಮೋದಿ ಮುಂದಾಗಿದ್ದಾರೆ. ಹುಷಾರಾಗಿರಬೇಕು ಮೋದಿ ಕರ್ನಾಟಕ ಸರ್ಕಾರ ಬೀಳಿಸುವ ಷಡ್ಯಂತ್ರ ಹೂಡಿದ್ದಾರೆ. ಎಲ್ಲೆಲ್ಲಿ ಕಾಂಗ್ರೆಸ್ ಸರ್ಕಾರಗಳಿವೆ ಯಾವ ರೀತಿಯಾಗಿ ಕೆಡುವ ಬೇಕು ತೆಗೆದುಹಾಕಬೇಕು ಅಧಿಕಾರ ಕೈಯಲ್ಲಿ ತೆಗೆದುಕೊಳ್ಳುವ ಪ್ರಯತ್ನ ಮಾಡುತ್ತಿದ್ದಾರೆ ಅದೇ ಪ್ರಯತ್ನ ನಮ್ಮ ಕರ್ನಾಟಕದಲ್ಲಿ ನಡೆದಿದೆ. ನಮ್ಮವರು ಹುಷಾರು ಆಗಿರಬೇಕು ನಿಮ್ಮಲ್ಲಿ ಯಾವುದೇ ಭೇದ-ಭಾವ ಆಗಿರಲಿ ಒಂದಾಗಿರಬೇಕು ಇಲ್ಲವಾದರೆ ಮೋದಿ ಸರ್ಕಾರ ತೆಗೆದುಹಾಕುತ್ತಾರೆ. ಬಡ ಜನರನ್ನು ನುಂಗುತ್ತಾರೆ. ರಕ್ಷಣೆಗಾಗಿ ರಾಜ್ಯದ ಜನರು ನಿಮಗೆ ಅಧಿಕಾರ ಕೊಟ್ಟಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಎಚ್ಚರಿಕೆ ನೀಡಿದ್ದಾರೆ.

ಹೀಗಾಗಿ ನಿಮ್ಮಲ್ಲಿ ಏನೇ ಮನಸ್ತಾಪ ಇದ್ದರೂ ಒಗ್ಗಟ್ಟಾಗಿರಬಹುದು ನೀವು ಹುಷಾರಾಗಿದೆ ಎಂದು ಹೇಳಿದರು.

ಇಡಿ, ಐಟಿ ಸಂಸ್ಥೆಗಳಿಂದ ಕರ್ನಾಟಕ ಸರ್ಕಾರ ಎಚ್ಚರಿಕೆಯಿಂದ ಇರಬೇಕು. ಯಾವ ಕ್ಷಣದಲ್ಲಿಯೂ ನಿಮ್ಮ ಮೇಲೆ ಇಡಿ, ಐಟಿ ದಾಳಿ ಮಾಡಬಹುದು. ನರೇಂದ್ರ ಮೋದಿ, ಅಮಿತ್ ಶಾ ಅವರು ಸಂಚು ಮಾಡುತ್ತಾರೆ. ಹೀಗಾಗಿ ನೀವೆಲ್ಲ ಏನೇ ಬೇಧಭಾವ ಇದ್ದರೂ ಒಗ್ಗಟ್ಟಾಗಿ ಇರಬೇಕು ಎಂದು ಖರ್ಗೆ ತಾಕೀತು ಮಾಡಿದರು. ನಿಮಗಂತು ಒಳ್ಳೆಯ ಕೆಲಸ ಮಾಡಲು ಆಗಲ್ಲ, ಮಾಡೋರಿಗಾದರೂ ಬಿಡಿ. 'ಕಾಂಗ್ರೆಸ್ ನೇ ಬಾಬಾಸಾಹೇಬ್ ಕೋ ಅಪಮಾನ್‌ಕಿಯೇ' ಅಂತಾ ಮೋದಿ ಹೇಳುತ್ತಾರೆ. ಆದರೆ ಮೋದಿಯವರೇ, ನಿಮಗೆ ಡಾ. ಅಂಬೇಡ್ಕರ್ ಹೆಸರು ತಗೊಳ್ಳೋಕೂ ಮನಸ್ಸಿಲ್ಲ, ಡಾ. ಅಂಬೇಡ್ಕರ್ ಹೆಸರು ನೀವು ಕಾಟಚಾರಕ್ಕೆ ಮಾತ್ರ ಪ್ರಸ್ತಾಪಿಸಿದ್ದೇನೆ. ನೀವೆಲ್ಲ ಸಂವಿಧಾನ ನಿರ್ನಾಮ ಮಾಡಲು ಹೊರಟವರು ಎಂದು ಖರ್ಗೆ ವಾಗ್ದಾಳಿ ನಡೆಸಿದರು.



ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ ಹಾಗೂ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಜಾರಿ ನಿರ್ದೇಶನಾಲಯದ ಮೂಲಕ ಬೆದರಿಸಲು ಕೇಂದ್ರ ಸರ್ಕಾರ ನೋಡುತ್ತಿದೆ. ಹೆರಾಲ್ಡ್ ಹಗರಣದ ಬಗ್ಗೆ ಪ್ರಸ್ತಾಪಿಸಿದ ಖರ್ಗೆ, ದೇಶಕ್ಕಾಗಿ ರೂಪಿಸಿದ ಸಂಸ್ಥೆ ಮೇಲೆ ಇಡಿ ಮೂಲಕ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ. ಇದಕ್ಕೆಲ್ಲಾ ಅವರು ಹೆದರುವುದಿಲ್ಲ ಎಂದು ಹೇಳಿದರು.

# ಯುವನಿಧಿ ಜೊತೆಗೆ ಕೌಶಲ್ಯ-ಉದ್ಯೋಗ ಸೃಷ್ಟಿಸಿ ಬದುಕು ರೂಪಿಸಲು ಕ್ರಮ

## ಕಲ್ಯಾಣ ಕರ್ನಾಟಕದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆ ಪರಿಶೀಲನೆ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಕಲಬುರಗಿ, ಏ.16:** ನಿರುದ್ಯೋಗ ನಿವಾರಣೆಗೆ ಕಲ್ಯಾಣ ಕರ್ನಾಟಕದಲ್ಲಿ ಹೊಸ ಕೈಗಾರಿಕೆಗಳ ಸ್ಥಾಪನೆಯಾಗಬೇಕು. ಹೊಸ ಕೈಗಾರಿಕೆಗಳ ಸ್ಥಾಪನೆಗೆ ಸರಕಾರ ಗಂಭೀರವಾಗಿ ಪರಿಗಣಿಸಲಿದೆ. ಕೈಗಾರಿಕೆ ಸ್ಥಾಪಿಸುವವರಿಗೆ ಶೇ.60 ಸಹಾಯಧನ ಕೊಡುವ ಬಗ್ಗೆ ಪರಿಶೀಲನೆ ಮಾಡುತ್ತೇನೆ ಎಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಿರುದ್ಯೋಗ ಸಮಸ್ಯೆ ಬಗೆಹರಿಸುವುದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜವಾಬ್ದಾರಿಯಾಗಿದೆ ಎಂದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮತ್ತು ಮಹಾನಗರ ಪಾಲಿಕೆ ಹಾಗೂ ಕೌಶಲ್ಯಾಭಿವೃದ್ದಿ, ಉದ್ಯಮಶೀಲತೆ, ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ಕಲಬುರಗಿಯ ಕೆಸಿಟಿ ಕಾಲೇಜು ಆವರಣದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ (ಯುವ ಸಮೃದ್ಧಿ ಸಮ್ಮೇಳನ) ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಕೌಶಲ್ಯ ತರಬೇತಿ ನೀಡಲು ಕೌಶಲ್ಯಾ ಅಭಿವೃದ್ಧಿ ಇಲಾಖೆ ತೆರೆದು ಅದರಡಿಯಲ್ಲಿ ಮಾರುಕಟ್ಟೆಯ ಬೇಡಿಕೆ ಅನ್ವಯ ತರಬೇತಿ ನೀಡಲಾಗುತ್ತಿದೆ. ಇಂದು ಉದ್ಯೋಗ ಮೇಳದಲ್ಲಿ ಉದ್ಯೋಗ ಸಿಗದಿರುವವರು ನಿರಾಸೆರಾಗಬೇಡಿ ನಿಮಗೆ ಮುಂದೊಂದು ದಿನ ಉದ್ಯೋಗ ಕೊಡಿಸುತ್ತೇವೆ.

ದೇಶದಲ್ಲಿ ಡಿಗ್ರಿ ಪಾಸಾದವರಲ್ಲಿ ಶೇ.18.9 ಹಾಗೂ ಡಿಪ್ಲೊಮಾ ಪಾಸಾದವರಲ್ಲಿ 17.1 ನಿರುದ್ಯೋಗ ಇದೆ. ನಮ್ಮ ರಾಜ್ಯದಲ್ಲಿ ಶೇ.2.5 ನಿರುದ್ಯೋಗ ಇದೆ. ಇದು ದೇಶದ ಬೇರೆ ರಾಜ್ಯಗಳಿಗೆ ಹೋಲಿಸಿದರೆ ಇದು ಕಡಿಮೆ. ಇದಕ್ಕೆ ರಾಜ್ಯ ಸರ್ಕಾರ ಉದ್ಯೋಗ ಒದಗಿಸಯವಲ್ಲಿ ಕೈಗೊಂಡ ಕ್ರಮಗಳೇ ಸಾಕ್ಷಿ. ಹೆಚ್ಚು ಹೆಚ್ಚು ಆದರೆ ನಿರುದ್ಯೋಗ ಸಮಸ್ಯೆ ಬಗೆಹರಿಯುತ್ತವೆ. ಈ ಬಗ್ಗೆ ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿ ಪರಿಶೀಲನೆ ಮಾಡಿ ಈ ಭಾಗದಲ್ಲಿ ಕೈಗಾರಿಕೆ ಸ್ಥಾಪನೆ ಹಾಗೂ ಅಭಿವೃಸದ್ಧಿಗೆ ಕ್ರಮ ವಹಿಸುತ್ತಿದೆ ಎಂದು ಸಿಎಂ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಇಂದು ನೇಮಕವಾದ ಹತ್ತು ಜನ ಯುವಕರಿಗೆ ನೇಮಕಾತಿ ಪತ್ರ ವಿತರಿಸಿ ಅವರಿಗೆ ಶುಭ ಹಾರೈಸಿ ಭಾಗವಹಿಸಿದ ಕಂಪನಿಗಳಿಗೆ ಅಭಿನಂದನೆ ಸಲ್ಲಿಸಿದರು. ಕೆ.ಕೆ ಭಾಗದ ಕೈಗಾರಿಕೆಗಳು ಬರಬೇಕೆಂದರೆ ಹೆಚ್ಚುವರಿ ಶೇ.60 ಸಬ್ಸಿಡಿ ಕೊಡಬೇಕು ಎಂದು ಖರ್ಗೆ ಅವರು ಹೇಳಿದ್ದಾರೆ.



■ ಕಲಬುರಗಿ ನಗರದ ಕೆಸಿಟಿ ಇಂಜಿನಿಯರಿಂಗ್ ಕಾಲೇಜ್ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮತ್ತು ಮಹಾನಗರ ಪಾಲಿಕೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ, ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಸಂಯುಕ್ತಾಶ್ರಯದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಸಚಿವರಾದ ಡಾ.ಶರಣಪ್ರಕಾಶ, ಪ್ರಿಯಾಂಕ್ ಖರ್ಗೆ, ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್ ಮುಂತಾದವರಿದ್ದರು.

ಮಾರುಕಟ್ಟೆ ಆಧಾರಿತ ಕೌಶಲ್ಯ ನೀಡಿ ಉದ್ಯೋಗ ಸೃಜಿಸಲು ಸಚಿವ ಶರಣ ಪ್ರಕಾಶ್ ಅವರಿಗೆ ಸೂಚಿಸಿದ್ದೇನೆ. ಹೀಗಾಗಿ ನೋಂದಾಯಿತರಾದ ಎಲ್ಲರಿಗೂ ಉದ್ಯೋಗ ಸಿಕ್ಕೇ ಸಿಗುತ್ತದೆ ಎಂದು ಭರವಸೆ ನೀಡಿದರು. ಉದ್ಯೋಗ ಕೊಡುವವರು, ಉದ್ಯೋಗ ಪಡೆಯುವವರನ್ನು ಒಟ್ಟಿಗೇ ಒಂದೇ ವೇದಿಕೆಯಲ್ಲಿ ತರುವ ಮೂಲಕ ಉದ್ಯೋಗಗಳನ್ನು ಒದಗಿಸುವುದಕ್ಕಾಗಿ ವಿಭಾಗಾವಾರು ಉದ್ಯೋಗಮೇಳಗಳನ್ನು ಸಂಘಟಿಸುತ್ತಿದ್ದೇವೆ ಎಂದರು. ಕೇಂದ್ರದಲ್ಲಿ ಹಾಗೂ ರಾಜ್ಯದಲ್ಲಿ ಹೂಡಿಕೆ ಹೆಚ್ಚಾದಷ್ಟೂ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತದೆ.

ಕೇಂದ್ರ ಸರ್ಕಾರ ದೇಶದ ಯುವ ಜನತೆಯನ್ನು ಸಂಪೂರ್ಣ ನಿರ್ಲಕ್ಷಿಸುತ್ತಿದೆ. ಆದರೆ ನಮ್ಮ ಸರ್ಕಾರ ಯುವ ಜನತೆ ಕೈಗೆ ಉದ್ಯೋಗ ನೀಡಿ ಅವರ ಬದುಕು ಕಟ್ಟುವ ಕೆಲಸ ಮಾಡುತ್ತಿದೆ ಎಂದರು. ಅಜಯ್ ಸಿಂಗ್ KKRDB ಅಧ್ಯಕ್ಷರಾದ ಬಳಿಕ 5000 ಕೋಟಿಗೂ ಅಧಿಕ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನು ಕಲ್ಯಾಣ ಕರ್ನಾಟಕದಲ್ಲಿ ನಿರ್ವಹಿಸುತ್ತಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

## ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡ್ತೀನಿ ಅಂದಿದ್ದ ಮೋದಿಯಿಂದ ದೇಶದ ಯುವಜನತೆಗೆ ವಂಚನೆ: ಸಿ.ಎಂ ಸಿದ್ದರಾಮಯ್ಯ ಆಕ್ರೋಶ

ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡ್ತೀನಿ ಅಂದಿದ್ದ ಮೋದಿ 10 ವರ್ಷದಲ್ಲಿ 20 ಕೋಟಿ ಉದ್ಯೋಗ ಕೊಡಬೇಕಿತ್ತು. ಆದರೆ 20 ಲಕ್ಷ ಉದ್ಯೋಗವನ್ನೂ ಕೊಡದೆ ಪರಮ ಸುಳ್ಳು ಹೇಳಿ ಯುವ ಜನರನ್ನು ವಂಚಿಸಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧನ ವ್ಯಕ್ತಪಡಿಸಿದರು.

ಆದರೆ, ನಾವು ನುಡಿದಂತೆ ನಡೆಯುತ್ತಾ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಇದರಲ್ಲಿ ಯುವ ನಿಧಿ ಕಾರ್ಯಕ್ರಮ ಕೂಡ ಸೇರಿದೆ. ಭತ್ಯೆ ಜೊತೆಗೆ ಕೌಶಲ್ಯ ತರಬೇತಿ ನೀಡಿ ಉದ್ಯೋಗವನ್ನೂ ಒದಗಿಸುತ್ತಿದ್ದೇವೆ ಎಂದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಐದು ಗ್ಯಾರಂಟಿ ಜಾರಿಗೊಳಿಸುವುದಾಗಿ ಭರವಸೆ ನೀಡಿದ್ದೆವು. ಯುವನಿಧಿ ಯೋಜನೆಯಡಿಯಲ್ಲಿ ಪದವಿ ನಿರುದ್ಯೋಗಿ ಯುವಕರಿಗೆ ರೂ 2000 ಹಾಗೂ ಡಿಪ್ಲೊಮಾ ಪಾಸ್ ಆದವರಿಗೆ ರೂ 1500 ಗೌರವಧನ (ಪ್ರತಿತಿಂಗಳು) ಎರಡು ವರ್ಷದ ಅವಧಿಯವರೆಗೆ ಕೊಡುತ್ತಿದ್ದೇವೆ.

## ಯುವಪ್ರತಿಭೆ ಏಳಿಗೆಗೆ ಶ್ರಮಿಸುತ್ತಿರುವ ಸಚಿವ ಶರಣಪ್ರಕಾಶ್ ಪಾಟೀಲ್‌ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅಭಿನಂದನೆ



**ಬೆಂಗಳೂರು, ಏ.16:** ಈ ಭಾಗದ 26,000 ನಿರುದ್ಯೋಗಿ ಯುವಕರಿಗೆ ಉದ್ಯೋಗ ಕೊಡಿಸುವ ಕೆಲಸ ಮಾಡುತ್ತಿರುವ ಸಚಿವ ಶರಣಪ್ರಕಾಶ್ ಪಾಟೀಲ್ ಅವರಿಗೆ ಅಭಿನಂದನೆಗಳು. ಕೌಶಲ್ಯಾಭಿವೃದ್ಧಿ ಇಲಾಖೆ ಒಂದು ದೀಪವಿದ್ದಂತೆ. ಅದನ್ನು ಸರಿಯಾದ ರೀತಿಯಲ್ಲಿ ಬಳಸಿದರೆ ಬೆಳಗುತ್ತದೆ. ಇದನ್ನು ಪಾಟೀಲ್ ಸರಿಯಾಗಿ ಬೆಳಗಿಸುತ್ತಿದ್ದಾರೆ ಎಂದು ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ ಹೇಳಿದರು. ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ (ಯುವ ಸಮೃದ್ಧಿ ಸಮ್ಮೇಳನ) ದಲ್ಲಿ ಮಾತನಾಡಿದ ಅವರು, ನೀವು ಉದ್ಯೋಗಿಗಳಾಗಿ ಮತ್ತೆ ನೂರಾರು ಜನರಿಗೆ ಉದ್ಯೋಗ ಕೊಡುವಂತೆ ಬೆಳೆದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ.

ಇಂದು ಉದ್ಯೋಗ ಸಿಕ್ಕಿಲ್ಲ ಎಂದು ನಿರಾಶರಾಗಬೇಡಿ. ಕೌಶಲ್ಯ ಕಲಿತುಕೊಂಡು ಉದ್ಯಮಿ ಗಳಾಗಬೇಕು. ನಿಮ್ಮ ಕೆಲಸದ ಬಗ್ಗೆ ಆತ್ಮಗೌರವ ಹೊಂದಿ ಎಂದು ಮಂಕುತಿಮ್ಮನ ಕಗ್ಗ ಹೇಳುವಂತೆ ಯುವಕರಿಗೆ ಪ್ರೋತ್ಸಾಹ ನೀಡಲಾಗಿದೆ.

ಕೊರೊನಾ ಸಮಯದಲ್ಲಿ ಈ ಭಾಗದವರು ಇಲ್ಲಿಗೆ ವಾಪಸ್ ಬರಲು ನಿಶ್ಚಯಿಸಿದ್ದರು. ಅಂದಿನ ಸರ್ಕಾರ ಅವರಿಗೆ ಇಂತಿಷ್ಟು ಮೊತ್ತ ನಿಗದಿಯಾಗಿತ್ತು. ಆಗ ಈ ಭಾಗದವರು ನನ್ನ ಮನೆಗೆ ಬಂದಾಗ ಪ್ರಿಯಾಂಕ್ ಖರ್ಗೆ, ಅಜಯ್ ಸಿಂಗ್ ಅವರೊಂದಿಗೆ ಚರ್ಚಿಸಿ ಕಾಂಗ್ರೆಸ್ ಪಕ್ಷದ ವತಿಯಿಂದ ಒಂದು ಕೋಟಿ ರೂ. ಹಣ ಬಿಡುಗಡೆ ಮಾಡಿಸಿದ್ದೆ ಎಂದು ಡಿ.ಕೆ.ಶಿವಕುಮಾರ್ ಮೆಲುಕು ಹಾಕಿದರು.

ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಅಭಿವೃದ್ಧಿಪರ ಚಿಂತನೆಯನ್ನು ಕೊಂಡಾಡಿದ ಡಿ.ಕೆ. ಶಿವಕುಮಾರ್ ಅವರ ಆರ್ಟಿಕಲ್ 371 ಎ ಜಾರಿಗೆ ತಂದು ಈ ಭಾಗ ಯುವಕರಿಗೆ ಉದ್ಯೋಗ ಹಾಗೂ ಶಿಕ್ಷಣದಲ್ಲಿ ಮೀಸಲಾತಿ ನೀಡಿ ಈ ಭಾಗದ ಯುವಕರಿಗೆ ದಾರಿದೀಪವಾಗಿದ್ದಾರೆ. ಈಗ ರಾಜ್ಯ ಸರ್ಕಾರ ಅವರ ಆಶೀರ್ವಾದದಿಂದ ಚೆನ್ನಾಗಿ ಕೆಲಸ ಮಾಡುತ್ತಿದೆ ಎಂದು ಶ್ಲಾಘಿಸಿದರು.

ಅನುಭವ ಬೆಳೆದಷ್ಟು ಬದುಕು, ಭವಿಷ್ಯ ಗಟ್ಟಿಯಾಗುವುದರ ಜೊತೆಗೆ ಸಂಬಳ ಜಾಸ್ತಿಯಾಗುತ್ತದೆ. ರಾಜ್ಯ ಸರ್ಕಾರ ಎಲ್ಲ ವರ್ಗದ ಜನರ ರಕ್ಷಣೆ ನೀಡುವ ಕಾರ್ಯಕ್ರಮ. ನಿರುದ್ಯೋಗಿ ಯುವಕರಿಗೆ ಗೌರವ ಧನ ನೀಡಲಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಜನರ ಪರವಾಗಿದೆ. ನೀವು ನಮ್ಮ ಸರ್ಕಾರಕ್ಕೆ ಆಶೀರ್ವಾದ ನೀಡುತ್ತಾ ಬೆಂಬಲ ಎಂದು ಮನವಿ ಮಾಡಿದರು.

## ಸಾಮಾಜಿಕ ಆರ್ಥಿಕ ಸಮೀಕ್ಷೆಯಿಂದ ಯಾರಿಗೂ ಅನ್ಯಾಯವಾಗಲು ಬಿಡುವುದಿಲ್ಲ: ಸಿಎಂ ಸಿದ್ದರಾಮಯ್ಯ

**ಕಲಬುರಗಿ, ಏ.16:** ಒಕ್ಕಲಿಗ, ಲಿಂಗಾಯತರನ್ನು ಎದುರು ಹಾಕಿಕೊಂಡು ರಾಜ್ಯಭಾರ ಮಾಡಲು ಬಂದಿಲ್ಲ. ಎಚ್.ಕಾಂತರಾಜ ಅವರ ಆಯೋಗವು ರಾಜ್ಯದ ಸಾಮಾಜಿಕ, ಆರ್ಥಿಕ ಸಮೀಕ್ಷೆಯ ವರದಿ ಸಲ್ಲಿಸಿದೆ. ಗುರುವಾರ ನಡೆಯುವ ಸಚಿವ ಸಂಪುಟದ ಸಭೆಯಲ್ಲಿ ಈ ಕುರಿತು ವಿಸ್ತೃತ ಚರ್ಚೆ ನಡೆಯಲಿದೆ. ಸಾಮಾಜಿಕ, ಆರ್ಥಿಕ ಸಮೀಕ್ಷೆಯಿಂದ ಯಾರಿಗೂ ಅನ್ಯಾಯವಾಗಲು ಬಿಡುವದಿಲ್ಲ ಎಂದು ಸಾಮನೂರು ಶಿವಶಂಕರಪ್ಪ ಅವರ ಹೇಳಿಕೆ ಪ್ರಸ್ತಾಪಿಸಿ ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ಕಲಬುರಗಿಯಲ್ಲಿ ವಿಭಾಗ ಮಟ್ಟದ ಉದ್ಯೋಗ ಮೇಳ ಉದ್ಘಾಟನೆಯಲ್ಲಿ ಪಾಲ್ಗೊಳ್ಳಲು ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಜನಸಂಖ್ಯೆ ಗಮನಿಸಿದಾಗ ಲಿಂಗಾಯತರು ಮತ್ತು ಒಕ್ಕಲಿಗರೇ ಅಧಿಕ ಸಂಖ್ಯೆಯಲ್ಲಿದ್ದಾರೆ.

ಅವರನ್ನು ಎದುರುಹಾಕಿಕೊಂಡು ರಾಜ್ಯಭಾರ ಮಾಡೋಕೆ ಆಗುತ್ತಾ? ಎಂದು ಶಾಮನೂರು ಶಿವಶಂಕರಪ್ಪ ಹೇಳಿಕೆ ಪ್ರಸ್ತಾಪಿಸಿ, ನೋಡಪ್ಪ ಇದು ಸೋಷಿಯೋ ಎಕನಾಮಿಕ್ ಸರ್ವೆ. ಯಾರಿಗೂ ಅನ್ಯಾಯ ಆಗಲ್ಲ. ಅನ್ಯಾಯ ಆಗೋಕೆ ಬಿಡೋದಿಲ್ಲ. ಸಚಿವ ಸಂಪುಟ ಸಭೆಯಲ್ಲಿ ಸಚಿವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಮುಕ್ತ ಅವಕಾಶ ನೀಡಲಾಗಿದೆ. ಇದು ಜನಗಣತಿ ಅಲ್ಲ, ಸಾಮಾಜಿಕ, ಶೈಕ್ಷಣಿಕ, ಆಥಿಕ ಸಮೀಕ್ಷೆ ಅಷ್ಟೇ. ಆದರೂ ಯಾರಿಗೂ ಅನ್ಯಾಯವಾಗಲು ಅವಕಶ ನೀಡುವದಿಲ್ಲ. ಒಕ್ಕಲಿಗ ಸಮುದಾಯದ ಸಚಿವರು, ಶಾಸಕರ ಅಭಿಪ್ರಾಯಗಳನ್ನೂ ಪರಿಗಣಿಸಲಾಗು ವುದು ಎಂದೂ ಹೇಳಿದರು.



ಒಕ್ಕಳಿಗ ಶಾಸಕರು ಸಭೆ ನಡೆಸಿರುವ ಬಗ್ಗೆ ಮಾಡಲಿ ಬಿಡಿ. ಐದು ಒಕ್ಕಳಿಗ ಸಚಿವರಿದ್ದಾರೆ. ಚರ್ಚೆ ಮಾಡಲಿ, ನಾಳೆ ನಡೆಯುವ ಸಭೆಯಲ್ಲಿ ಅವರೂ ಮಾತನಾಡಲಿ, ಮುಂದಿನದನ್ನು ನೋಡೋಣ ಎಂದು ಈ ಬಗ್ಗೆ ತಲೆಕೆಡಿಸಿಕೊಳ್ಳದೇ ಉತ್ತರಿಸಿದರು. ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಪಕ್ಷದ ರಾಷ್ಟ್ರೀಯ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರನ್ನು ಸಿಲುಕಿಸಲು ಬಿಜೆಪಿಯವರು ಸಂಚು ನಡೆಸಿದ್ದಾರೆ. ಇದಕ್ಕಾಗಿ ಇಡಿ, ಸಿಬಿಐ ಸಂಸ್ಥೆಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ ಎಂದೂ ಟೀಕಿಸಿದರು.

## ಸಿಜೆಐ ಹುದ್ದೆಗೆ ಬಿ.ಆರ್.ಗವಾಯಿ ಹೆಸರು ಶಿಫಾರಸು



**ನವದೆಹಲಿ, ಏ.16:** ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ಮೇ 14 ರಂದು ಭಾರತದ 51ನೇ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ. ಪ್ರಸ್ತುತ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರ ಅಧಿಕಾರಾವಧಿ ಮೇ 13 ರಂದು ಕೊನೆಗೊಳ್ಳಲಿದ್ದು, ಅವರ ನಂತರ ಗವಾಯಿ ಅವರು ಈ ಪ್ರತಿಷ್ಠಿತ ಹುದ್ದೆಯನ್ನು ಅಲಂಕರಿಸಲಿದ್ದಾರೆ.

ಸಂಪ್ರದಾಯದಂತೆ, ಪ್ರಸ್ತುತ ಸಿಜೆಐ ಸಂಜೀವ್ ಖನ್ನಾ ಅವರು ಇಂದು ಕೇಂದ್ರ ಕಾನೂನು ಸಚಿವಾಲಯಕ್ಕೆ ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯಾಧೀಶ ಗವಾಯಿ ಅವರನ್ನು ಮುಂದಿನ ಸಿಜೆಐ ಆಗಿ ನೇಮಿಸಲು ಶಿಫಾರಸು ಮಾಡಿದ್ದಾರೆ. 2007 ರಲ್ಲಿ ನ್ಯಾಯಮೂರ್ತಿ ಕೆ.ಜಿ.ಬಾಲಕೃಷ್ಣನ್ ಅವರ ನೇಮಕದ ನಂತರ, ನ್ಯಾಯಮೂರ್ತಿ ಗವಾಯಿ ಅವರು ಈ ಹುದ್ದೆಯನ್ನು ಅಲಂಕರಿಸುತ್ತಿರುವ ಎರಡನೇ ದಲಿತರಾಗಲಿದ್ದಾರೆ.

ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರು 1960ರ ಮೇ 24 ರಂದು ಮಹಾರಾಷ್ಟ್ರದ ಅಮರಾವತಿಯಲ್ಲಿ ಜನಿಸಿದರು. ತಮ್ಮ ಕಾನೂನು ವೃತ್ತಿಯನ್ನು 1985 ರಲ್ಲಿ ಆರಂಭಿಸಿದ ಅವರು, ಬಾಂಬೆ ಹೈಕೋರ್ಟ್‌ನಲ್ಲಿ ವಕೀಲರಾಗಿ 15 ವರ್ಷಗಳ ಕಾಲ ಸೇವೆ ಸಲ್ಲಿಸಿದರು. 2003 ರಲ್ಲಿ ಅವರನ್ನು ಬಾಂಬೆ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ನೇಮಿಸಲಾಯಿತು,

ಗವಾಯಿ ಅವರು ಅಮರಾವತಿಯ ಡಾ. ಅಂಬೇಡ್ಕರ್ ಕಾಲೇಜ್ ಆಫ್ ಲಾದಿಂದ ಕಾನೂನು ಪದವಿಯನ್ನು ಪಡೆದರು. ತಮ್ಮ ಶಿಕ್ಷಣದ ಜೊತೆಗೆ, ಕಾನೂನು ಕ್ಷೇತ್ರದಲ್ಲಿ ಗಮನಾರ್ಹ ಸಾಧನೆಗಳನ್ನು ಮಾಡಿದ್ದಾರೆ.

ಅವರು ನವೆಂಬರ್‌ನಲ್ಲಿ ನಿವೃತ್ತರಾಗುವ ಮೊದಲು ಸುಮಾರು ಆರು ತಿಂಗಳ ಕಾಲ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಲಿದ್ದಾರೆ.

# ದೇಶದ ನ್ಯಾಯ ವ್ಯವಸ್ಥೆಯ ಶ್ರೇಯಾಂಕದಲ್ಲಿ ಕರ್ನಾಟಕಕ್ಕೆ ಮೊದಲ ಸ್ಥಾನ

**ನವದೆಹಲಿ, ಏ.16:** ದೇಶದ ನ್ಯಾಯ ವ್ಯವಸ್ಥೆಯ ಶ್ರೇಯಾಂಕದಲ್ಲಿ ಕರ್ನಾಟಕ ಮೊದಲ ಸ್ಥಾನವನ್ನು ಪಡೆದುಕೊಂಡಿದೆ. ಇಂಡಿಯಾ ಜಸ್ಟೀಸ್ ರಿಪೋರ್ಟ್ ನ್ಯಾಯಾಲಯ, ಪೊಲೀಸ್, ಜೈಲು ವ್ಯವಸ್ಥೆ, ಕಾನೂನು ಸಹಾಯ ಮತ್ತು ಮಾನವ ಸಂಪನ್ಮೂಲಗಳ ಕಾರ್ಯಕ್ಷಮತೆಯ ಆಧಾರದ ಮೇಲೆ ರಾಜ್ಯಗಳನ್ನು ಮೌಲ್ಯಮಾಪನ ಮಾಡಿದೆ.

ಇದರಲ್ಲಿ ಕರ್ನಾಟಕ ಮೊದಲ ಸ್ಥಾನದಲ್ಲಿದ್ದರೆ ಕರ್ನಾಟಕದ ನಂತರ ಆಂಧ್ರಪ್ರದೇಶ, ತೆಲಂಗಾಣ, ಕೇರಳ ಮತ್ತು ತಮಿಳುನಾಡು ಇವೆ. ಕರ್ನಾಟಕ ಅಗ್ರ ಶ್ರೇಯಾಂಕದ ರಾಜ್ಯವಾಗಿದ್ದರೂ, ಜೈಲುಗಳು, ಕಾನೂನು ನೆರವಿನಲ್ಲಿ ಕರ್ನಾಟಕದ ಸಾಧನೆ ಹಿಂದುಳಿದಿದೆ.

ಕರ್ನಾಟಕ ನ್ಯಾಯಾಲಯಗಳ ಕಾರ್ಯಕ್ಷಮತೆಯಲ್ಲಿ ಮುಂದಿದೆ.




ಕರ್ನಾಟಕದ ಜಿಲ್ಲಾ ನ್ಯಾಯಾಲಯಗಳು ಪ್ರಕರಣಗಳ ತ್ವರಿತ ಇತ್ಯರ್ಥದಲ್ಲಿ ದೇಶದಲ್ಲೇ ಮುಂಚೂಣಿಯಲ್ಲಿವೆ. ಒಬ್ಬ ನ್ಯಾಯಾಧೀಶರಿಗೆ ಸರಾಸರಿ 1,200 ಪ್ರಕರಣಗಳಿರುವುದು ರಾಷ್ಟ್ರೀಯ ಸರಾಸರಿಗಿಂತ ಕಡಿಮೆಯಾಗಿದೆ.

ನ್ಯಾಯಾಂಗದಲ್ಲಿ ಒಬಿಸಿ, ಎಸ್ಸಿ/ಎಸ್ಟಿ ಸಮುದಾಯಗಳ ವೈವಿಧ್ಯತೆ ಪ್ರಾತಿನಿಧ್ಯವು ಕರ್ನಾಟಕದಲ್ಲಿ ಉತ್ತಮವಾಗಿದೆ.

ಪೊಲೀಸ್ ವ್ಯವಸ್ಥೆಯಲ್ಲಿ ಕರ್ನಾಟಕ ಉತ್ತಮವಾಗಿದೆ. ರಾಜ್ಯದಲ್ಲಿ ಮಹಿಳಾ ಪೊಲೀಸರ ಪ್ರಮಾಣ (12%) ರಾಷ್ಟ್ರೀಯ ಸರಾಸರಿ (10%) ಗಿಂತ ಉತ್ತಮವಾಗಿದೆ.

ತರಬೇತಿ ಕೇಂದ್ರಗಳ ಸಂಖ್ಯೆಯೂ ಗಣನೀಯವಾಗಿದೆ. ಆದರೆ ಕರ್ನಾಟಕದ ಜೈಲುಗಳು ಶೇಕಡಾ 130ರಷ್ಟು ಸಾಮರ್ಥ್ಯಕ್ಕಿಂತ ಹೆಚ್ಚಿನ ಕೈದಿಗಳನ್ನು ಹೊಂದಿವೆ. ಇದರಿಂದ ಸಿಬ್ಬಂದಿ ಕೊರತೆ, ಮೂಲಭೂತ ಸೌಕರ್ಯಗಳ ಕೊರತೆ ಮತ್ತು ಕೈದಿಗಳ ಆರೋಗ್ಯ ಸಮಸ್ಯೆಗಳು ಉಂಟಾಗಿವೆ.

ಬಡವರು ಮತ್ತು ಅಂಚಿನಲ್ಲಿರುವವರಿಗೆ ಉಚಿತ ಕಾನೂನು ಸಹಾಯ ಒದಗಿಸುವಲ್ಲಿ ಕರ್ನಾಟಕ ಹಿಂದುಳಿದಿದೆ. ಕಾನೂನು ಸಹಾಯ ಕೇಂದ್ರಗಳ ಸಂಖ್ಯೆ ಕಡಿಮೆಯಿದ್ದು, ಜನರಿಗೆ ತಲುಪುವಿಕೆಯಲ್ಲಿ ತೊಂದರೆಯಾಗಿದೆ.

ಕೆಳಗಿನ ನ್ಯಾಯಾಲಯಗಳಲ್ಲಿ ಶೇಕಡಾ 20ರಷ್ಟು ನ್ಯಾಯಾಧೀಶರ ಹುದ್ದೆಗಳು ಖಾಲಿಯಿವೆ, ಇದು ಪ್ರಕರಣಗಳ ವಿಳಂಬಕ್ಕೆ ಕಾರಣವಾಗುತ್ತಿದೆ ಎಂದು ವರದಿಯಲ್ಲಿ ತಿಳಿಸಿದೆ.

## ನಿತ್ಯ ಪಂಚಾಂಗ 17.04.2025 ಗುರುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ

ಚೌತಿ, ಜ್ಯೇಷ್ಠ ನಕ್ಷತ್ರ,
ಪುತ್ತೂರು ಮಹಾಲಿಂಗೇಶ್ವರ / ಪಾವಂಜೆ ರಥ,
ಹುಲಿಕಲ್ಲು ಲಕ್ಷ್ಮೀನರಸಿಂಗ ರಥ,
ಅಥಣಿ ದುರ್ಗಾದೇವಿ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಉದ್ಯೋಗ ಮೇಳ ಆಯೋಜನೆ ದೇಶಕ್ಕೆ, ರಾಜ್ಯಕ್ಕೆ ಒಳ್ಳೆಯದು: ಸ್ಥಳೀಯವಾಗಿ ಉದ್ಯೋಗ ಸೃಷ್ಟಿಗೆ ಕೈಗಾರಿಕೆ ಸ್ಥಾಪನೆಗೆ ಶೇ.60 ಸಬ್ಸಿಡಿ ನೀಡಿ: ಖರ್ಗೆ ಸಲಹೆ



**ಕಲಬುರಗಿ, ಏ. 16:** ಉದ್ಯೋಗ ಮೇಳ ಆಯೋಜಿಸಿರುವುದು ರಾಜ್ಯಕ್ಕೆ ಹಾಗೂ ದೇಶಕ್ಕೆ ಒಳ್ಳೆಯದು. ಆದರೆ ಸ್ಥಳೀಯವಾಗಿಯೇ ಉದ್ಯೋಗ ಸೃಷ್ಟಿಸಲು ಕೈಗಾರಿಕೆಗಳ ಸ್ಥಾಪನೆಯಾಗಬೇಕು. ಸ್ಥಳೀಯವಾಗಿ ಕೈಗಾರಿಕೆ ಸ್ಥಾಪಿಸುವವರಿಗೆ ಶೇ.60ರಷ್ಟುಇ ಸಬ್ಸಿಡಿ ನೀಡುವ ಮೂಲಕ ಹೊಸ ಕೈಗಾರಿಕೆಗಳ ಸ್ಥಾಪನೆಗೆ ಒತ್ತು ನೀಡಬೇಕು ಎಂದು ರಾಜ್ಯ ಸಭಾ ವಿರೋಧ ಪಕ್ಷದ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು. ನಗರದಲ್ಲಿ ಆಯೋಜಿಸಿದ ಉದ್ಯೋಗ ಮೇಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ತಾವು ಕೇಂದ್ರದಲ್ಲಿ ಕೌಶಲ್ಯಾಭಿವೃದ್ಧಿ ಸಚಿವರಾಗಿದ್ದಾಗ ಕರ್ನಾಟಕದಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ಜರ್ಮನ್ ಸಹಯೋಗದಲ್ಲಿ ತೆರಯಲು ಜರ್ಮನ್ ಚಾನ್ಸಲರ್ ಮಾರ್ಕಲ್ ಅವರೊಂದಿಗೆ ಚರ್ಚೆ ನಡೆಸಿದ್ದೆ. ಅದಕ್ಕೆ ಅವರು ಒಪ್ಪಿದ್ದರಿಂದ ಒಂದು ಬೆಂಗಳೂರಿನಲ್ಲಿ ಮತ್ತೊಂದು ಕಲಬುರಗಿಯಲ್ಲಿ ಸ್ಥಾಪಿಸಲಾಗಿತ್ತು. ಅಲ್ಲಿ ತರಬೇತಿ ಪಡೆದವರಲ್ಲಿ ಸಾವಿರಾರು ಜನರು ಉದ್ಯೋಗ ಪಡೆದಿದ್ದಾರೆ ಎಂದು ಹೇಳಿದರು. ಕೈಗಾರಿಕಾ ಸಚಿವರಾಗಿದ್ದಾಗ ಜಿಟಿಟಿಸಿ ಕೇಂದ್ರ ಸ್ಥಾಪಿಸಿದೆ. ಜಿಟಿಟಿಸಿ ಕೇಂದ್ರದಲ್ಲಿ ಸರ್ಟಿಫಿಕೇಟ್ ಪಡೆದವರಿಗೆ ದೇಶದ ಯಾವುದೇ ಭಾಗದಲ್ಲಿ ಕೆಲಸ ಸಿಗುತ್ತದೆ. ಕಾರ್ಮಿಕ ಸಚಿವರಾಗಿದ್ದಾಗ ಐಟಿಐ ಸ್ಥಾಪನೆ ಮಾಡಿದೆ.

1952–2009 ರವರೆಗೆ 5,000 ಐಟಿಐ ಕಾಲೇಜುಗಳಿದ್ದವು. ಮತ್ತಷ್ಟು ಐಟಿಐ ಕೇಂದ್ರ ಸ್ಥಾಪಿಸುವಂತೆ ಮನವಿ ಮಾಡಿದಾಗ ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ಮೂರು ಐಟಿಐ ಕೊಟ್ಟರು. ಅಂದಿನ ಕೇಂದ್ರಗಳಲ್ಲಿ ಶೀಫ್ಟ್ ಆಧಾರದ ಮೇಲೆ ತರಬೇತಿ ನೀಡಲಾಗುತ್ತಿತ್ತು. ನನ್ನ ಅವಧಿಯಲ್ಲಿ ಸಿಂಗಲ್ ವಿಂಡೋ ಸ್ಥಾಪನೆ ಮಾಡಿ ಕುಶಲ ಕಾರ್ಮಿಕರ ಸಂಖ್ಯೆ ಹೆಚ್ಚಳ ಮಾಡಲು ಲಕ್ಷಾಂತರ ಜನರಿಗೆ ತರಬೇತಿ ನೀಡಲಾಗಿತ್ತು ಎಂದು ನೆನಪಿಸಿಕೊಂಡರು. ಕಾರ್ಖಾನೆಗಳು ಯುವಕರಿಗೆ ಕೌಶಲ್ಯತೆ ಹೆಚ್ಚಿಸಲು ತರಬೇತಿ ನೀಡಬೇಕು. ಬೆಂಗಳೂರಿನಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರಗಳಿವೆ. ಯುವಕರು ಅಲ್ಲಿ ತರಬೇತಿ ಪಡೆದುಕೊಳ್ಳಬೇಕು. ಹಾಗಾಗಿ ಅಂತಹ ಯುವಕರು ಕೇವಲ ಪದವಿ ಓದಿದರೆ ಮಾತ್ರ ಕೆಲಸ ಸಿಗುವುದಿಲ್ಲ. ಅದರ ಜೊತೆಗೆ ತಾಂತ್ರಿಕತೆ ಹಾಗೂ ಕೌಶಲ್ಯ ಅಭಿವೃದ್ಧಿ ಹೆಚ್ಚಿಸುವ ತರಬೇತಿ ಹೊಂದಿದಾಗ ಮಾತ್ರ ಕೆಲಸ ಸಿಗುತ್ತವೆ. ಅಂತಹ ತರಬೇತಿ ಕೇಂದ್ರಗಳನ್ನು ಕಾಂಗ್ರೆಸ್ ಅವಧಿಯಲ್ಲಿ ತೆರೆಯಲಾಗಿತ್ತೇ ಹೊರತು ಮೋದಿ ಅವಧಿಯಲ್ಲಿ ಅಲ್ಲ ಎಂದು ಕುಟುಕಿದರು. ಹೈ– ಕ ಭಾಗಕ್ಕೆ ಆರ್ಟಿಕಲ್ 371 ಜಾರಿಗೆ ತರವಲ್ಲಿ ಅಂದಿನ ಗೃಹ ಸಚಿವ ಅಧ್ವಾನಿ ಅಧ್ವಾನ ಮಾಡಿಬಿಟ್ಟಿದ್ದರು. ಆದರೆ ಯುಪಿಎ ಸರ್ಕಾರ ಸದಸ್ಯ ಬಲದ ಬೆಂಬಲವಿಲ್ಲದಿದ್ದರೂ ಕೂಡಾ ಇತರೆ ಸಂಸದ ರೊಂದಿಗೆ ಮಾತುಕತೆ ನಡೆಸಿ ಆರ್ಟಿಕಲ್ 371(1) ಜಾರಿಗೆ ತಂದಿದೆ. ಸುಮ್ಮನೆ ಕೂತರೆ ಯಾವುದೂ ಸಿಗುವುದಿಲ್ಲ. ಬಿ.ಆರ್.ಪಾಟೀಲ್ ತರಹ ಆಗಾಗ ಸೌಂಡ್ ಮಾಡುತ್ತಿದ್ದರೆ ಏನಾದರೂ ಸಿಗುತ್ತದೆ. ಯಾವುದೇ ಯೋಜನೆಯಾಗಲಿ ಅದರ ಬಳಕೆ ಮಾಡಿಕೊಳ್ಳಬೇಕು. ಈ ಭಾಗದಲ್ಲಿ ಕೈಗಾರಿಕೆಗಳ ಅಭಿವೃದ್ಧಿಯಾಗಿಲ್ಲ. ಸಿಎಂ, ಡಿಸಿಎಂ ಬಂದಿದ್ದಾರೆ, ಅವರು ಸ್ವಲ್ಪ ಮನಸು ಮಾಡಿ ಈ ಭಾಗದ ಕೈಗಾರಿಕೆ ಅಭಿವೃದ್ಧಿಗೆ ಕೆಲಸ ಮಾಡಬೇಕು. ಹೊಸ ಕೈಗಾರಿಕೆ ಸ್ಥಾಪಿಸುವವರಿಗೆ ಶೇ.60 ಸಬ್ಸಿಡಿ ಯೋಜನೆ ಜಾರಿಗೆ ತರುವ ಮೂಲಕ ಕೈಗಾರಿಕೆ ಸಥಾಪನೆಗೆ ಒತ್ತು ನೀಡಬೇಕು ಇದರಿಂದ ಸ್ಥಳೀಯವಾಗಿಯೇ ಉದ್ಯೋತಗ ಸೃಷ್ಟಿಯಾಗುತ್ತವೆ ಎಂದರು.

# ರಾಹುಲ್ ಗಾಂಧಿ ವಿರುದ್ಧ ದೋಷಾರೋಪ ಪಟ್ಟಿ: ಜಾರಿ ನಿರ್ದೇಶನಾಲಯ ವಿರುದ್ಧ ಸಿಎಂ ಸಿದ್ದರಾಮಯ್ಯ ಕಿಡಿ

**ಬೆಂಗಳೂರು, ಏ.16–** ಕಾಂಗ್ರೆಸ್ ಪಕ್ಷದ ಹಿರಿಯ ನಾಯಕಿ ಸೋನಿಯಾ ಗಾಂಧಿ ಮತ್ತು ಕೇಂದ್ರ ಸರ್ಕಾರದ ಪಾಲಿಗೆ ಸಿಂಹಸ್ವಪ್ನರಾಗಿರುವ ರಾಹುಲ್ ಗಾಂಧಿ ಅವರ ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಸಿರುವ ಜಾರಿ ನಿರ್ದೇಶನಾಲಯದ (ಇಡಿ) ಕ್ರಮ ಪ್ರಧಾನಮಂತ್ರಿ ನರೇಂದ್ರ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಸೇಡಿನ ರಾಜಕಾರಣದ ಮುಂದುವರಿದ ಭಾಗ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಕಿಡಿಕಾರಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಇದು ಕೇವಲ ನಮ್ಮ ಪಕ್ಷದ ಇಬ್ಬರು ನಾಯಕರ ಇಲ್ಲವೇ ಕಾಂಗ್ರೆಸ್ ಪಕ್ಷದ ವಿರುದ್ಧದ ಸೇಡಿನ ಕ್ರಮ ಅಲ್ಲ, ಇದು ವಿರೋಧದ ದನಿಯನ್ನು ಸಹಿಸುವುದಿಲ್ಲ ಎಂಬ ಎಚ್ಚರಿಕೆಯನ್ನು ದೇಶದ ವಿರೋಧ ಪಕ್ಷಗಳು ಮತ್ತು ಪ್ರಜಾಪ್ರಭುತ್ವಪ್ರೇಮಿ ನಾಗರಿಕರಿಗೆ ನರೇಂದ್ರ ಮೋದಿ ಸರ್ಕಾರ ನೀಡಿರುವ ಎಚ್ಚರಿಕೆಯಾಗಿದೆ. ದ್ವೇಷದ ರಾಜಕಾರಣವನ್ನು ಎದುರಿಸುತ್ತಲೇ ಬಂದಿರುವ ಕಾಂಗ್ರೆಸ್ ಪಕ್ಷ ಇದನ್ನು ಕೂಡಾ ಸತ್ಯ ಮತ್ತು ನ್ಯಾಯದ ಬಲದಿಂದ ಎದುರಿಸಲಿದೆ ಎಂದು ಹೇಳಿದ್ದಾರೆ.ಸ್ವಾಯತ್ತ ತನಿಖಾ ಸಂಸ್ಥೆಯಾದ ಇಡಿಯನ್ನು ವಿರೋಧ ಪಕ್ಷದ ನಾಯಕರ ವಿರುದ್ಧ ದ್ವೇಷ ಸಾಧಿಸಲು ಆಯುಧವನ್ನಾಗಿ ಬಳಸುತ್ತಾ ಬಂದಿರುವ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಈಗ



ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಹಣ ಅಕ್ರಮ ವರ್ಗಾವಣೆಯಾಗಿರುವ ಸುಳ್ಳು ಆರೋಪವನ್ನು ಬಳಸಿಕೊಂಡಿದೆ. ಇದು ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಆದೇಶದಂತೆಯೇ ಈ ದ್ವೇಷದ ರಾಜಕಾರಣ ನಡೆಯುತ್ತಿದೆ ಎನ್ನುವುದು ಸ್ಪಷ್ಟವಾಗಿದೆ. ವಿಚಾರಣೆಯ ನೆಪದಲ್ಲಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿಯವರು ಸೇರಿದಂತೆ ನಮ್ಮ ಪಕ್ಷದ ಪ್ರಮುಖ ನಾಯಕರಿಗೆ ನಿರಂತರವಾಗಿ ಮಾನಸಿಕ ಕಿರುಕುಳ ನೀಡಿ ಪೀಡಿಸಿದ ಇ.ಡಿಯು ಅದರಿಂದ ಯಾವುದೇ ಫಲ ಸಿಗದೆ ಇದ್ದಾಗ ಕಲ್ಪಿತ ಕತೆಗಳನ್ನು ಕಟ್ಟಿ ಆರೋಪ ಪಟ್ಟಿ ಸಲ್ಲಿಸಿದೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸರ್ವಾಧಿಕಾರಿ ಧೋರಣೆಯ ವಿರುದ್ಧ ಕಾಂಗ್ರೆಸ್ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತನೂ ಬೀದಿಗೆ ಇಳಿದು ಇದನ್ನು ಪ್ರತಿಭಟಿಸಲಿದ್ದಾರೆ. ಈ ಪ್ರತಿರೋಧಕ್ಕೆ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೇಲೆ ನಂಬಿಕೆ ಇಟ್ಟಿರುವ ಪ್ರತಿಯೊಬ್ಬ ಪ್ರಜೆಯೂ ಕೈಜೋಡಿಸಬೇಕಾಗಿದೆ ಎಂದು ಕರೆ ನೀಡಿದ್ದಾರೆ.

# ಜಾತಿಗಣವತಿ ವರದಿ ಪಾರದರ್ಶಕ ಅಲ್ಲ: ವರದಿ ಜಾರಿಯಾದರೆ ಸರ್ಕಾರ ಪತನ– ರಂಭಾಪುರಿ ಶ್ರೀ ಭವಿಷ್ಯ

**ಹಾವೇರಿ, ಏ.16–** ಜಾತಿಗಣವತಿ ವರದಿ ಪಾರ ದರ್ಶಕವಾಗಿ ಆಗಿಲ್ಲ ಎಂದು ಎಲ್ಲರಿಗೂ ಗೊತ್ತಿದೆ. ಹೀಗಾಗಿ ಜಾತಿಗಣತಿ ವರದಿ ಜಾರಿ ಯಾಗ ಬಾರದು. ಅಲ್ಲದೆ ವೀರಶೈವ ಲಿಂಗಾಯತ ಸಮುದಾಯದ ಪ್ರತ್ಯೇಕ ಜಾತಿಗಣತಿ ಕಾರ್ಯ ನಡೆಯಲಿದೆ ಎಂದು ರಂಭಾ ಪುರಿ ಶ್ರೀಗಳು ಹೇಳಿಕೆ ನೀಡಿದರು. ಹಾವೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ವೀರ 'ಶೈವ ಲಿಂಗಾಯತ ಜಾತಿ ಗಣತಿಯು ಶಂಕರ ಬಿದರಿ ನೇತೃತ್ವದಲ್ಲಿ ನಡೆಯಲಿದೆ. ವೀರಶೈವ ಲಿಂಗಾಯತ ಒಕ್ಕಲಿಕ ಸಮಾಜವನ್ನು ವಿಭಜಿಸಿದ್ದು ಸರಿಯಲ್ಲ. ರಾಜಕೀಯ ಲಾಭ ಕೆಲ ಸಮುದಾಯಗಳ ಓಲೈಕೆಗೆ ವರದಿ ಜಾರಿಗೆ ಯತ್ನಿಸಲಾಗಿದೆ.



ಜಾತಿಗಣತಿ ವರದಿಯನ್ನು ಮರು ಪರಿಶೀಲನೆ ಮಾಡಿ ಜಾರಿಗೊಳಿಸಬೇಕು. ಕಾಂಗ್ರೆಸ್ ಮುಸ್ಲಿಂ ಸಮುದಾಯವನ್ನು ಎತ್ತಿ ಕಟ್ಟುವ ಕೆಲಸ ಮಾಡಬಾರದು. ಬಿಜೆಪಿಯವರು ಹಿಂದೂಗಳನ್ನು ಎತ್ತಿ ಕಟ್ಟುವ ಕೆಲಸ ಮಾಡಬಾರದು ಎಂದು ಹಾವೇರಿ ತಾಲೂಕಿನ ಗುತ್ತಲ ಪಟ್ಟಣದಲ್ಲಿ ರಂಭಾಪುರ ಶ್ರೀ ಹೇಳಿಕೆ ನೀಡಿದರು. ರಾಜ್ಯದಲ್ಲಿ ಜಾತಿಗಣತಿ ವರದಿ ಜಾರಿಯಾದ್ರೆ ಸರ್ಕಾರ ಪತನವಾಗಲಿದೆ ಎಂದು ರಂಭಾಪುರಿ ಶ್ರೀಗಳು ಭವಿಷ್ಯ ನುಡಿದಿದ್ದಾರೆ. ಜಾತಿ ಗಣತಿ ಜಾರಿಯಾದ್ರೆ ಸರ್ಕಾರ ಪತನವಾಗುತ್ತೆ ಅಂತ ಕಾಂಗ್ರೆಸ್ ನಾಯಕರೇ ಹೇಳ್ತಾರೆ. ಹೀಗಾಗಿ ಜಾತಿಗಣವತಿ ವರದಿ ಪಾರದರ್ಶವಕಾಗಿ ಆಗಿಲ್ಲ ಎಂದು ಎಲ್ಲರಿಗೂ ಗೊತ್ತಿದೆ. ಹೀಗಾಗಿ ಜಾತಿಗಣತಿ ವರದಿ ಜಾರಿಯಾಗಬಾರದು ಎಂದು ಹೇಳಿದ್ದಾರೆ.

ಜಾತಿಗಣತಿ ವರದಿ ಬಗ್ಗೆ ವಿವಿಧ ಸಮುದಾಯಗಳ ಮುಖಂಡರಿಂದ ತೀವ್ರ ವಿರೋಧ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ನಾಳೆ ನಡೆಯಲಿರುವ ಸಚಿವ ಸಂಪುಟ ಸಭೆ ಮಹತ್ವ ಪಡೆದುಕೊಂಡಿದ್ದು, ನಾಳಿನ ಸಭೆಯಲ್ಲಿ ಜಾತಿಗಣತಿ ವರದಿ ಕುರಿತ ನಿರ್ಧಾರ ಮಹತ್ವ ಪಡೆದುಕೊಂಡಿದೆ.

# ತರಾತುರಿಯಲ್ಲಿ ಜಾತಿಗಣತಿ ವರದಿ ಜಾರಿ: ಸತೀಶ್ ಜಾರಕಿಹೊಳಿ ಅಸಮಾಧಾನ

**ಹುಬ್ಬಳ್ಳಿ, ಏ.16–** ಸದ್ಯ ರಾಜ್ಯದಲ್ಲಿ ಜಾತಿಗಣತಿ ವರದಿ ಜಾರಿಗೆ ಕುರಿತು ಪರ ಮತ್ತು ವಿರೋಧ ಅಭಿಪ್ರಾಯ ವ್ಯಕ್ತವಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ನಾಳೆ ವಿಶೇಷ ಸಂಪುಟ ಸಭೆ ಕರೆದಿದೆ. ನಾಳೆ ನಡೆಯುವ ಈ ಒಂದು ಸಂಪುಟ ಸಭೆಯಲ್ಲಿ ಜಾತಿಗಣತಿ ವರದಿ ಬಿಡುಗಡೆಯಾಗುವ ಕುರಿತಂತೆ ಮಹತ್ವದ ಚರ್ಚೆ ಆಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಸರ್ಕಾರ ತರಾತುರಿಯಲ್ಲಿ ಜಾತಿಗಣತಿ ವರದಿ ಜಾರಿ ಮಾಡಿದೆ ಎಂದು ಸತೀಶ್ ಜಾರಕಿಹೊಳಿ ತಿಳಿಸಿದರು. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಸಾಧಕ ಬಾಧಕಗಳ ಕುರಿತು ಚರ್ಚೆ ಮಾಡಿ ಸರ್ಕಾರ ಜಾತಿಗಣತಿ ವರದಿ ಜಾರಿ ಕುರಿತು ನಿರ್ಧರಿಸಲಿದೆ. ತರಾತುರಿಯಲ್ಲಿ ಜಾರಿ ಮಾಡಲ್ಲ. ಇದರ ಹಿಂದೆ ಯಾವುದೇ ರಾಜಕೀಯ ಲಾಭ ಆಗಲಿ ಅಥವಾ ನಷ್ಟ ಇಲ್ಲ. ಕೆಲವರು ಬಹಿರಂಗವಾಗಿ ಗುಪ್ತವಾಗಿ ಸಭೆ ನಡೆಸುತ್ತಿದ್ದಾರೆ ಈ ಬಗ್ಗೆ ಚರ್ಚಿಸಲು ವಿಶೇಷ ಅಧಿವೇಶನ ಕರೆದರೆ ಸೂಕ್ತ. ಈ ಕುರಿತು ಬಹಿರಂಗ ಚರ್ಚೆಯಾಗುವುದು ಒಳ್ಳೆಯದು ಎಂದು ತಿಳಿಸಿದರು. ಇನ್ನು ಇಂದು ಕಲಬುರ್ಗಿಯಲ್ಲಿ ಎಐಸಿಸಿ ಅಧ್ಯಕ್ಷರಾದಂತಹ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕಾಂಗ್ರೆಸ್ ಇರುವ ರಾಜ್ಯಗಳಲ್ಲಿ ಸರ್ಕಾರ ಕೆಡುವಲು ಪ್ಲಾನ್ ಮಾಡಿದ್ದಾರೆ ಎಂದು ಹೇಳಿಕೆ ನೀಡಿದ್ದರು. ಈ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಮೊದಲ ದಿನದಿಂದ ನಾನು ಸಹ



ಇದನ್ನೇ ಹೇಳುತ್ತಿದ್ದೇನೆ ಕೊನೆಯ ದಿನದವರೆಗೂ ಸರ್ಕಾರ ಕೆಡುವಲು ಯತ್ನಿಸುತ್ತಾರೆ. ನಾವು 140 ಶಾಸಕರಿದ್ದೇವೆ ಯಾವುದೇ ಆತಂಕ ಇಲ್ಲ ಎಂದು ಹುಬ್ಬಳ್ಳಿಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ ನೀಡಿದರು.

# ಮುಸ್ಲಿಮರ ಓಲೈಕೆಗಾಗಿ ರಾಜ್ಯವನ್ನು ಮಿನಿ ಪಾಕಿಸ್ತಾನ ಮಾಡಲು ಹೊರಟ ಸರ್ಕಾರ: ಅಶೋಕ್ ಆಕ್ರೋಶ

**ಬೆಳಗಾವಿ, ಏ.16–** ಸಿಎಂ ಸಿದ್ದರಾಮಯ್ಯ ಮುಸ್ಲಿಮರ ಓಲೈಕೆಗಾಗಿ ಕರ್ನಾಟಕವನ್ನು ಮಿನಿ ಪಾಕಿಸ್ತಾನವಾಗಿಸಲು ಮುಂದಾಗಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು.

ಬೆಳಗಾವಿಯಲ್ಲಿ ನಡೆದ ಬಿಜೆಪಿ ಜನಾಕ್ರೋಶ ಸಭೆಯಲ್ಲಿ ಮಾತನಾಡಿದ ಅವರು, ಇದು ಬಿಜೆಪಿಯ ಆಕ್ರೋಶದ ಯಾತ್ರೆಯಲ್ಲ, ಜನರ ಆಕ್ರೋಶದ ಯಾತ್ರೆ.ಬೆಲೆ ಏರಿಕೆಯಿಂದಾಗಿ ಜನರಿಗೆ ತೊಂದರೆಯಾಗಿರುವುದರಿಂದ ಅವರಿಗಾಗಿ ಬಿಜೆಪಿ ಹೋರಾಟ ಮಾಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯವನ್ನು ಪಾಕಿಸ್ತಾನ ಮಾಡಲು ಮುಂದಾಗಿದ್ದಾರೆ.

ಮುಸಲ್ಮಾನರು ನಂ.1 ಎಂದು ಆಗಲು ವಿದೇಶ ಕೈವಾಡ ಇದೆಯೇ ಎಂಬ ಅನುಮಾನ ಬಂದಿದೆ. ಮುಸ್ಲಿಮರ ಓಲೈಕೆಗಾಗಿ ಎಲ್ಲ ಜಾತಿಗಳನ್ನು ಒಡೆದು ಹಾಕಿದ್ದಾರೆ. ಈ ಮೂಲಕ ಮಿನಿ ಪಾಕಿಸ್ತಾನ ಸೃಷ್ಟಿಸುತ್ತಿದ್ದಾರೆ. ಭಾರತವನ್ನು ಪಾಕಿಸ್ತಾನ ಮಾಡುತ್ತೇವೆಂದು ಕೆಲವು ಭಯೋತ್ಪಾದಕರು ಪತ್ರದಲ್ಲಿ ಬರೆದು ಹಂಚಿದ್ದಾರೆ ಎಂದರು.

ಸಿಎಂ ಸಿದ್ದರಾಮಯ್ಯನವರ ಕುರ್ಚಿಗೆ ನವೆಂಬರ್‌ನಲ್ಲಿ ಬಾಂಬ್ ಫಿಕ್ಸ್ ಆಗಿದೆ. ಅವರು ನಿರ್ಗಮಿಸುವುದರಿಂದಲೇ ಈ ರೀತಿ ಮಾಡುತ್ತಿದ್ದಾರೆ. ರಾಜ್ಯದ ಬಡವರ ಮೇಲೆ ತೆರಿಗೆಯ ದಾಳಿ ಮಾಡುತ್ತಿದ್ದಾರೆ. ಕರ್ನಾಟಕ ಹಾಗೂ ತೆಲಂಗಾಣ ಕೇಂದ್ರ ಕಾಂಗ್ರೆಸ್ನ ಎಟಿಎಂ ಆಗಿದೆ. ಇದು ಕುರ್ಚಿ ಕಿತ್ತುಕೊಳ್ಳಲು ನಡೆಯುತ್ತಿರುವ ರಾಜಕೀಯ ಎಂದರು.

ರಾಜ್ಯದಲ್ಲಿ ಗೃಹ ಸಚಿವರೇ ಇಲ್ಲ. ಎಷ್ಟೇ ಅಪರಾಧ ನಡೆದರೂ ಇದು ಸಾಮಾನ್ಯ ಎಂದು ಡಾ.ಜಿ.ಪರಮೇಶ್ವರ್ ಹೇಳುತ್ತಾರೆ. ಮುಂದಿನ ಸಲ ಅಧಿಕಾರಕ್ಕೆ ಬರುವುದಿಲ್ಲ ಎಂದು ಕಾಂಗ್ರೆಸ್ ನಾಯಕರಿಗೆ ಗೊತ್ತಾಗಿದೆ. ಹಾಲು, ಆಲ್ಕೋಹಾಲ್ ಹಾಗೂ ಡೆತ್ ಸರ್ಟಿಫಿಕೇಟ್‌ಗೂ ದರ ಏರಿಸಿದ್ದಾರೆ. ಕಸಕ್ಕೂ ತೆರಿಗೆ ಹಾಕಿದ್ದಾರೆ. ಬಿಬಿಎಂಪಿ ಅಧಿಕಾರಿಗಳು ಕಸದ ಪ್ರಮಾಣ ಲೆಕ್ಕ ಹಾಕಿ ತೆರಿಗೆ ಹಾಕುತ್ತಾರೆ. ವಾಹನ ಪಾರ್ಕಿಂಗ್ ಮಾಡಿದರೂ ತೆರಿಗೆ ವಿಧಿಸುತ್ತಾರೆ ಎಂದರು.

ಬಳಿಕ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಸ್ವಾತಂತ್ರ್ಯ ಹೋರಾಟಗಾರರು ರೂಪಿಸಿದ್ದ ಪತ್ರಿಕಾ ಸಂಸ್ಥೆಗೆ 50 ಲಕ್ಷ ರೂ. ಬಂಡವಾಳ ಹೂಡಿ, ಇಡೀ 7,500 ಕೋಟಿ ರೂ. ಹಣವನ್ನು ಕಾಂಗ್ರೆಸ್ನ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಲೂಟಿ ಮಾಡಿದ್ದಾರೆ. ಇದು ಕೋರ್ಟ್ ಆದೇಶದ ಪ್ರಕಾರ ನಡೆದಿರುವ ತನಿಖೆ. ಆದರೆ ಕಾಂಗ್ರೆಸ್ ನಾಯಕರು ಇದರ ವಿರುದ್ಧ ಬಾಯಿ ಬಡಿದುಕೊಳ್ಳುತ್ತಿದ್ದಾರೆ. ಇಂತಹ ಭ್ರಷ್ಟಾಚಾರ ಮಾಡಿರುವ ಕಾಂಗ್ರೆಸ್ ಯಾವ ನೈತಿಕೆಯ ಮೇಲೆ ಬಿಜೆಪಿಯ ಮೇಲೆ ಆರೋಪ ಮಾಡುತ್ತಿದೆ? ಎಂದು ಪ್ರಶ್ನೆ ಮಾಡಿದರು.


ಸ್ವಾತಂತ್ರ್ಯ ಹೋರಾಟಗಾರರು ಕಟ್ಟಿದ ಸಂಸ್ಥೆ ಸರ್ಕಾರಕ್ಕೆ ಸೇರಬೇಕು. ಅಪರಾಧ ಮಾಡಿದ ಇವರಿಬ್ಬರಿಗೂ ಸರಿಯಾದ ಶಿಕ್ಷೆ ಯಾಗಬೇಕು. ಇಡಿ, ಸಿಬಿಐ ಸ್ವಾಯತ್ತ ಸಂಸ್ಥೆ ಗಳಾಗಿದ್ದು, ಸುಮ್ಮ ಸುಮ್ಮನೆ ಯಾರ ಮೇಲೂ ಪ್ರಕರಣ ದಾಖಲಿಸಲು ಸಾಧ್ಯವಿಲ್ಲ. ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗಲೇ ಕೋರ್ಟ್ ಅವರ ವಿರುದ್ಧ ಕ್ರಮ ವಹಿಸಿತ್ತು. ಅದು ನ್ಯಾಯಾಂಗಕ್ಕೆ ಇರುವ ಶಕ್ತಿ. ಅದೇ ರೀತಿ ಇದು ಕೂಡ ಕೋರ್ಟ್‌ನಲ್ಲಿ ವಿಚಾರಣೆಯಾಗಿ ತೀರ್ಮಾನವಾಗಿದೆ. ಈ ಪ್ರಕರಣದಲ್ಲಿ ಕ್ಲೀನ್ ಚಿಟ್ ನೀಡಲು ಕಾಂಗ್ರೆಸ್ ಪಕ್ಷಕ್ಕೆ ಯಾವ ಅಧಿಕಾರವಿದೆ? ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯನವರಿಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಎಲ್ಲ ಅಧಿಕಾರ ನೀಡಿದ್ದರು. ಅಧಿಕಾರ ಸಿಗದೇ ಹೋದಾಗ ಜೆಡಿಎಸ್ ಬಿಟ್ಟು ಕಾಂಗಸ್‌ಗೆ ಬಂದರು. ಈಗ ಡಿ.ಕೆ.ಶಿವಕುಮಾರ್ ಅಧಿಕಾರ ಕಿತ್ತುಕೊಳ್ಳಲು ಮುಂದಾಗಿದ್ದಾರೆ. ಆದ್ದರಿಂದ ಸಿಎಂ ಸಿದ್ದರಾಮಯ್ಯ ಜಾತಿ ಗಣತಿ ವರದಿ ಬಿಡುಗಡೆ ಮಾಡಲು ಮುಂದಾಗಿದ್ದಾರೆ. ಧರ್ಮ, ಜಾತಿ ಒಡೆಯುವುದರಲ್ಲಿ ಅವರು ನಂ.1 ಎಂದು ಟೀಕಿಸಿದರು.



# ಲೇಖಕಿ ವೈ.ಕೆ.ಸಂಧ್ಯಾಶರ್ಮರಿಗೆ ಕಲಾ ಪ್ರವೀಣ ಪ್ರಶಸ್ತಿ ಘೋಷಣೆ

**ಉಡುಪಿ, ಏ.16–** ಉಡುಪಿಯ ರಾಗ ಧನ ಸಂಸ್ಥೆಯು ಖ್ಯಾತ ಪತ್ರಕರ್ತರು–ಸಂಪಾದಕರೂ ಆಗಿದ್ದ ಕಲಾವಿಹಾರಿ ಎ. ಈಶ್ವರಯ್ಯ ಅವರ ಸಂಸ್ಮರಣೆಗಾಗಿ ಕೊಡಮಾಡುವ ರಾಗ ಧನ 'ಕಲಾ ಪ್ರವೀಣ' ಪ್ರಶಸ್ತಿಯನ್ನು ಈ ಬಾರಿ ಪ್ರಖ್ಯಾತ ಲೇಖಕಿ –ಹಿರಿಯ ಸಾಹಿತಿ, ರಂಗ 'ಕರ್ಮಿ, ಅಂಕಣಕಾರ್ತಿ, ನೃತ್ಯ–ನಾಟಕಗಳ ಖ್ಯಾತ ವಿಮರ್ಶಕಿಯಾದ ಶ್ರೀಮತಿ ವೈ.ಕೆ.ಸಂಧ್ಯಾ ಶರ್ಮ ಅವರಿಗೆ ದಿ. ಇದೇ ತಿಂಗಳ 19ರಂದು ಉಡುಪಿಯಲ್ಲಿ ಪ್ರದಾನ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ. 10,000 ನಗದು ಹಾಗೂ ಇತರ ಗೌರವಗಳೊಂದಿಗೆ ಕೊಡಲಾಗುತ್ತದೆ.



ಶ್ರೀಮತಿ ವೈ. ಕೆ.ಸಂಧ್ಯಾ ಶರ್ಮ ಅವರು, ಕಳೆದ ಐದೂವರೆ ದಶಕಗಳಿಂದ ನಾಡಿನ ಜನಪ್ರಿಯ ಹಾಗೂ ಪ್ರಮುಖ ಪತ್ರಿಕೆಗಳಲ್ಲಿ ನೂರಾರು ಸಣ್ಣಕಥೆ, ಲೇಖನ, ಕವಿತೆ– ಕಾದಂಬರಿಗಳು ಮತ್ತು ಹಾಸ್ಯಬರಹಗಳನ್ನು ಇಂದಿನವರೆಗೂ ನಿರಂತರ ಬರೆಯುತ್ತಲೇ ಬಂದಿದ್ದಾರೆ.

ಕರ್ನಾಟಕ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಿರಿಯ ಅಧಿಕಾರಿಗಳಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಕಳೆದ ಒಂದು ದಶಕದಿಂದ ರಂಗಭೂಮಿಯ, ನಾಟಕಗಳ ಮೌಲಿಕ ವಿಮರ್ಶೆ ಮತ್ತು ಪ್ರಬುದ್ಧ ನೃತ್ಯ ವಿಮರ್ಶಾ ಬರಹಗಳನ್ನು ಸತತವಾಗಿ ಬರೆಯುತ್ತ ಸಾಹಿತ್ಯ–ಕಲಾಲೋಕದಲ್ಲಿ ಕ್ರಿಯಾಶೀಲ ರಾಗಿದ್ದಾರೆ. ಇವರ ಕಲಾ ವಿಮರ್ಶೆಯ ಸೇವೆಯನ್ನು ಪರಿಗಣಿಸಿ ಇವರಿಗೆ 'ಕಲಾ ಪ್ರವೀಣ' ಎಂಬ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತಿದೆ.

ಶ್ರೀಮತಿ ವೈ.ಕೆ.ಸಂಧ್ಯಾ ಶರ್ಮ ಆಕಾಶವಾಣಿ ಮತ್ತು ದೂರದರ್ಶನಗಳಲ್ಲಿ ಮಾನ್ಯತೆ ಪಡೆದ ಕಲಾವಿದೆಯೂ ಕೂಡ. ಕಳೆದ 47 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವ ತಮ್ಮದೇ ಆದ 'ಸಂಧ್ಯಾ ಕಲಾವಿದರು' ಹವ್ಯಾಸೀ ನಾಟಕ ತಂಡದ ಅಧ್ಯಕ್ಷೆ. 'ಸಂಧ್ಯಾ ಪತ್ರಿಕೆ' ಎಂಬ ಅಂತ ರ್ಜಾಲದ ಸಾಂಸ್ಕೃತಿಕ ಪತ್ರಿಕೆಯ ಪ್ರಧಾನ ಸಂಪಾದಕಿ.

ಇವರ ಸಾಹಿತ್ಯ ಸಾಧನೆಗೆ ಬಂದಿರುವ ಪ್ರಶಸ್ತಿಗಳು ಅನೇಕಾನೇಕ. 2016–ರಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರಪ್ರಥಮ ಮಹಿಳಾ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಪದವಿ ವಹಿಸಿದ ಗೌರವ ಇವರದಾಗಿದೆ. ದೂರದರ್ಶನದ ನೃತ್ಯ ಕಲಾವಿದರ ಆಯ್ಕೆಯ ಆಡಿಶನ್ ಕಮಿಟಿಯ ಸದಸ್ಯರೂ ಆಗಿದ್ದಾರೆ.

# ಕರ್ನಾಟಕ ವಿಶ್ವಕರ್ಮ ಅಸೋಸಿಯೇಷನ್‌ನ ಮಹಿಳಾ ವಿಭಾಗದ 30ನೇ ವಾರ್ಷಿಕೋತ್ಸವ

**ಮುಂಬಯಿ, ಏ.16–** ಮುಂಬಯಿಯ ಹಿರಿಯ ಸಂಸ್ಥೆಗಳಲ್ಲೊಂದಾದ ಕರ್ನಾಟಕ ವಿಶ್ವಕರ್ಮ ಅಸೋಸಿಯೇಶನ್ ಇದರ ಮಹಿಳಾ ವಿಭಾಗವು ತನ್ನ 30ನೇ ವಾರ್ಷಿಕೋತ್ಸವವನ್ನು ಕಳೆದ ಭಾನುವಾರ (ಎ.13) ಮೀರಾರೋಡಿನಲ್ಲಿನ ಸಂಘದ ಸಭಾಗೃಹ "ಪ್ರಿಯಾ" ಶ್ರೀ ವಿಶ್ವಕರ್ಮ ಭವನದಲ್ಲಿ ಜರಗಿತು . ಸಂಘದ ಅಧ್ಯಕ್ಷ ರವೀಶ್ ಜಿ.ಆಚಾರ್ಯ ಅಧ್ಯಕ್ಷತೆಯಲ್ಲಿ ನೇರವೇರಿದ ಸಮಾರಂಭದಲ್ಲಿ ಗೌರವ ಅತಿಥಿಗಳಾಗಿ ಆಗಮಿಸಿದ ಶ್ರೀ ಕಾಳಿಕಾಂಬಾ ವಿಶ್ವಕರ್ಮ ಸೇವಾ ಸಂಘ ಪನ್ವೇಲ್ ಇದರ ಮಹಿಳಾವಿಭಾಗದ ಕಾರ್ಯಾಧ್ಯಕ್ಷೆ ಲಕ್ಷ್ಮಿ ಜನಾರ್ಧನ ಆಚಾರ್ಯ ಇವರು ದೀಪ ಬೆಳಗಿಸಿ ಸಮಾರಂಭಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಇವತ್ತು ನಮಗೆಲ್ಲ ಸಂತಸದ ಸಮಯ ಯಾಕಂದರೆ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಮನೆಯವರ ಬೆಂಬಲದೊಂದಿಗೆ , ಸಂಘದ ಎಲ್ಲ ಕೆಲಸ ಕಾರ್ಯಗಳಲ್ಲಿ ಕೈ ಜೋಡಿಸಿ ಸಂಘದ ಬೆನ್ನೆಲುಬಾಗಿ ನಿಂತಿರುವುದು ಬಹಳ ಖುಷಿ ತರುತ್ತದೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.



ರವೀಶ್ ಜಿ. ಆಚಾರ್ಯ ಮಾತನಾಡಿ ನಮ್ಮ ಮಹಿಳೆಯರು ಮನೆಯ ಜವಾಬ್ದಾರಿ, ಮಕ್ಕಳ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ಪೂರೈಸಿ ಸಂಘಕ್ಕಾಗಿ ಸಂಘಟಿತರಾಗಿ, ಸಂಘದ ಬೆನ್ನೆಲುಬಾಗಿ ಇಂದು 30 ವರ್ಷ ಪೂರೈಸಿರುವುದು ಮತ್ತು ಒಂದು ಉತ್ತಮ ಕಾರ್ಯಕ್ರಮವನ್ನು ಏರ್ಪಡಿಸಿರುವುದು ತುಂಬ ಸಂತಸದ ವಿಷಯ. ಇವರಿಗೆ ಹಾಗೂ ಇವರಿಗೆ ಬೆಂಬಲವಾಗಿ ನಿಂತಿರುವ ಮಹನೀಯರಿಗೆ ಸಂಘವು ಅಭಾರಿಯಾರುತ್ತದೆ. ಹಾಗೆಯೆ ಸಂಘವು ತನ್ನ 80ನೇ ವರ್ಷಾಚರಣೆಯ ಹಾದಿಯಲ್ಲಿದ್ದು ಅದಕ್ಕೂ ಇನ್ನಷ್ಟು ಮಹಿಳೆಯರು ಒಟ್ಟಾಗಿ ಒಗ್ಗಟ್ಟಿನಿಂದ ಕೆಲಸ ಮಾಡಿ ಕಾರ್ಯಕ್ರಮದ ಯಶಸ್ಸಿಗೆ ಕೈ ಜೋಡಿಸಬೇಕು ಎಂದು ಎಲ್ಲರಿಗೂ ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಸಮಾಜದ ಯುವ ಪ್ರತಿಭೆಗಳನ್ನು ಗುರುತಿಸುವ ನಿಟ್ಟಿನಲ್ಲಿ, ಕ್ರೀಡೆಯಲ್ಲಿ ರಾಜ್ಯಮಟ್ಟವನ್ನು ಪ್ರತಿನಿಧಿಸಿರುವ ಕುಮಾರಿ ಶ್ರೇಯಾ ಗಣೇಶ್ ಆಚಾರ್ಯ ಹಾಗು ಇಕಾನಾಮಿಕ್ಸ್ ಟೈಮ್ಸ್ ವಾರ್ಷಿಕ ಪ್ರಶಸ್ತಿ ಪಡೆದ ನ್ಯಾಯವಾದಿ ಮೀನಾಕ್ಷಿ ಆಚಾರ್ಯ ಇವರುಗಳನ್ನು ಗೌರವಿಸಲಾಯಿತು. ಸಮ್ಮಾನ ಸ್ವೀಕರಿಸಿದ ಕಲ್ಪನಾ ಆಚಾರ್ಯ ಮತ್ತು ಶುಭ ಸುನಿಲ್ ಆಚಾರ್ಯರು ತಮ್ಮ ಅನಿಸಿಕೆ ಗಳನ್ನು ಹಂಚಿಕೊಂಡರು. ಇದೇ ಸಂದರ್ಭದಲ್ಲಿ ಸಂಘದ ಮಾಜಿ ಅಧ್ಯಕ್ಷರುಗಳಾದ ಎಂ ಎ ಆಚಾರ್ಯ, ನಿಟ್ಟೆ ದಾಮೋದರ ಆಚಾರ್ಯ, ಗೋಪಾಲಕೃಷ್ಣ ಟಿ. ಆಚಾರ್ಯ ಹಾಗೂ ನಿಕಟ ಪೂರ್ವ ಅಧ್ಯಕ್ಷ ಕಲ್ಯಾಣಪುರ ಸದಾನಂದ ಆಚಾರ್ಯ ಅವರುಗಳನ್ನು ಮಹಿಳಾ ವಿಭಾಗದ ವತಿಯಿಂದ ಗೌರವಿಸಲಾಯಿತು.

ಸಾಂಸ್ಕೃತಿಕ ಕಾರ್ಯಕ್ರಮಗಳ ಅಂಗವಾಗಿ ಸದಸ್ಯರುಗಳ ಮಕ್ಕಳು ಹಾಗು ಯುವ ಮತ್ತು ಮಹಿಳಾ ವಿಭಾಗದ ಕಾರ್ಯಕರ್ತೆಯರುಗಳು ವೈವಿಧ್ಯಮಯ ನೃತ್ಯ ಪ್ರದರ್ಶನಗಳನ್ನು ಪ್ರಸ್ತುತಪಡಿಸಿದರು. ಮುಂಬಯಿಯ ಹೆಸರಾಂತ ನಾಟಕಕಾರ, ಹಾಸ್ಯಚಕ್ರವರ್ತಿ ಬಿರುದಾಂಕಿತ ಶ್ರೀ ಅಶೋಕ್ ಕುಮಾರ್ ಕೊಡ್ಯಡ್ಕ ನಿರ್ದೇಶನದ " ಸರಕಾರಿ ಶಾಲೆಯ ಕಿರಿ ಕಿರಿ ಮಕ್ಕಳು" ಎಂಬ ಹಾಸ್ಯಮಯ ಕಿರು ಪ್ರಹಸನವನ್ನು ಮಹಿಳಾ ವಿಭಾಗದ ಸದಸ್ಯೆಯರು ಪ್ರದರ್ಶಿಸಿದರು.

ಸಂಘದ ಹಿರಿಯ ಸದಸ್ಯರುಗಳು ಮಹಿಳೆಯರು, ಕಾರ್ಯಕಾರಿ ಸಮಿತಿಯ ಸದಸ್ಯರುಗಳು ಮಕ್ಕಳು ಉಪಸ್ಥಿತರಿದ್ದರು.

ಮಹಿಳಾ ವಿಭಾಗದ ಸದಸ್ಯೆಯರು ಪ್ರಾರ್ಥನ ಗೈದರು. ಮಹಿಳಾ ವಿಭಾಗದ ಕಾರ್ಯಾಧ್ಯಕ್ಷೆ ಶ್ರೀಮತಿ ಸುಜಾತಾ ಗೋಪಾಲ್ ಆಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿ ಮಹಿಳಾ ವಿಭಾಗವು ನಡೆದು ಬಂದ ಹಾದಿಯ ಬಗ್ಗೆ ಮತ್ತು ಯುವ ವಿಭಾಗದೊಂದಿಗೊಡಗೂಡಿ ಮಾಡಿರುವ ಕೆಲಸ ಕಾರ್ಯಗಳು ಬಗ್ಗೆ ಸಂಪೂರ್ಣ ವಿವರಣೆ ನೀಡಿದರು ಮತ್ತು ಎಲ್ಲರನ್ನು ಸ್ವಾಗತಿಸಿದರು. ಮಹಿಳಾ ವಿಭಾಗದ ಮಹಿಳಾ ವಿಭಾದ ಸಂಚಾಲಕರುಗಳಾದ ರಾಜೇಶ್ವರಿ ಸತೀಶ್ ಆಚಾರ್ಯ ಹಾಗು ಅಮಿತಾ ಧರ್ಮಜ ಆಚಾರ್ಯ ಅವರು ಜತೆಯಾಗಿ ಕಾರ್ಯಕ್ರಮ ನಿರೂಪಿಸಿದರು. ಧನ್ಯವಾದಗೈದರು.

Managing Editor : SANDEEP RENU 99728 72151 | Executive Editor : SHARAT JYOTSNA B.R 9886766483 vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ರಾಜ್ಯ ಕಾಂಗ್ರೆಸ್ ಘೋಷಿಸಿದ ಕಾರ್ಯಕ್ರಮಗಳೆಲ್ಲಾ ಜಾರಿ ಆಗುತ್ತಿರುವುದು ಜನರಿಗೆ ಕಾಣುತ್ತಿದೆ, ಬಿಜೆಪಿ ಕಣ್ಣಿಗೆ ಮಾತ್ರ ಕಾಣುತ್ತಿಲ್ಲ: ಸಿ.ಎಂ. ವ್ಯಂಗ್ಯ

**ಬಿಜೆಪಿಯವರು ಕಲಬುರಗಿಗೆ ಬಂದು ಕಣ್ಣು ತೆರೆದು ನೋಡಿದರೆ ಅಭಿವೃದ್ಧಿಯ ಮಹಾಪೂರ ಕಾಣಿಸುತ್ತದೆ: ಸಿಎಂ**



**ಕಲಬುರಗಿ ಏ 16:** ಪ್ರಣಾಳಿಕೆಯಲ್ಲಿ, ಬಜೆಟ್ ನಲ್ಲಿ ಘೋಷಿಸಿದ ಕಾರ್ಯಕ್ರಮಗಳೆಲ್ಲಾ ಜಾರಿ ಆಗುತ್ತಿರುವುದು ಜನರ ಕಣ್ಣಿಗೆ ಕಾಣುತ್ತಿದೆ, ಬಿಜೆಪಿ ಕಣ್ಣಿಗೆ ಮಾತ್ರ ಕಾಣುತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಕಲಬುರಗಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ, ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ 216.53 ಕೋಟಿ ವೆಚ್ಚದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ 6.20 ಕೋಟಿ ವೆಚ್ಚದ ಬ್ರಾಕಿಥೆರಪಿ ವಿಕೀರಣ ಚಿಕಿತ್ಸೆ ಘಟಕವನ್ನು ಉದ್ಘಾಟಿಸಿ ಹಾಗೂ 12 ಬೃಹತ್ ಮೊತ್ತದ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು ಹಾಕಿ ಮಾತನಾಡಿದರು.

ಪ್ರತೀ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಇರಲೇಬೇಕು ಎನ್ನುವುದು ನಮ್ಮ ಸರ್ಕಾರದ ಗುರಿ. ಬಡವರಿಗೂ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು ಎನ್ನುವ ಉದ್ದೇಶದಿಂದ ಈ ಘೋಷಣೆ ಮಾಡಿದ್ದು ಒಂದೊಂದೇ ಜಿಲ್ಲೆಯಲ್ಲಿ ಇವೆಲ್ಲವೂ ನೆರವೇರುತ್ತಿವೆ ಎಂದರು. ಅಭಿವೃದ್ಧಿಗೆ ಸರ್ಕಾರದ ಬಳಿ ಹಣ ಇಲ್ಲ ಎನ್ನುವ ಬಿಜೆಪಿಯವರು ಕಲಬುರಗಿಗೆ ಬಂದು ಕಣ್ಣು ತೆರೆದು ನೋಡಿದರೆ ಅಭಿವೃದ್ಧಿಯ ಮಹಾಪೂರ ಕಾಣಿಸುತ್ತದೆ. ಮಲ್ಲಿಕಾರ್ಜುನ ಖರ್ಗೆ ಅವರು, ಪ್ರಿಯಾಂಕ್ ಖರ್ಗೆ ಅವರು ಮತ್ತು ಶರಣ ಪ್ರಕಾಶ್ ಪಾಟೀಲ್ ಅವರು ಯಾವ ಮಟ್ಟದ ಅಭಿವೃದ್ಧಿ ಮಾಡುತ್ತಿದ್ದಾರೆ ಎನ್ನುವುದನ್ನು ಕಲಬುರಗಿಗೆ ಬಂದು ನೋಡಲಿ. ಸರ್ಕಾರದ ಘೋಷಿಸಿದ್ದ, ಬಜೆಟ್ ನಲ್ಲಿ ತಿಳಿಸಿದ್ದ ಎಲ್ಲವೂ ಈ ಜಿಲ್ಲೆಯಲ್ಲಿ ಜಾರಿ ಆಗುತ್ತಿದೆ ಎಂದು ಒಂದೊಂದಾಗಿ ಎಲ್ಲಾ ಯೋಜನೆಗಳನ್ನೂ ಉಲ್ಲೇಖಿಸಿ ಮಾತನಾಡಿದರು.

ಅಭಿವೃದ್ಧಿಗೆ ನಮ್ಮ ಸರ್ಕಾರದಲ್ಲಿ ಹಣಕ್ಕೆ ಕೊರತೆ ಇಲ್ಲ. ಎಲ್ಲಾ ವರ್ಗದ ಜನರಿಗೆ, ಅವಕಾಶಗಳಿಂದ ವಂಚಿತರಾದ ಜನರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಲು ನಮ್ಮ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದರು.

**ಸ್ನೇಹಮಯಿ ಕೃಷ್ಣ ಅರ್ಜಿ ಪುರಸ್ಕರಿಸಿದ ಹೈಕೋರ್ಟ್**

# ಸಿಎಂ, ಇತರರಿಗೆ ನೋಟೀಸ್ ಜಾರಿ



**ಬೆಂಗಳೂರು, ಏ.16:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ-ಮುಡಾ ಹಗರಣದ ತನಿಖೆಯನ್ನು ಸಿಬಿಐಗೆ ವಹಿಸಬೇಕು ಎಂದು ಕೋರಿ ದೂರುದಾರ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿಗೆ ಸಂಬಂಧಿಸಿದಂತೆ ಹೈಕೋರ್ಟ್ ಸಿಎಂ ಸಿದ್ದರಾಮಯ್ಯ ಸೇರಿದಂತೆ ಇತರರಿಗೆ ನೋಟಿಸ್ ಜಾರಿ ಮಾಡಿದೆ.

ಮುಡಾ ಹಗರಣದ ತನಿಖೆ ಸಿಬಿಐಗೆ ನೀಡುವಂತೆ ಕೋರಿ ಸ್ನೇಹಮಯಿ ಕೃಷ್ಣ ಈ ಹಿಂದೆ ಹೈಕೋರ್ಟ್ ಏಕಸದಸ್ಯ ಪೀಠಕ್ಕೆ ತಕರಾರು ಅರ್ಜಿ ಸಲ್ಲಿಸಿದ್ದರು. ಆದರೆ ಏಕಸದಸ್ಯ ಪೀಠ ಅರ್ಜಿ ವಜಾಗೊಳಿಸಿತ್ತು. ಈ ಕ್ರಮ ಪ್ರಶ್ನಿಸಿ ಸ್ನೇಹಮಯಿ ಕೃಷ್ಣ ಹೈಕೋರ್ಟ್ ದ್ವಿಸದಸ್ಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ದ್ವಿಸದಸ್ಯ ಪೀಠ, ನೋಟಿಸ್ ಜಾರಿ ಮಾಡಿದೆ. ಪ್ರಕರಣದಲ್ಲಿ ಪ್ರತಿವಾದಿಗಳಾಗಿರುವ ಕೇಂದ್ರ ಸರ್ಕಾರ, ಸಿಬಿಐ, ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ, ಭಾವಮೈದುನ ಮಲ್ಲಿಕಾರ್ಜುನಸ್ವಾಮಿ, ಜಮೀನು ಮೂಲ ಮಾಲೀಕ ದೇವರಾಜು ಅವರಿಗೆ ನೋಟಿಸ್ ಜಾರಿ ಮಾಡಿದೆ. ವಿಚಾರಣೆಯನ್ನು ಏಪ್ರಿಲ್ 28ಕ್ಕೆ ಮುಂದೂಡಿದೆ.

# ಆರೋಪಿ ಎನ್‌ಕೌಂಟರ್: ಮರಣೋತ್ತರ ಪರೀಕ್ಷೆ ಸಂಪೂರ್ಣ: ಶವ ಹಸ್ತಾಂತರಕ್ಕೆ ವಾರಸುದಾರರಿಗೆ ಕಾಯ್ದಿರಿಸಲಾಗಿದೆ.

**ಹುಬ್ಬಳ್ಳಿ, ಏ.16–** ಕಳೆದ ನಾಲ್ಕು ದಿನಗಳ ಹಿಂದೆ ಅಪ್ರಾಪ್ತ ಬಾಲಕಿಯನ್ನು ಅಪಹರಿಸಿ ಅತ್ಯಾಚಾರಕ್ಕೆ ಯತ್ನಿಸಿ ಕೊಲೆ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯ ಮರಣೋತ್ತರ ಪರೀಕ್ಷೆ ನಡೆಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ಹೇಳಿದರು. ನಗರದಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರೋಪಿಯನ್ನು ಬಂಧಿಸಲು ಪೊಲೀಸರು ಹೋಗಿದ್ದಾಗ, ತಪ್ಪಿಸಿಕೊಳ್ಳುವ ವೇಳೆ ಗುಂಡು ತಗುಲಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ. ಇಂತಹ ಪ್ರಕರಣದಲ್ಲಿ ಏನೆಲ್ಲಾ ಕ್ರಮ ಕೈಗೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಸೂಚನೆ ಇದೆ ಅದರಂತೆ ನಡೆದಿದೆ ಎಂದರು.

ಈಗ ಮರಣೋತ್ತರ ಪರೀಕ್ಷೆ ಮುಂದುವರೆದಿದ್ದು ನ್ಯಾಯಾಗ ತನಿಖೆ ಮಾಡಬೇಕೆಂದಿತ್ತು. ಅದು ಕೂಡ ಆಗುತ್ತಿದೆ. ಆರೋಪಿಯ ಮಾಹಿತಿ ಪರಿಶೀಲನೆ ಮಾಡಲಾಗುತ್ತಿದೆ, ಆತ ವಾಸವಿದ್ದ ಸ್ಥಳದಲ್ಲಿ ಹಾಗೂ ಆತ ಸಂಚರಿಸಿದ ಎಲ್ಲಾ ಕಡೆ ಮಾಹಿತಿ ಕಲೆ ಹಾಕಲಾಗುತ್ತಿದೆ ಎಂದು ಹೇಳಿದರು. ಪೋಸ್ಟ್ ಮಾರ್ಟಂ ಆದ ಮೇಲೆ ಅವರಿಗೆ ಸಂಬಂಧ ಪಟ್ಟವರನ್ನ ಹುಡುಕುವ ಕೆಲಸ ಮಾಡುತ್ತಿದ್ದೇವೆ. ಎಲ್ಲಾ ಭಾಷೆಗಳಲ್ಲಿ ಆರೋಪಿಯ ವಿವರಗಳನ್ನು ಬೇರೆ ಬೇರೆ ಕಡೆ ಕಳಿಸಲಾಗಿದೆ. ಆತ ಪಾಟ್ನಾದವನಾಗಿದ್ದಾನೆ ಎಂಬ ಮಾಹಿತಿ ಇದೆ. ಆತನ ಸಂಬಂಧಿಕರು ಪತ್ತೆಯಾಗದಿದ್ದರೆ ಅಂತ್ಯಕ್ರಿಯೆ ಮಾಡಲಾಗುತ್ತದೆ ಎಂದು ತಿಳಿಸಿದರು.



ಪೊಲೀಸ್ ಆಯುಕ್ತ ಎನ್.ಶಶಿಕುಮಾರ್

ಸುಪ್ರೀಂ ಕೋರ್ಟ್ ಮಾರ್ಗಸೂಚಿ ಪ್ರಕಾರ ಚಾಚೂ ತಪ್ಪದೇ ಪಾಲನೆ ಮಾಡಲಾಗುತ್ತಿದೆ. ಅವರ ಕುಟುಂಬಸ್ಥರು ಬರುವ ತನಕ ಕೆಲವು ದಿನಗಳ ಕಾಲ ಕೋಲ್ಡ್ ಸ್ಟೋರೇಜ್‌ನಲ್ಲಿ ಶವ ಇರಿಸಲಾಗುತ್ತೆ. ಇಷ್ಟಾದರೂ ಆತನ ಸಂಬಂಧಿಕರು ಬಾರದಿದ್ದರೆ ಮಣ್ಣು ಮಾಡುವ ಪ್ರಕ್ರಿಯೆಯನ್ನು ಕಾನೂನು ತಜ್ಞರ ಸಲಹೆ ಪಡೆದು ಮುಂದುವರೆಯುತ್ತೇವೆ ಸಾರ್ವಜನಿಕ ಹಿತಾಸಕ್ತಿ ಬಗ್ಗೆ ಹೆಚ್ಚಿನ ಮಾಹಿತಿ ಲಭ್ಯ ಆಗಿಲ್ಲ ಏನೇ ಕೇಳಿದರು ಉತ್ತರ ನೀಡಲು ಸಿದ್ದವಿದ್ದೇವೆ ಎಂದರು.

**ಬರೀ ಮುಸ್ಲಿಮರಿಗೇ ಮೀಸಲಾತಿ ಏಕೆ: ಹಿಂದೂಗಳಿಗೆ ಮಣ್ಣೆರೆಚುವ ತಾರತಮ್ಯವೇಕೆ**

# ಕಾಂಗ್ರೆಸ್‌ನ ಹಿಂದೂ ವಿರೋಧಿ ನಿಲುವಿಗೆ ಬಿ.ವೈ.ವಿಜಯೇಂದ್ರ ಕಿಡಿ

**ಬೆಳಗಾವಿ, ಏ.16:** ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರಿ ಗುತ್ತಿಗೆಗಳಲ್ಲಿ ಮುಸ್ಲಿಮರಿಗೆ ಮೀಸಲಾತಿ ಮತ್ತು ವಿದೇಶದಲ್ಲಿ ಶಿಕ್ಷಣಕ್ಕಾಗಿ ಮುಸ್ಲಿಂ ವಿದ್ಯಾರ್ಥಿಗಳಿಗೆ ವರ್ಷಕ್ಕೆ 30 ಲಕ್ಷ ನೆರವು ನೀಡುವ ಮೂಲಕ ಹಿಂದು ವಿರೋಧಿ ನಿಲುವು ತೆಗೆದುಕೊಂಡಿದ್ದಾರೆ. ಆದರೆ, ಅದೇ ಸೌಲಭ್ಯಗಳನ್ನು ಹಿಂದುಗಳಿಗೆ ನೀಡಿಲ್ಲ. ಹಾಗಾಗಿ ಕಾಂಗ್ರೆಸ್ ತನ್ನ ಹಿಂದು ವಿರೋಧಿ ನಿಲುವಿಗೆ ಉತ್ತರ ನೀಡಬೇಕು ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಒತ್ತಾಯಿಸಿದರು. ಇಲ್ಲಿ ಬಿಜೆಪಿ ಬುಧವಾರ ಹಮ್ಮಿಕೊಂಡಿದ್ದ ಎರಡನೇ ಹಂತದ ಜನಾಕ್ರೋಶ ಯಾತ್ರೆಯ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಹಿಂದುಗಳು ಮುಖ್ಯಮಂತ್ರಿಗೆ ತಕ್ಕ ಉತ್ತರ ನೀಡುತ್ತಾರೆ. ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಕಾಂಗ್ರೆಸ್‌ನ ದುರಾಡಳಿತ ಹಾಗೂ 50ಕ್ಕೂ ಅಧಿಕ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನರು ಅನುಭವಿಸುತ್ತಿರುವ ಸಮಸ್ಯೆಗಳನ್ನು ಬೆಳಕಿಗೆ ತರಲು ಈ ಯಾತ್ರೆ ಆಯೋಜಿಸಿದ್ದೇವೆ. ಸಿದ್ದರಾಮಯ್ಯ ಅವರು ಕಾಂಗ್ರೆಸ್‌ನ ಭ್ರಷ್ಟಾಚಾರ ಪರಂಪರೆ ಮುಂದುವರಿಸಿದ್ದಾರೆ ಎಂದು ದೂರಿದರು. ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ, ಆಲೂಗಡ್ಡೆಯನ್ನು ಚಿನ್ನವಾಗಿ ಪರಿವರ್ತಿಸುವ ವ್ಯವಹಾರ ಮಾದರಿ ಬಗ್ಗೆ ರಾಹುಲ್ ಗಾಂಧಿ ತಮ್ಮ ಚುನಾವಣೆ ಭಾಷಣಗಳಲ್ಲಿ ತಿಳಿಸಿದ್ದರು. ಆದರೆ, ಕಾಂಗ್ರೆಸ್ ಅಧಿಕಾರಕ್ಕೆ ಬರಲಿಲ್ಲ. ಅವರ ವ್ಯವಹಾರ ಮಾದರಿಯನ್ನೂ ನೋಡಲಿಲ್ಲ. ಆದರೆ, ನ್ಯಾಷನಲ್ ಹೆರಾಲ್ಡ್ ಪ್ರಕರಣ ಆ ಮಾದರಿಯಂತೆ ಕಾಣುತ್ತಿದೆ ಎಂದು ವ್ಯಂಗ್ಯವಾಡಿದರು. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಈಗ ಸಮಾಜದ ವಿಭಜನೆಗಾಗಿ ಕಾಂಗ್ರೆಸ್ ಸರ್ಕಾರವು ಜಾತಿ ಗಣತಿ ವರದಿ ಬಳಸಿಕೊಳ್ಳುತ್ತಿದೆ. ರಾಜ್ಯದ ಜನಸಂಖ್ಯೆಯಲ್ಲಿ ಶೇ 24ರಷ್ಟು ಪರಿಶಿಷ್ಟರಿದ್ದರೂ, ಮುಸ್ಲಿಮರನ್ನು ಅಗ್ರಸ್ಥಾನದಲ್ಲಿ ತೋರಿಸುವ ಮೂಲಕ ರಾಜ್ಯವನ್ನು ಮಿನಿ ಪಾಕಿಸ್ತಾನ ಮಾಡಲು ಹೊರಟಿದೆ. ಈ ಹುನ್ನಾರದಲ್ಲಿ ವಿದೇಶಿ ಕೈಗಳ ಕೈವಾಡ ಇರುವ ಸಂಶಯ ವ್ಯಕ್ತವಾಗುತ್ತಿದೆ ಎಂದು ಆರೋಪಿಸಿದರು. ಮುಖ್ಯಮಂತ್ರಿ ಸ್ಥಾನಕ್ಕೆ ಎರಡೂವರೆ ವರ್ಷ ಸಮಯ ನಿಗದಿಯಾಗಿದೆ. ಮುಂದೆ ತಾವು ಅಧಿಕಾರದಲ್ಲಿ ಇರುವುದಿಲ್ಲ ಎಂದು ಸಿದ್ದರಾಮಯ್ಯ, ಈಗ ಲೂಟಿ ಮಾಡಲು ಮುಂದಾಗಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಿದ್ದರಾಮಯ್ಯ ಈಗ ಬಹಳ ಸುಳ್ಳು ಹೇಳುತ್ತಿದ್ದಾರೆ. ಈ ಬಗ್ಗೆ ವಿಚಾರಿಸಿದರೆ, ಅಧಿಕಾರದಲ್ಲಿ ಇರುವುದಕ್ಕಾಗಿ ಸುಳ್ಳು ಹೇಳಲೇಬೇಕಲ್ವ. ಇಲ್ಲದಿದ್ದರೆ ಕಾಂಗ್ರೆಸ್ಸವರು ಸುಮ್ಮನಿರುತ್ತಾರ ಎನ್ನುವ ರೀತಿ ಮಾತನಾಡುತ್ತಿದ್ದಾರೆ. ಛೋಟಾ ಖರ್ಗೆ(ಪ್ರಿಯಾಂಕ್ ಖರ್ಗೆ) ಹೇಳಿದ ಮಾತು ಕೇಳಿ, ಚುನಾವಣೆಯಲ್ಲಿ ಅಂಬೇಡ್ಕರ ಅವರನ್ನು ಸೋಲಿಸಿದ್ದು ವೀರ ಸಾವರ್ಕರ್ ಎಂದು ಅಂಬೇಡ್ಕರ ಅವರೇ ಬರೆದಿದ್ದಾರೆ ಎಂದಿದ್ದಾರೆ. ಇದಕ್ಕಿಂತ ಅಪ್ಪಟ ಸುಳ್ಳು ಬೇರೇನಾದರೂ ಇದೆಯೇ ಎಂದು ಪ್ರಶ್ನಿಸಿದರು.ಶಾಸಕರಾದ ದುರ್ಯೋಧನ ಐಹೊಳೆ, ನಿಖಿಲ್ ಕತ್ತಿ, ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್, ಮುಖಂಡರಾದ ಅನಿಲ ಬೆನಕೆ, ಸಂಜಯ ಪಾಟೀಲ, ಮಹಾಂತೇಶ ಕವಟಗಿಮಠ, ಪಿ.ರಾಜೀವ್, ಸುಭಾಷ ಪಾಟೀಲ, ಗೀತಾ ಸುತಾರ ಇತರರಿದ್ದರು.



ರಾಜ್ಯ ಸರ್ಕಾರದ ವಿರುದ್ಧ ಬುಧವಾರ ಬೆಳಗಾವಿಯಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಬಿಜೆಪಿ ನಾಯಕರು 'ಜನಕ್ರೋಶ ಯಾತ್ರೆ' ನಡೆಸಿದರು

**ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ನಿಮ್ಮ ಕುರ್ಚಿಯನ್ನು ಭದ್ರಪಡಿಸಿಕೊಳ್ಳಲು ಜಾತಿ, ಜಾತಿಗಳ ನಡುವೆ ಧರ್ಮ, ಧರ್ಮಗಳ ನಡುವೆ ಬಿರುಕು ಮೂಡಿಸುವ ಕೆಲಸವನ್ನು ಇನ್ನಾದರೂ ಕೈ ಬಿಡಿ. ಇಲ್ಲವಾದರೆ ಇಷ್ಟರಲ್ಲೇ ರಾಜ್ಯದ ಜನತೆಯೇ ದಂಗೆ ಎದ್ದು ನಿಮಗೆ ಬುದ್ಧಿ ಕಲಿಸುವ ಕಾಲ ದೂರವಿಲ್ಲ ಎಂಬುದನ್ನು ನೀವು ಮರೆಯದಿರಿ. ಕರ್ನಾಟಕ ರಾಜ್ಯದ ಒಟ್ಟು ಜನ ಕಲ್ಯಾಣದ ಬಗ್ಗೆ ಚಿಂತಿಸುವ ಬದಲು ಮತ ಬ್ಯಾಂಕನ್ನು ಕೇಂದ್ರೀಕರಿಸಿ, ಅಲುಗಾಡುತ್ತಿರುವ ನಿಮ್ಮ ಕುರ್ಚಿ ಉಳಿಸಿಕೊಳ್ಳಲು ಜಾತಿಗಣತಿಯ ಹೆಸರಿನಲ್ಲಿ ಗೊಂದಲಗಳನ್ನು ಸೃಷ್ಟಿಸಿ ಸಮಾಜವನ್ನು ಛಿದ್ರ ಮಾಡಲು ಹೊರಟಿರುವ ನಿಮಗೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ.**

# ಜಾತಿಗಣತಿ ವರದಿ ಕೈಬಿಡದಿದ್ದರೆ ನಿರ್ಮಲಾನಂದ ಸ್ವಾಮೀಜಿ ನೇತೃತ್ವದಲ್ಲಿ ಉಗ್ರ ಹೋರಾಟ

**ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಎಚ್ಚರಿಕೆ**

**ಬೆಂಗಳೂರು, ಏ.16:** ಸಂಶಯಾಸ್ಪದವಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ವರದಿ ಸಿದ್ದಪಡಿಸಿರುವುದನ್ನು ಕೈಬಿಟ್ಟು ಮತ್ತೊಮ್ಮೆ ವಿಶ್ವಾಸಯುತ ಸಮೀಕ್ಷೆ ನಡೆಸಬೇಕೆಂದು ರಾಜ್ಯ ಒಕ್ಕಲಿಗರ ಸಂಘ ಮತ್ತು ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಆಗ್ರಹಿಸಿದೆ.

ಇಲ್ಲವಾದಲ್ಲಿ ಆದಿ ಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿ ಸೇರಿದಂತೆ ಸಮುದಾಯದ ಪ್ರಮುಖರ ಜೊತೆಗೂಡಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಡಾ.ಜಿ.ಎನ್. ಶ್ರೀಕಂಠಯ್ಯ, ಪ್ರಧಾನ ಕಾರ್ಯದರ್ಶಿ ಆಡಿಟರ್ ನಾಗರಾಜ್ ಯಲಚವಾಡಿ, ಈಗ ಬಿಡುಗಡೆ ಮಾಡಿರುವ ಸಮೀಕ್ಷೆಯ ವರದಿಯು ಸಮಾಜದ ನಾಗರೀಕರ ವಿಶ್ವಾಸ ಕಳೆದುಕೊಂಡಿದೆ. ಸಮೀಕ್ಷೆ ಕೈಗೊಳ್ಳುವಾಗ ರಾಜ್ಯದ ಎಲ್ಲಾ ನಾಗರೀಕರ ಮಾಹಿತಿಯನ್ನು ಸಂಗ್ರಹಿಸಿಲ್ಲ. ಸಕಾಲದಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಲು ವಿಫಲವಾಗಿದೆ ಎಂದರು. 2014-2015 ರಲ್ಲಿ ರಾಜ್ಯದ ಒಟ್ಟು ಜನಸಂಖ್ಯೆಯ ಶೇ.90 ರಷ್ಟು ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಿದ್ದು. ಪೂರ್ಣ ಪ್ರಮಾಣದಲ್ಲಿ ಸಮೀಕ್ಷೆ ಕೈಗೊಂಡಿಲ್ಲ. ಹಿಂದಿನ 10 ವರ್ಷಗಳಲ್ಲಿ ರಾಜ್ಯದಲ್ಲಿ ಜನಸಂಖ್ಯೆ ಗಣನೀಯ ಏರಿಕೆ ಕಂಡಿದೆ ಹಾಗೂ ಇತರೆ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಯಲ್ಲಿ ಬಹಳಷ್ಟು ಬದಲಾವಣೆ ಆಗಿದೆ. ಈ ಅಂಶಗಳನ್ನು ಸಮೀಕ್ಷೆ ಒಳಗೊಂಡಿಲ್ಲ ಎಂದು ಹೇಳಿದರು.

ಈ ಹಿನ್ನಲೆಯಲ್ಲಿ 10 ವರ್ಷಗಳ ಹಿಂದಿನ ವರದಿ ಸ್ವೀಕರಿಸಿ ಮಾಡುವ ತೀರ್ಮಾನಗಳು ವಾಸ್ತವತೆಗೆ ದೂರವಿದ್ದು ಅಪ್ರಸ್ತುತವಾಗಿವೆ. ನಿಖರತೆ ಕಾಪಾಡಲು ಸಮೀಕ್ಷೆ ವೇಳೆ ಆಧಾರ್ ಲಿಂಕ್ ಮಾಡಿಲ್ಲ. ಸಚಿವ ಸಂಪುಟದಲ್ಲಿ ಇತರೆ ಹಿಂದುಳಿದ ವರ್ಗಗಳ ಸಾಮಾಜಿಕ ಮತು ಶೈಕ್ಷಣಿಕ ಸಮೀಕ್ಷೆ-2015ರ ದತ್ತಾಂಶಗಳ ಅಧ್ಯಯನ ವರದಿ-2024ರ ಮುಚ್ಚಿದ ಲಕೋಟೆಯನ್ನು ತೆರದಿರುವುದಾಗಿ ಪತ್ರಿಕೆಗಳಲ್ಲಿ ವರದಿಯಾಗಿದೆ.

ಸಮೀಕ್ಷೆಯಲ್ಲಿ ಶೇಕಡ 15% ರಿಂದ 16% ರಷ್ಟು ಇರುವ ಒಕ್ಕಲಿಗ ಜನಸಂಖ್ಯೆಯನ್ನು ಅವೈಜ್ಞಾನಿಕ ಸಮೀಕ್ಷೆಯಿಂದಾಗಿ ಶೇ.10.3% ಎಂದು ನಮೂದಿಸಲಾಗಿದೆ. ವರದಿಗೆ ಪ್ರತಿಯೊಬ್ಬರ ಸಹಿಯನ್ನು ಪಡೆದಿದ್ದರೆ ಈ ರೀತಿ ತಪ್ಪುಗಳು ಆಗುತ್ತಿರಲಿಲ್ಲ. ಅವೈಜ್ಞಾನಿಕವಾಗಿ ಜಾತಿ ಜನಗಣತಿ ಮಾಡಿರುವುದರಿಂದ ಒಕ್ಕಲಿಗ ಜನಸಂಖ್ಯೆಯನ್ನು ಕಡಿಮೆ ತೋರಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

# ಛತ್ತೀಸ್‌ಗಢದಲ್ಲಿ ಎನ್‌ಕೌಂಟರ್ ಇಬ್ಬರು ಮಾವೋವಾದಿಗಳ ಹತ್ಯೆ

**ರಾಯ್ಪುರ, ಏ.16:** ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ 13 ಲಕ್ಷ ರೂ.ಗಳ ಸಾಮೂಹಿಕ ಬಹುಮಾನವನ್ನು ಹೊಂದಿದ್ದ ಇಬ್ಬರು ಕಟ್ಟಾ ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಮಂಗಳವಾರ ಸಂಜೆ ಕೊಂಡಗಾಂವ್ ಮತ್ತು ನಾರಾಯಣಪುರ ಜಿಲ್ಲೆಗಳ ಗಡಿಯಲ್ಲಿರುವ ಕಿಲಾಮ್-ಬರ್ಗಮ್ ಗ್ರಾಮಗಳ ಕಾಡಿನಲ್ಲಿ ಭದ್ರತಾ ಸಿಬ್ಬಂದಿಯ ಜಂಟಿ ತಂಡವು ನಕ್ಸಲೈಟ್ ವಿರೋಧಿ ಕಾರ್ಯಾಚರಣೆಗೆ ಹೊರಟಿದ್ದಾಗ ಗುಂಡಿನ ಚಕಮಕಿ ನಡೆದಿದೆ ಎಂದು ಬಸ್ತಾರ್ ವಲಯದ ಪೊಲೀಸ್ ಇನ್‌ಸ್ಪೆಕ್ಟರ್ ಜನರಲ್ ಸುಂದರರಾಜ್ ಪಿ.ತಿಳಿಸಿದ್ದಾರೆ.

ಕೊಂಡಗಾಂವ್‌ನ ಜಿಲ್ಲಾ ಮೀಸಲು ಪಡೆ (ಡಿಆರ್‌ಜಿ) ಮತ್ತು ಬಸ್ತಾರ್ ಫೈಟರ್ಸ್, ರಾಜ್ಯ ಪೊಲೀಸರ ಎರಡೂ ಘಟಕಗಳು ಕಾರ್ಯಾಚರಣೆಯಲ್ಲಿ ಭಾಗಿಯಾಗಿವೆ ಎಂದು ಅವರು ಹೇಳಿದರು.

ಇಲ್ಲಿಯವರೆಗೆ, ಇಬ್ಬರು ನಕ್ಸಲರ ಮೃತದೇಹಗಳು ಮತ್ತು ಒಂದು ಎ.ಕೆ -47 ರೈಫಲ್, ಇತರ ಶಸ್ತ್ರಾಸ್ತ್ರಗಳು ಮತ್ತು ಸ್ಫೋಟಕಗಳನ್ನು ಸ್ಥಳದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ನಡೆಯುತ್ತಿದೆ.




ಹತ್ಯೆಗೀಡಾದ ನಕ್ಸಲರನ್ನು ಮಾವೋವಾದಿಗಳ ಪೂರ್ವ ಬಸ್ತಾರ್ ವಿಭಾಗದ ಸದಸ್ಯ, ಮಾವೋವಾದಿಗಳ ಕಮಾಂಡರ್ ಹಲ್ದಾರ್ ಮತ್ತು ಪ್ರದೇಶ ಸಮಿತಿ ಸದಸ್ಯ ರಾಮೆ ಎಂದು ಗುರುತಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಹಲ್ದಾರ್ ಮತ್ತು ರಾಮೆ ಅವರ ತಲೆಗೆ ಕ್ರಮವಾಗಿ 8 ಲಕ್ಷ ಮತ್ತು 5 ಲಕ್ಷ ರೂ. ಬಹುಮಾನ ಘೋಷಿಸಲಾಗಿದೆ ಎಂದು ಅವರು ಹೇಳಿದರು. ಇತ್ತೀಚಿನ ಕಾರ್ಯಾಚರಣೆಯೊಂದಿಗೆ, ಈ ವರ್ಷ ಇಲ್ಲಿಯವರೆಗೆ ರಾಜ್ಯದಲ್ಲಿ ಪ್ರತ್ಯೇಕ ಎನ್ಕೌಂಟರ್ಗಳಲ್ಲಿ 140 ನಕ್ಸಲರನ್ನು ಗುಂಡಿಕ್ಕಿ ಕೊಲ್ಲಲಾಗಿದೆ. ಅವರಲ್ಲಿ ನಾರಾಯಣಪುರ ಮತ್ತು ಕೊಂಡಗಾಂವ್ ಸೇರಿದಂತೆ ಏಳು ಜಿಲ್ಲೆಗಳನ್ನು ಒಳಗೊಂಡಿರುವ ಬಸ್ತಾರ್ ವಿಭಾಗದಲ್ಲಿ 123 ಜನರನ್ನು ನಿರ್ಮೂಲನೆ ಮಾಡಲಾಗಿದೆ.

# ವಕ್ಫ್ ತಿದ್ದುಪಡಿ ಕಾಯ್ದೆ ಸಿಂಧುತ್ವ ಪ್ರಶ್ನಿಸಿದ ಅರ್ಜಿಗಳ ವಿಚಾರಣೆ

## ಕಾಯ್ದೆ ಸಮರ್ಥಿಸಿದ ಕೇಂದ್ರ ಸರ್ಕಾರದ ಪ್ರತಿನಿಧಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ

**ನವದೆಹಲಿ, ಏ.16: ಕೇಂದ್ರ ಸರ್ಕಾರದ ವಕ್ಫ್ ತಿದ್ದುಪಡಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ 73 ಅರ್ಜಿಗಳ ವಿಚಾರಣೆಯನ್ನು ಸುಪ್ರೀಂಕೋರ್ಟ್ ಆರಂಭಿಸಿದೆ. ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ, ನ್ಯಾ. ಸಂಜಯ್ ಕುಮಾರ್ ಮತ್ತು ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ವಿಚಾರಣೆ ಆರಂಭಿಸಿದೆ.**





ವಕ್ಫ್ ತಿದ್ದುಪಡಿ ಕಾಯ್ದೆ ವಿರುದ್ಧ ಸಲ್ಲಿಸಿದ್ದ ಅರ್ಜಿದಾರರ ಪರ ವಾದಿಸಿದ ಪ್ರಮುಖ ವಕೀಲರಾದ ಕಪಿಲ್ ಸಿಬಲ್, ಅಭಿಷೇಕ್ ಮನು ಸಿಂಗ್ವಿ, ರಾಜೀವ್ ಧವನ್, ಹುಜೇಫಾ ಅಹ್ಮದಿ ತೀಕ್ಷ್ಣವಾದ ವಾದಗಳನ್ನು ಮಂಡಿಸಿದರು, ಆದರೆ ಕೇಂದ್ರ ಸರ್ಕಾರವನ್ನು ಪ್ರತಿನಿಧಿಸಿದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಕಾಯ್ದೆಯನ್ನು ಸಮರ್ಥಿಸಿ ಕೊಂಡರು.

**ವಕ್ಫ್ ಸಾಂವಿಧಾನಿಕ ಹಕ್ಕುಗಳ ಉಲ್ಲಂಘನೆ ಎಂದು ಅರ್ಜಿದಾರರು:** ಅರ್ಜಿದಾರರು ಕಾಯ್ದೆಯು ಸಂವಿಧಾನದ 14 (ಸಮಾನತೆ), 15 (ತಾರತಮ್ಯ ನಿಷೇಧ), 25 (ಧಾರ್ಮಿಕ ಸ್ವಾತಂತ್ರ್ಯ), 26 (ಧಾರ್ಮಿಕ ಸಂಸ್ಥೆಗಳ ಸ್ವಾಯತ್ತತೆ) ಮತ್ತು 300ಎ (ಆಸ್ತಿ ಹಕ್ಕು) ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ವಾದಿಸಿದರು. ಕಾಯ್ದೆಯ ಕೆಲವು ನಿಬಂಧನೆಗಳು, ವಿಶೇಷವಾಗಿ 'ವಕ್ಫ್ ಬೈ ಯೂಸರ್' (ಉಪಯೋಗ ದಿಂದ ವಕ್ಫ್ ಎಂದು ಗುರುತಿಸುವ ಪರಿಕಲ್ಪನೆ) ರದ್ದುಗೊಳಿಸಿರುವುದು, ದಾಖಲೆ ಇಲ್ಲದ ಐತಿಹಾಸಿಕ ವಕ್ಫ್ ಆಸ್ತಿಗಳನ್ನು ಕಳೆದುಕೊಳ್ಳುವ ಸಂಭವವಿದೆ ಎಂದು ಆತಂಕ ವ್ಯಕ್ತಪಡಿಸಲಾಯಿತು. ಜಮಿಯತ್ ಉಲಮಾ-ಎ-ಹಿಂದ್ ಮತ್ತು ಇತರರ ಪರವಾಗಿ ವಾದಿಸಿದ ಹಿರಿಯ ವಕೀಲ ಕಪಿಲ್ ಸಿಬಲ್, ಕಾಯ್ದೆಯ ಸೆಕ್ಷನ್ 3(ಆರ್) ಅನ್ನು ಪ್ರಶ್ನಿಸಿದರು. ವಕ್ಫ್ ದಾನ ನೀಡಲು ವ್ಯಕ್ತಿಯು ಕಳೆದ 5 ವರ್ಷಗಳಿಂದ ಇಸ್ಲಾಂ ಧರ್ಮವನ್ನು ಆಚರಿಸಿರಬೇಕು ಎಂಬ ಷರತ್ತು ಸಂವಿಧಾನದ 25 ಮತ್ತು 26ನೇ ಅನುಚ್ಛೇಧವನ್ನು ಉಲ್ಲಂಘಿಸುತ್ತದೆ. ರಾಜ್ಯವು ಒಬ್ಬ ವ್ಯಕ್ತಿಯ ಧರ್ಮವನ್ನು ಪರೀಕ್ಷಿಸುವ ಹಕ್ಕನ್ನು ಹೇಗೆ ಹೊಂದಿದೆ ಎಂದು ವಾದಿಸಿದರು.

ವಕ್ಫ್ ಬೈ ಯೂಸರ್ ರದ್ದತಿಯನ್ನು ಖಂಡಿಸಿದ ಅವರು, ಶತಮಾನಗಳಿಂದ ವಕ್ಫ್ ಆಗಿ ಉಪಯೋಗದಲ್ಲಿರುವ ಆಸ್ತಿಗಳಿಗೆ ದಾಖಲೆ ಇರುವುದಿಲ್ಲ. ಇಂತಹ ಆಸ್ತಿಗಳನ್ನು ರದ್ದುಗೊಳಿಸುವುದು ಧಾರ್ಮಿಕ ಸ್ವಾತಂತ್ರ್ಯದ ಮೇಲಿನ ದಾಳಿಯಾಗಿದೆ ಎಂದರು. ಸೆಕ್ಷನ್ 7(ಎ) ಕುರಿತು ವಾದಿಸಿ ಆಸ್ತಿಗಳ ಸ್ಥಿತಿಯನ್ನು ಪರಿಶೀಲಿಸಲು 20 ವರ್ಷಗಳ ಕಾಲಾವಕಾಶ ಬೇಕಾಗಬಹುದು ಎಂದು ತಿಳಿಸಿದರು.

ಅಭಿಷೇಕ್ ಮನು ಸಿಂಗ್ವಿ ವಾದಿಸಿ, ಕಾಯ್ದೆಯು ದೇಶಾದ್ಯಂತ ವಕ್ಫ್ ಆಸ್ತಿಗಳ ಮೇಲೆ ಪರಿಣಾಮ ಬೀರುತ್ತದೆ. ಈ ಪ್ರಕರಣವನ್ನು ಹೈಕೋರ್ಟ್‌ಗೆ ವರ್ಗಾಯಿಸಬಾರದು, ಸುಪ್ರೀಂ ಕೋರ್ಟ್‌ನಲ್ಲಿಯೇ ವಿಚಾರಣೆ ನಡೆಯಬೇಕು ಎಂದರು. ವಕ್ಫ್ ಕೌನ್ಸಿಲ್‌ನಲ್ಲಿ ಮುಸ್ಲಿಮೇತರ ಸದಸ್ಯರ ಸೇರ್ಪಡೆ ಸಂವಿಧಾನದ 26ನೇ ನಿಯಮದ ಸ್ಪಷ್ಟ ಉಲ್ಲಂಘನೆ ಎಂದು ಕರೆದರು.

ಹುಜೇಫಾ ಅಹ್ಮದಿ ವಾದ ಮಂಡಿಸಿ, ವಕ್ಫ್ ಬೈ ಯೂಸರ್ ಇಸ್ಲಾಂನ ಸ್ಥಾಪಿತ ಆಚರಣೆಯಾಗಿದೆ. ಇದನ್ನು ಕಿತ್ತುಕೊಳ್ಳುವಂತಿಲ್ಲ. ಈ ನಿಬಂಧನೆಯ ರದ್ದತಿಯು ರಾಮಜನ್ಮಭೂಮಿ-ಬಾಬರಿ ಮಸೀದಿ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್‌ನಿಂದ ಗುರುತಿಸಲ್ಪಟ್ಟ ತತ್ವಗಳಿಗೆ ವಿರುದ್ಧವಾಗಿದೆ ಎಂದು ವಾದಿಸಿದರು. ರಾಜೀವ್ ಧವನ್ ಮತ್ತು ಇತರರು ವಾದಿಸಿ, ವಕ್ಫ್ ಆಸ್ತಿಗಳ ಮೇಲಿನ ರಾಜ್ಯದ ಹೆಚ್ಚಿನ ನಿಯಂತ್ರಣವು ಮುಸ್ಲಿಂ ಸಮುದಾಯದ ಧಾರ್ಮಿಕ ಸ್ವಾಯತ್ತತೆಯನ್ನು ಕಸಿದುಕೊಳ್ಳುತ್ತದೆ ಎಂದು ಒತ್ತಿ ಹೇಳಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಕೇಂದ್ರ ಸರ್ಕಾರದ ಪರ ವಕೀಲ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಕಾಯ್ದೆಯು ಯಾವುದೇ ಧಾರ್ಮಿಕ ವ್ಯವಸ್ಥೆ ಅಥವಾ ಸಂಸ್ಥೆಯ ಮೇಲೆ ಹಸ್ತಕ್ಷೇಪ ಮಾಡುವುದಿಲ್ಲ. ಇದು ವಕ್ಫ್ ಆಸ್ತಿಗಳ ದುರ್ಬಳಕೆ ತಡೆಯಲು ಮತ್ತು ಆಡಳಿತದಲ್ಲಿ ಪಾರದರ್ಶಕತೆ, ತಂತ್ರಜ್ಞಾನ-ಆಧಾರಿತ ವ್ಯವಸ್ಥೆಯನ್ನು ಜಾರಿಗೆ ತರುವ ಗುರಿಯನ್ನು ಹೊಂದಿದೆ ಎಂದು ಸಮರ್ಥಿಸಿಕೊಂಡರು. ಧಾರ್ಮಿಕ ಸಂಸ್ಥೆಯ ಮೇಲೆ ಹಸ್ತಕ್ಷೇಪ ಇಲ್ಲ, ಪಾರದರ್ಶಕತೆ ಉದ್ದೇಶ ಎಂದ ಕೇಂದ್ರ ವಕ್ಫ್ ಬೈ ಯೂಸರ್ ರದ್ದತಿಯ ಬಗ್ಗೆ ವಾದ ಮಂಡಿಸಿದ ಅವರು, ಇದು ದುರ್ಬಳಕೆಯನ್ನು ತಡೆಯಲು ಮಾಡಿರುವ ಕ್ರಮವಾಗಿದೆ. ಆದರೆ, ನ್ಯಾಯಾಲಯದಿಂದ ವಕ್ಫ್ ಎಂದು ಘೋಷಿತವಾದ ಆಸ್ತಿಗಳ ಸ್ಥಿತಿಯನ್ನು ಬದಲಾಯಿಸಲಾಗುವುದಿಲ್ಲ ಎಂದರು. ಜಂಟಿ ಸಂಸದೀಯ ಸಮಿತಿಯು 38 ಸಭೆಗಳನ್ನು ನಡೆಸಿ, 98.2 ಲಕ್ಷ ಮನವಿ ಪತ್ರಗಳನ್ನು ಪರಿಶೀಲಿಸಿ ಕಾಯ್ದೆಗೆ ಶಿಫಾರಸು ಮಾಡಿದೆ ಎಂದು ತಿಳಿಸಿದರು.

ವಿಚಾರಣೆ ವೇಳೆ ನ್ಯಾಯಾಧೀಶರು ಹಲವು ಪ್ರಶ್ನೆ ಕೇಳಿದರು. ವಕ್ಫ್ ಬೈ ಯೂಸರ್ ರದ್ದತಿಯಿಂದ ಶತಮಾನಗಳಿಂದ ವಕ್ಫ್ ಆಗಿರುವ ಆಸ್ತಿಗಳಿಗೆ ದಾಖಲೆ ಇಲ್ಲದಿದ್ದರೆ ಏನು ಮಾಡುವಿರಿ? ಇದು ದೊಡ್ಡ ಸಮಸ್ಯೆಯನ್ನು ಉಂಟುಮಾಡಬಹುದು ಎಂದು ಸಿಜೆಐ ಸಂಜೀವ್ ಖನ್ನಾ ಕೇಂದ್ರವನ್ನು ಪ್ರಶ್ನಿಸಿದರು. 13, 14, 15ನೇ ಶತಮಾನಗಳಲ್ಲಿ ನಿರ್ಮಿತವಾದ ಮಸೀದಿಗಳಿಗೆ ಖರೀದಿ ದಾಖಲೆ ತೋರಿಸಲು ಸಾಧ್ಯವಿಲ್ಲ. ಇಂತಹ ಆಸ್ತಿಗಳನ್ನು ಹೇಗೆ ನೋಂದಾಯಿಸುವಿರಿ" ಎಂದು ಅವರು ಕೇಳಿದರು. ಇದಕ್ಕೆ ಉತ್ತರಿಸಿದ ಮೆಹ್ತಾ, ಕಾಯ್ದೆಯು ನ್ಯಾಯವಿಚಾರಣೆಯ ಹಕ್ಕನ್ನು ಕಿತ್ತುಕೊಂಡಿಲ್ಲ ಎಂದು ಉತ್ತರಿಸಿದರು.

**ಹಿಂಸಾಚಾರದ ಬಗ್ಗೆ ಆತಂಕ:** ಕಾಯ್ದೆಯ ವಿರುದ್ಧ ಪಶ್ಚಿಮ ಬಂಗಾಳದ ಮುರ್ಷಿದಾಬಾದ್‌ನಲ್ಲಿ ನಡೆದ ಹಿಂಸಾತ್ಮಕ ಪ್ರತಿಭಟನೆಗಳ ಬಗ್ಗೆ ನ್ಯಾಯಾಲಯವು ಆತಂಕ ವ್ಯಕ್ತಪಡಿಸಿತು. ಪ್ರಕರಣವು ನ್ಯಾಯಾಲಯದ ಮುಂದಿರುವಾಗ ಹಿಂಸಾಚಾರ ನಡೆಯುವುದು ತೀರಾ ತೊಂದರೆದಾಯಕ ಎಂದು ಮುಖ್ಯ ನ್ಯಾಯಮೂರ್ತಿ ಖನ್ನಾ ಹೇಳಿದರು. ಮುರ್ಷಿದಾಬಾದ್‌ನಲ್ಲಿ ಮೂವರು ಸಾವನ್ನಪ್ಪಿದ ಘಟನೆಯನ್ನು ಉಲ್ಲೇಖಿಸಿ, 221 ಜನರನ್ನು ಬಂಧಿಸ ಲಾಗಿದೆ ಎಂದು ತಿಳಿಸಲಾಯಿತು, ಪ್ರತಿಭಟನೆ ಮೂಲಕ ವ್ಯವಸ್ಥೆಯ ಮೇಲೆ ಒತ್ತಡ ಹೇರಬಹುದು ಎಂದು ಭಾವಿಸಿದ್ದಾರೆ ಎಂದು ಮೆಹ್ತಾ ಹೇಳಿದರು, ಇದಕ್ಕೆ ಆಕ್ರೋಶಗೊಂಡ ಸಿಬಲ್ ಯಾರು ಒತ್ತಡ ಹೇರುತ್ತಿದ್ದಾರೆ ಎಂದು ಪ್ರಶ್ನಿಸಿದರು. ಮಧ್ಯಪ್ರವೇಶ ಮಾಡಿದ ಸಿಜೆಐ ಖನ್ನಾ, ಕಾಯ್ದೆಯಲ್ಲಿ ಹಲವು ಉತ್ತಮ ಅಂಶಗಳಿಗೆ ಸರಿಪಡಿಸಿಕೊಳ್ಳಲು ಇದು ಸಕಾಲ ಎಂದರು. ಬಳಿಕ ಯಾವುದೇ ಮಧ್ಯಂತರ ಆದೇಶವನ್ನು ಹೊರಡಿಸದ ನ್ಯಾಯಾಲಯವು, ವಿಚಾರಣೆಯನ್ನು ನಾಳೆಗೆ ಮುಂದೂಡಿತು.




ಬ್ರೆಜಿಲ್‌ನ ರಿಯೊ ಡಿ ಜನೈರೊದಲ್ಲಿ ಬುಧವಾರ ನಡೆದ ಬ್ರಿಕ್ಸ್ ಕೃಷಿ ಸಚಿವರ ಸಭೆಯಲ್ಲಿ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಭಾಗವಹಿಸಿದ್ದರು.

# ಸುಪ್ರೀಂಕೋರ್ಟ್‌ನಿಂದ ಐತಿಹಾಸಿಕ ತೀರ್ಪು: ಉರ್ದು ಭಾರತದ ಭಾಷೆ, ಒಂದು ಧರ್ಮಕ್ಕೆ ಸೀಮಿತವಲ್ಲ

**ನವದೆಹಲಿ, ಏ.16–** ಉರ್ದು ಭಾಷೆಯು ಭಾರತದಲ್ಲಿ ಜನ್ಮತಾಳಿದ್ದು, ಇದನ್ನು ಯಾವುದೇ ಧರ್ಮದೊಂದಿಗೆ ಸಂಬಂಧಿಸುವುದು ತಪ್ಪು ಎಂದು ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ನೀಡಿದೆ. ಮಹಾರಾಷ್ಟ್ರದ ಅಕೋಲಾ ಜಿಲ್ಲೆಯ ಪಾತೂರ್ ಪುರಸಭೆಯ ಸೂಚನಾ ಫಲಕದಲ್ಲಿ ಉರ್ದು ಭಾಷೆಯ ಬಳಕೆಯನ್ನು ಎತ್ತಿಹಿಡಿದ ಕೋರ್ಟ್, ಭಾಷೆಯು ಧರ್ಮವನ್ನು ಪ್ರತಿನಿಧಿಸುವುದಿಲ್ಲ, ಬದಲಿಗೆ ಸಂಸ್ಕೃತಿಯ ಭಾಗವಾಗಿದೆ ಎಂದು ಸ್ಪಷ್ಟಪಡಿಸಿದೆ.

ನ್ಯಾ. ಸುಧಾಂಶು ಧುಲಿಯಾ ಮತ್ತು ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ಪೀಠವು, ಮಾಜಿ ಕೌನ್ಸಿಲರ್ ವರ್ಷಾತಾಯಿ ಸಂಜಯ್ ಬಗಾಡೆ ಅವರು ದಾಖಲಿಸಿದ್ದ ಅರ್ಜಿಯನ್ನು ವಜಾಗೊಳಿಸಿತು. ಪಾಟೂರ್ ಪುರಸಭೆಯ ಹೊಸ ಕಟ್ಟಡದ ಸೂಚನಾ ಫಲಕದಲ್ಲಿ ಉರ್ದು ಬಳಕೆಯನ್ನು ಪ್ರಶ್ನಿಸಿದ್ದ ಬಗಾಡೆ, ಇದಕ್ಕೆ ಕಾನೂನು ಆಧಾರವಿಲ್ಲ ಎಂದು ವಾದಿಸಿದ್ದರು. ಆದರೆ, 2021ರಲ್ಲಿ ಬಾಂಬೇ ಹೈಕೋರ್ಟ್ ಈ ಬಳಕೆಯನ್ನು ಸಮರ್ಥಿಸಿತ್ತು, ಮತ್ತು ಈಗ ಸುಪ್ರೀಂ ಕೋರ್ಟ್ ಆ ತೀರ್ಪನ್ನು ಎತ್ತಿಹಿಡಿದಿದೆ.

**ಉರ್ದು: ಭಾರತೀಯ ಸಂಸ್ಕೃತಿಯ ಅವಿಭಾಜ್ಯ ಅಂಗ**

ತೀರ್ಪಿನಲ್ಲಿ, ಉರ್ದು ಭಾಷೆಯು ಭಾರತದ ಗಂಗಾ–ಜಮುನಿ ತಹಜೀಬ್‌ನ (ಹಿಂದೂಸ್ತಾನಿ ಸಂಸ್ಕೃತಿಯ) ಉತ್ತಮ ಮಾದರಿಯಾಗಿದೆ ಎಂದು ಕೋರ್ಟ್ ಒತ್ತಿ ಹೇಳಿದೆ. ಉರ್ದು ಭಾರತದಲ್ಲಿ ಜನ್ಮತಾಳಿದ ಭಾಷೆಯಾಗಿದ್ದು, ಇದು ಯಾವುದೇ ಧರ್ಮಕ್ಕೆ ಸೀಮಿತವಾಗಿಲ್ಲ. ಭಾಷೆಯನ್ನು



ಧರ್ಮದೊಂದಿಗೆ ಗುರುತಿಸುವುದು ನಮ್ಮ ತಪ್ಪು ಊಹೆಗಳು ಮತ್ತು ಕೆಲವೊಮ್ಮೆ ಪೂರ್ವಾಗ್ರಹಗಳಿಂದ ಕೂಡಿದೆ ಎಂದು ನ್ಯಾಯಾಲಯ ತಿಳಿಸಿದೆ. ಕೋರ್ಟ್ ಇದೇ ವೇಳೆ ಉರ್ದು ಮತ್ತು ಹಿಂದಿ ಭಾಷೆಗಳ ಐತಿಹಾಸಿಕ ಸಂಬಂಧವನ್ನು ಉಲ್ಲೇಖಿಸಿತು. ಈ ಎರಡೂ ಭಾಷೆಗಳು ಒಂದೇ ಮೂಲದಿಂದ ಬೆಳೆದವು, ಆದರೆ ಕಾಲಾಂತರದಲ್ಲಿ ಧಾರ್ಮಿಕ ಗುರುತುಗಳಿಂದ ಬೇರ್ಪಡಿಸಲ್ಪಟ್ಟವು. ಹಿಂದಿಯನ್ನು ಹಿಂದೂಗಳ ಭಾಷೆ ಮತ್ತು ಉರ್ದುವನ್ನು ಮುಸ್ಲಿಮರ ಭಾಷೆ ಎಂದು ಗುರುತಿಸುವುದು ವಾಸ್ತವದಿಂದ ದೂರವಾದ ದಾರಿ ಎಂದು ಕೋರ್ಟ್ ವಿಷಾದ ವ್ಯಕ್ತಪಡಿಸಿತು.

**ಸ್ಥಳೀಯ ಸಮುದಾಯದ ಅಗತ್ಯಕ್ಕೆ ಆದ್ಯತೆ**

ಪಾತೂರ್ ಪುರಸಭೆಯ ಸೂಚನಾ ಫಲಕದಲ್ಲಿ ಉರ್ದು 1956ರಿಂದಲೂ ಬಳಕೆಯಲ್ಲಿದೆ ಮತ್ತು ಸ್ಥಳೀಯ ಜನಸಮುದಾಯದ ಗಣನೀಯ ಭಾಗವು ಈ ಭಾಷೆಯನ್ನು ಅರ್ಥಮಾಡಿಕೊಳ್ಳುತ್ತದೆ ಎಂದು ಕೋರ್ಟ್ ಗಮನಿಸಿದೆ. ಪುರಸಭೆಯು ಸ್ಥಳೀಯ ಜನರ ದೈನಂದಿನ ಅಗತ್ಯಗಳನ್ನು ಪೂರೈಸುವ ಉದ್ದೇಶ ಹೊಂದಿದೆ. ಒಂದು ವೇಳೆ ಜನರ ಗುಂಪು ಉರ್ದು ಭಾಷೆಯನ್ನು ಚೆನ್ನಾಗಿ ಅರ್ಥಮಾಡಿಕೊಂಡರೆ, ಅದನ್ನು ಮರಾಠಿಯ ಜೊತೆಗೆ ಸೂಚನಾ ಫಲಕದಲ್ಲಿ ಬಳಸುವುದಕ್ಕೆ ಯಾವುದೇ ಆಕ್ಷೇಪವಿರಬಾರದು ಎಂದು ಕೋರ್ಟ್ ತಿಳಿಸಿದೆ. ಮಹಾರಾಷ್ಟ್ರ ಸ್ಥಳೀಯ ಪ್ರಾಧಿಕಾರಗಳ (ಅಧಿಕೃತ ಭಾಷೆ) ಕಾಯಿದೆ, 2022ರ ಪ್ರಕಾರ, ಉರ್ದು ಬಳಕೆಗೆ ಯಾವುದೇ ಕಾನೂನು ನಿಷೇಧವಿಲ್ಲ ಎಂದು ಬಾಂಬೆ ಹೈಕೋರ್ಟ್ ತನ್ನ 2021ರ ತೀರ್ಪಿನಲ್ಲಿ ತಿಳಿಸಿತ್ತು. ಈ ತೀರ್ಪನ್ನು ಒಪ್ಪಿಕೊಂಡ ಸುಪ್ರೀಂಕೋರ್ಟ್, ವರ್ಷಾತಾಯಿ ಬಗಾಡೆ ಅವರಿಗೆ ಈ ರೀತಿಯ ಆಕ್ಷೇಪಣೆ ಎತ್ತುವ ಕಾನೂನು ಅಧಿಕಾರವಿಲ್ಲ ಎಂದು ಸ್ಪಷ್ಟಪಡಿಸಿತು. ಕೇವಲ ಪುರಸಭೆಯ ಮುಖ್ಯಾಧಿಕಾರಿಗೆ ಮಾತ್ರ ಇಂತಹ ವಿಷಯದಲ್ಲಿ ಕ್ರಮ ಕೈಗೊಳ್ಳುವ ಅಧಿಕಾರವಿದೆ ಎಂದು ಕೋರ್ಟ್ ತಿಳಿಸಿದೆ.

**ಸಾಮಾಜಿಕ ಸಂದೇಶ**

ತೀರ್ಪಿನ ಆರಂಭದಲ್ಲಿ, ನ್ಯಾಯಮೂರ್ತಿ ಧುಲಿಯಾ ಅವರು ಆಂಗ್ಲೋ–ಅಲ್ಜೀರಿಯನ್ ಲೇಖಕ ಮೌಲೌದ್ ಬೆಂಜಾದಿ ಅವರ ಉಕ್ತಿಯನ್ನು ಉಲ್ಲೇಖಿಸಿದರು: ಒಂದು ಭಾಷೆಯನ್ನು ಕಲಿಯುವಾಗ, ನೀವು ಕೇವಲ ಮಾತನಾಡಲು ಮತ್ತು ಬರೆಯಲು ಕಲಿಯುವುದಿಲ್ಲ. ನೀವು ಮುಕ್ತಮನಸ್ಸು, ಉದಾರವಾದ, ಸಹಿಷ್ಣು, ದಯೆಯಿಂದ ಕೂಡಿದ ಮತ್ತು ಎಲ್ಲರಿಗೂ ಗೌರವ ನೀಡುವ ಮನೋಭಾವವನ್ನು ಕಲಿಯುತ್ತೀರಿ. ಈ ಮಾತಿನ ಮೂಲಕ ಕೋರ್ಟ್, ಭಾಷೆಯು ಒಗ್ಗಟ್ಟನ್ನು ಬೆಳೆಸುವ ಸಾಧನವಾಗಿದೆ ಎಂಬ ಸಂದೇಶವನ್ನು ಸಾರಿದೆ.

# ಚುನಾವಣಾ ಆಯುಕ್ತರ ನೇಮಕಾತಿ ಕುರಿತು ಮೇ 14ಕ್ಕೆ ವಿಚಾರಣೆ

**ನವದೆಹಲಿ, ಏ.16–** 2023 ರ ಕಾನೂನಿನಡಿಯಲ್ಲಿ ಮುಖ್ಯ ಚುನಾವಣಾ ಆಯುಕ್ತರು (ಸಿಇಸಿ) ಮತ್ತು ಚುನಾವಣಾ ಆಯುಕ್ತರ (ಇಸಿ) ನೇಮಕಾತಿಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆ ಯನ್ನು ಸುಪ್ರೀಂಕೋರ್ಟ್ ಬುಧವಾರ ಮೇ 14ರಂದು ನಿಗದಿಪಡಿಸಿದೆ.

ವಕೀಲ ಪ್ರಶಾಂತ್ ಭೂಷಣ್ ಅವರು ಈ ವಿಷಯದಲ್ಲಿ ತುರ್ತು ವಿಚಾರಣೆ ನಡೆಸುವಂತೆ ಪೀಠವನ್ನು ಒತ್ತಾಯಿಸಿದ್ದು, ಇದರ ನಂತರ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ದೀಪಂಕರ್ ದತ್ತ ಮತ್ತು ಉಜ್ಜಲ್ ಭೂಯಾನ್ ಅವರ ಪೀಠವು ದಿನಾಂಕವನ್ನು ನಿಗದಿಪಡಿಸಿದೆ. 2023ರ ಕಾನೂನಿನ ಪ್ರಕಾರ ನೇಮಕಾತಿ ಪ್ರಕ್ರಿಯೆಯನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಿದ ಎನ್‌ಜಿಓ ಪರವಾಗಿ ಹಾಜರಾದ ಪ್ರಶಾಂತ್ ಭೂಷಣ್, ಈ ವಿಷಯವು 2023ರ ಸಂವಿಧಾನ ಪೀಠದ ತೀರ್ಪಿನ ವ್ಯಾಪ್ತಿಗೆ ಒಳಪಟ್ಟಿದೆ ಎಂದು ಹೇಳಿದ್ದಾರೆ.

ವಿಶೇಷ ಪೀಠದ ಬೇರೆ ವಿಷಯವನ್ನು ರದ್ದುಗೊಳಿಸಿ ಈ ವಿಷಯವನ್ನು ಮೇ 14 ರಂದು ನ್ಯಾಯಾಲಯವು ಕೈಗೆತ್ತಿಕೊಳ್ಳಲಿದೆ ಎಂದು ನ್ಯಾ.ಸೂರ್ಯಕಾಂತ್ ಅವರು ಪ್ರಶಾಂತ್ ಭೂಷಣ್ ಅವರಿಗೆ ತಿಳಿಸಿದ್ದಾರೆ.

2023ರ ಕಾನೂನಿನಡಿಯಲ್ಲಿ ಸಿಇಸಿ ಮತ್ತು ಚುನಾವಣಾ ಆಯುಕ್ತರ ನೇಮಕಾತಿಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯನ್ನು ಮಾರ್ಚ್ 19 ರಂದು ಸುಪ್ರೀಂ ಕೋರ್ಟ್ ಏ.16 ರಂದು ನಿಗದಿಪಡಿಸಿತ್ತು. ಅರ್ಜಿದಾರರಾದ ಎನ್‌ಜಿಓ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಪರವಾಗಿ ಹಾಜರಿದ್ದ ಭೂಷಣ್, ಈ ವಿಷಯವು ಒಂದು ಸಣ್ಣ ಕಾನೂನು ಪ್ರಶ್ನೆಯನ್ನು ಒಳಗೊಂಡಿದೆ




ಎಂದು ನ್ಯಾಯಾಲಯಕ್ಕೆ ತಿಳಿಸಿದ್ದರು.

ಪ್ರಧಾನ ಮಂತ್ರಿ, ವಿರೋಧ ಪಕ್ಷದ ನಾಯಕ ಮತ್ತು ಭಾರತದ ಮುಖ್ಯ ನ್ಯಾಯಾಧೀಶರನ್ನು ಒಳಗೊಂಡ ಸಮಿತಿಯ ಮೂಲಕ ಸಿಇಸಿ ಮತ್ತು ಚುನಾವಣಾ ಆಯುಕ್ತರ ನೇಮಕಾತಿಗಾಗಿ 2023 ರ ಸಾಂವಿಧಾನಿಕ ಪೀಠದ ತೀರ್ಪನ್ನು ಅನುಸರಿಸಬೇಕೇ ಅಥವಾ ಸಮಿತಿ ಯಿಂದ ಸಿಜೆಐ ಅವರನ್ನು ಹೊರಗಿಡುವ 2023 ರ ಕಾನೂನನ್ನು ಅನುಸರಿಸಬೇಕೇ ಎಂಬುವುದು ಪ್ರಸ್ತುತ ಅರ್ಜಿಯ ವಿಚಾರವಾಗಿದೆ. 2023ರ ಕಾನೂನಿನಡಿಯಲ್ಲಿ ಹೊಸ ಸಿಇಸಿ ಮತ್ತು ಚುನಾವಣಾ ಆಯುಕ್ತರನ್ನು ನೇಮಿಸುವ ಮೂಲಕ ಸರ್ಕಾರವು ಪ್ರಜಾಪ್ರಭುತ್ವದ ಅಪಹಾಸ್ಯ ಮಾಡುತ್ತಿದೆ ಎಂದು ಪ್ರಶಾಂತ್ ಭೂಷಣ್ ವಾದಿಸಿದ್ದರು.

ಫೆಬ್ರವರಿ 17 ರಂದು, ಸರ್ಕಾರವು ಮುಂದಿನ ಸಿಇಸಿಯಾಗಿ ಇಸಿ ಜ್ಞಾನೇಶ್ ಕುಮಾರ್ ಅವರನ್ನು ನೇಮಿಸಿದೆ. ಅವರು ಹೊಸ ಕಾನೂನಿನಡಿಯಲ್ಲಿ ನೇಮಕಗೊಂಡ ಮೊದಲ ಸಿಇಸಿ ಮತ್ತು ಅವರ ಅವಧಿ ಜನವರಿ 26, 2029 ರವರೆಗೆ ಇರುತ್ತದೆ. ಇದು ಮುಂದಿನ ಲೋಕಸಭಾ ಚುನಾವಣೆಯ ವೇಳಾಪಟ್ಟಿಯನ್ನು ಘೋಷಿಸುವ ಕೆಲವು ದಿನಗಳ ಮೊದಲು ಆಗಿದೆ.

# ರೈಲ್ವೆಯಿಂದ ಕ್ರಾಂತಿಕಾರಿ ಹೆಜ್ಜೆ: ಪಂಚವಟಿ ಎಕ್ಸ್‌ಪ್ರೆಸ್ ರೈಲಿನಲ್ಲಿ ದೇಶದ ಮೊದಲ ಎಟಿಎಂ ಸ್ಥಾಪನೆಯ ಪ್ರಾಯೋಗಿಕ ಪರೀಕ್ಷೆ ಯಶಸ್ವಿ

**ಮುಂಬೈ, ಏ.16–** ಮಹಾರಾಷ್ಟ್ರದ ಮನ್ಮಾಡ್ ಜಂಕ್ಷನ್ ನಿಂದ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ ನಡುವೆ ಸಂಚರಿಸುವ ಪಂಚವಟಿ ಎಕ್ಸ್‌ಪ್ರೆಸ್ ರೈಲಿನಲ್ಲಿ ದೇಶದ ಮೊದಲ ಎಟಿಎಂ ಸ್ಥಾಪನೆಯ ಪ್ರಾಯೋಗಿಕ ಪರೀಕ್ಷೆ ಯಶಸ್ವಿಯಾಗಿ ಪೂರ್ಣಗೊಂಡಿದೆ. ಬ್ಯಾಂಕ್ ಆಫ್ ಮಹಾರಾಷ್ಟ್ರದ ಸಹಯೋಗ 'ದೊಂದಿಗೆ ಕೇಂದ್ರ ರೈಲ್ವೆಯ ಭುಸಾವಲ್ ವಿಭಾಗವು ಈ ಹೊಸ ಯೋಜನೆಯನ್ನು ಜಾರಿಗೆ ತಂದಿದ್ದು, ರೈಲು ಪ್ರಯಾಣಿಕರಿಗೆ ಪ್ರಯಾಣದ ಸಮಯದಲ್ಲಿಯೇ ಎಟಿಎಂ ಸೌಲಭ್ಯವನ್ನು ಒದಗಿಸುವ ಗುರಿಯನ್ನು ಹೊಂದಿದೆ. ಈ ಎಟಿಎಂ ಅನ್ನು ರೈಲಿನ ಎಸಿ ಚೇರ್ ಕಾರ್ ಬೋಗಿಯೊಂದರ ಹಿಂಭಾಗದಲ್ಲಿ ಅಳವಡಿಸಲಾಗಿದೆ. ರೈಲು ಚಲಿಸುವಾಗ ಸುರಕ್ಷತೆಯನ್ನು ಖಾತ್ರಿಪಡಿಸಲು ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿರಂತರ ಕಣ್ಗಾವಲು ವ್ಯವಸ್ಥೆಯನ್ನು ಮಾಡಲಾಗಿದೆ. ಎಟಿಎಂಗೆ ಅಗತ್ಯವಾದ ವಿದ್ಯುತ್ ಸಂಪರ್ಕದ ವ್ಯವಸ್ಥೆ ಮಾಡಿದೆ. ಕೇಂದ್ರ ರೈಲ್ವೆಯ ಭುಸಾವಲ್ ವಿಭಾಗದ ರೈಲ್ವೆ ವ್ಯವಸ್ಥಾಪಕ ಪಾಂಡೆ ಅವರ ಪ್ರಕಾರ, ಈ ಪ್ರಾಯೋಗಿಕ ಯೋಜನೆಯ ಯಶಸ್ವಿ ಪೂರ್ಣಗೊಂಡ ಬಳಿಕ, ಪಂಚವಟಿ ಎಕ್ಸ್‌ಪ್ರೆಸ್‌ನಲ್ಲಿ ಎಟಿಎಂ ಅನ್ನು ಶಾಶ್ವತ ಸೌಲಭ್ಯವಾಗಿ ಪರಿಚಯಿಸಲಾಗುವುದು. ಈ ಯೋಜನೆಯು ರೈಲ್ವೆಯ ನಾನ್–ಫೇರ್ ರೆವೆನ್ಯೂ (ಎನ್‌ಎಫ್‌ಆರ್) ಉಪಕ್ರಮದ ಭಾಗವಾಗಿದ್ದು, ಪ್ರಯಾಣಿಕರಿಗೆ ಸೌಕರ್ಯ ಕಲ್ಪಿಸುವ ಜೊತೆಗೆ ರೈಲ್ವೆಗೆ ಹೆಚ್ಚುವರಿ ಆದಾಯ ತರುವ ಗುರಿಯನ್ನು ಹೊಂದಿದೆ.

ಪಂಚವಟಿ ಎಕ್ಸ್‌ಪ್ರೆಸ್ ರೈಲು ಪ್ರತಿದಿನ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್‌ನಿಂದ ಸಂಜೆ 6:15ಕ್ಕೆ ಹೊರಟು ರಾತ್ರಿ 10:50ಕ್ಕೆ ಮನ್ಮಾಡ್ ತಲುಪುತ್ತದೆ, 258 ಕಿ.ಮೀ ದೂರವನ್ನು ಸುಮಾರು 4 ಗಂಟೆ 35 ನಿಮಿಷಗಳಲ್ಲಿ ಕ್ರಮಿಸುತ್ತದೆ. ನಾಸಿಕ್ ಮತ್ತು ಮುಂಬೈ ನಡುವೆ ಪ್ರಯಾಣಿಸುವ ಉದ್ಯಮಿಗಳು, ವಕೀಲರು ಮತ್ತು ಸರ್ಕಾರಿ



ಅಧಿಕಾರಿಗಳಿಗೆ ಈ ರೈಲು ಅನುಕೂಲಕರವಾಗಿದೆ.

ರೈಲಿನ 22 ಬೋಗಿಗಳು ವೆಸ್ಟಿಬುಲ್ ಸಂಪರ್ಕವನ್ನು ಹೊಂದಿದ್ದು, ಎಲ್ಲಾ ವರ್ಗದ ಪ್ರಯಾಣಿಕರಿಗೂ ಎಟಿಎಂ ಸೌಲಭ್ಯವನ್ನು ಸುಲಭವಾಗಿ ತಲುಪಿಸುತ್ತದೆ. ಇದರ ಪರೀಕ್ಷಾ ಅವಧಿಯಲ್ಲಿ ಇಗತ್ಪುರಿ ಮತ್ತು ಕಸಾರಾ ನಡುವಿನ ಕೆಲವು ಭಾಗಗಳಲ್ಲಿ ಸಿಗ್ನಲ್ ಸಮಸ್ಯೆಯಿಂದಾಗಿ ಸಣ್ಣ ತೊಂದರೆಗಳು ಕಂಡುಬಂದರೂ, ಒಟ್ಟಾರೆ ಈ ಪ್ರಯೋಗ ಯಶಸ್ವಿಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಯೋಜನೆಯ ಜನಪ್ರಿಯತೆಯನ್ನು ಆಧರಿಸಿ, ಇದನ್ನು ಇತರ ರೈಲುಗಳಿಗೂ ವಿಸ್ತರಿಸುವ ಯೋಜನೆ ಇದೆ. ಈ ಎಟಿಎಂ ಸೌಲಭ್ಯವು ಮುಂಬೈ–ಹಿಂಗೋಲಿ ಜನಶತಾಬ್ದಿ ಎಕ್ಸ್‌ಪ್ರೆಸ್‌ನ ಪ್ರಯಾಣಿಕರಿಗೂ ಲಭ್ಯವಿರುತ್ತದೆ, ಕಾರಣ ಈ ರೈಲು ಪಂಚವಟಿ ಎಕ್ಸ್‌ಪ್ರೆಸ್‌ನೊಂದಿಗೆ ರೇಕ್ ಹಂಚಿಕೊಳ್ಳುತ್ತದೆ.

ಸಾಮಾಜಿಕ ಜಾಲತಾಣಗಳಲ್ಲಿ ಪ್ರಯಾಣಿಕರು ಈ ಯೋಜನೆಯನ್ನು ರೈಲ್ವೆಯ ಒಂದು ಕ್ರಾಂತಿಕಾರಿ ಹೆಜ್ಜೆ ಎಂದು ಕೊಂಡಾಡಿದ್ದಾರೆ. ರೈಲಿನಲ್ಲಿ ಎಟಿಎಂ ಸೌಲಭ್ಯವು ಪ್ರಯಾಣಿಕರಿಗೆ ತುಂಬಾ ಅನುಕೂಲಕರವಾಗಿದೆ ಎಂದು ಕೆಲವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಯೋಜನೆಯು ಭಾರತೀಯ ರೈಲ್ವೆಯ ಆಧುನೀಕರಣದಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.

# ಭೂ ವ್ಯವಹಾರದಲ್ಲಿ ನನ್ನನ್ನು ಕೆಟ್ಟದಾಗಿ ಬಿಂಬಿಸಲಾಗಿದೆ: ವಾದ್ರಾ ಬೇಸರ

**ನವದೆಹಲಿ, ಏ.16–** ಹರಿಯಾಣದ ಶಿಕೋಪುರ ಭೂ ಒಪ್ಪಂದದ ಹಣ ವರ್ಗಾವಣೆ ತನಿಖೆಗೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಮತ್ತೆ ವಿಚಾರಣೆಗೆ ಕರೆದಿದ್ದರಿಂದ ಸರ್ಕಾರ ತನ್ನನ್ನು ಕೆಟ್ಟದಾಗಿ ತೋರಿಸಲು ಪ್ರಯತ್ನಿಸುತ್ತಿದೆ ಎಂದು ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿಯವರ ಪತಿ ರಾಬರ್ಟ್ ವಾದ್ರಾ ಹೇಳಿದ್ದಾರೆ. ಮಂಗಳವಾರ ವಾದ್ರಾ ಅವರನ್ನು ಮೂರು ಗಂಟೆಗಳ ಕಾಲ ವಿಚಾರಣೆ ನಡೆಸಲಾಯಿತು; ಇಂದೂ ಕೂಡ ವಿಚಾರಣೆ ಮುಂದುವರಿದಿದೆ. 'ನಾನು ಜನರ ಧ್ವನಿಯಾಗಿರುವುದನ್ನು ಅವರು ನೋಡಬಹುದು. ನಾನು ಈಗ ಬಹುತೇಕ ಕಾರ್ಯಕರ್ತನಂತಿದ್ದೇನೆ. ನಾನು ಸರ್ಕಾರಕ್ಕೆ ಪ್ರತಿಕ್ರಿಯಿಸುವುದರಿಂದ ಮತ್ತು ನನ್ನ ವಿರುದ್ಧ ಮಾಡಲಾದ ನಿರಂತರ ಸುಳ್ಳು ಆರೋಪಗಳ ವಿರುದ್ಧ ಹೋರಾಡುವುದನ್ನು ಮುಂದುವರಿಸುತ್ತಿರುವುದರಿಂದ ನನ್ನನ್ನು ಗುಎಇಯಾಗಿಸಲಾಗಿದೆ. ಜನರು ನನ್ನೊಂದಿಗಿದ್ದಾರೆ; ನಾನು ಅವರ ಸೇವೆ ಮಾಡುತ್ತೇನೆ. ಜನರು ನನ್ನನ್ನು ರಾಜಕೀಯದಲ್ಲಿ ನೋಡಲು ಬಯಸುತ್ತಾರೆ. ನಾನು ರಾಜಕೀಯದಲ್ಲಿ ಇರಲು ಬಯಸಿದ್ದರೂ ಸಹ, ಅವರು ನನ್ನನ್ನು ಕೆಟ್ಟದಾಗಿ ತೋರಿಸಲು ಪ್ರಯತ್ನಿಸುತ್ತಿರುವ ರೀತಿ ಇದು' ಎಂದು ಉದ್ಯಮಿ ರಾಬರ್ಟ್ ವಾದ್ರಾ ಇಡಿ ಕಚೇರಿಗೆ ಹೋಗುವ ಮೊದಲು ಹೇಳಿದರು.

ಇಡಿ ವಿಚಾರಣೆಯು ತನ್ನನ್ನು ಬಲಪಡಿಸುತ್ತದೆ. ಅವರು ಎಷ್ಟೇ ಒತ್ತಡ ಹೇರಿದರೂ, ಈ ಬೆಳವಣಿಗೆ ಸಾರ್ವಜನಿಕರಿಗಾಗಿ ನಾನು ಮಾಡುವ ಕೆಲಸಗಳಿಗೆ ಅಡ್ಡಿಯಾಗುವುದಿಲ್ಲ ಎಂದರು.

ವಾದ್ರಾ ತಮ್ಮ ಪತ್ನಿ ಮತ್ತು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಅವರೊಂದಿಗೆ ಇಡಿ ಕಚೇರಿಗೆ ಆಗಮಿಸಿದರು. ವಿಚಾರಣೆ ಆರಂಭವಾಗಿದ್ದು, ಪ್ರಿಯಾಂಕಾ ಗಾಂಧಿ ಕೂಡ ಇಡಿ ಕೇಂದ್ರ ಕಚೇರಿಯಲ್ಲಿ ಕಾಯುತ್ತಿದ್ದಾರೆ. ಏಪ್ರಿಲ್ 8 ರಂದು ಹೊರಡಿಸಲಾದ ಮೊದಲ ಸಮನ್ಸ್‌ಗೆ ವಾದ್ರಾ ಗೈರು ಹಾಜರಾಗಿದ್ದರು. ಅವರ ಸಂಸ್ಥೆ ಸ್ಕೈಲೈಟ್ ಹಾಸ್ಪಿಟಾಲಿಟಿಗೆ ಸಂಬಂಧಿಸಿದ ಹಣಕಾಸಿನ ಅಕ್ರಮಗಳನ್ನು ಕೇಂದ್ರ ತನಿಖಾ ಸಂಸ್ಥೆ ಪರಿಶೀಲಿಸುತ್ತಿದೆ. ಇಡಿ ಪ್ರಕಾರ, ವಾದ್ರಾ ಅವರ ಕಂಪನಿಯು ಫೆಬ್ರವರಿ 2008 ರಲ್ಲಿ ಓಂಕಾರೇಶ್ವರ ಪ್ರಾಪರ್ಟೀಸ್‌ನಿಂದ ಗುರ್ಗಾಂವ್‌ನ ಶಿಕೋಪುರ್‌ನಲ್ಲಿರುವ 3.5 ಎಕರೆ ಜಮೀನನ್ನು 7.5 ಕೋಟಿ ರೂ.ಗೆ ಖರೀದಿಸಿತ್ತು.

ವಾದ್ರಾ ಅವರ ಕಂಪನಿಯು ನಂತರ ರಿಯಲ್ ಎಸ್ಟೇಟ್ ದೈತ್ಯ ಡಿಎಲ್‌ಎಫ್‌ಗೆ 58 ಕೋಟಿ ರೂ.ಗೆ ಭೂಮಿಯನ್ನು ಮಾರಾಟ ಮಾಡಿತು. ಈ ಆದಾಯವು ಅಕ್ರಮ ವರ್ಗಾವಣೆ ಯೋಜನೆಯ ಭಾಗವಾಗಿದೆ ಎಂದು ಶಂಕಿಸಿರುವ ಕೇಂದ್ರ ಸಂಸ್ಥೆ, ಈ ಅನಿರೀಕ್ಷಿತ ಲಾಭದ ಹಿಂದಿನ ಹಣದ ಹಾದಿಯನ್ನು ತನಿಖೆ ನಡೆಸುತ್ತಿದೆ. ವಾದ್ರಾ ವಿಚಾರಣೆಗೆ ಹಾಜರಾದ ನಂತರ, ಅವರ ಹೇಳಿಕೆಯನ್ನು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ದಾಖಲಿಸಲಾಗುತ್ತದೆ.

ಭೂ ಪ್ರಕರಣದಲ್ಲಿ ರಾಬರ್ಟ್ ವಾದ್ರಾ ಮತ್ತು ನ್ಯಾಷನಲ್ ಹೆರಾಲ್ಡ್ ಹಣ ವರ್ಗಾವಣೆ ಪ್ರಕರಣದಲ್ಲಿ ಸೋನಿಯಾ ಗಾಂಧಿ ಮತ್ತು ರಾಹುಲ್ ವಿರುದ್ಧ ದಾಖಲಾಗಿರುವ ಆರೋಪಪಟ್ಟಿಯನ್ನು ಖಂಡಿಸಿ ಹಲವಾರು ರಾಜ್ಯಗಳಲ್ಲಿ ನೂರಾರು ಕಾಂಗ್ರೆಸ್ ಕಾರ್ಯಕರ್ತರು ಮತ್ತು ನಾಯಕರು, ಜಾರಿ ನಿರ್ದೇಶನಾಲಯದ (ಇಡಿ) ಕಚೇರಿಗಳ ಹೊರಗೆ ಜಮಾಯಿಸಿ ಪ್ರತಿಭಟನೆ ನಡೆಸಿದರು. ಜಿಲ್ಲಾ ಮಟ್ಟದ ಕೇಂದ್ರ ಸರ್ಕಾರಿ ಕಚೇರಿಗಳಲ್ಲಿಯೂ ಕಾಂಗ್ರೆಸ್ ಕಾರ್ಯಕರ್ತರು ವ್ಯಾಪಕ ಪ್ರತಿಭಟನೆ ನಡೆಸಿದರು. ದೆಹಲಿಯ 24 ಅಕ್ಬರ್ ರಸ್ತೆಯಲ್ಲಿರುವ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಬೃಹತ್ ಆಂದೋಲನ ನಡೆಯಿತು. ರಾಜಸ್ಥಾನ ಕಾಂಗ್ರೆಸ್ ಮುಖಂಡರಾದ ಸಚಿನ್ ಪೈಲಟ್ ಮತ್ತು ಇಮ್ರಾನ್ ಪ್ರತಾಪ್ಗಢಿ ಅವರಂತಹ ಹಿರಿಯ ನಾಯಕರು ನೂರಾರು ಕಾರ್ಯಕರ್ತರೊಂದಿಗೆ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಈ ಕ್ರಮವನ್ನು ?ರಾಜಕೀಯ ಸೇಡು? ಎಂದು ಕರೆದರು. ದೆಹಲಿಯ ಕಾಂಗ್ರೆಸ್ ಕಚೇರಿ ಬಳಿ ಪೊಲೀಸರ ದೊಡ್ಡ ತುಕಡಿಯನ್ನು ನಿಯೋಜಿಸಲಾಗಿತ್ತು. ಕಾನೂನು ಸುವ್ಯವಸ್ಥೆಯನ್ನು ತಡೆಯಲು ಬ್ಯಾರಿಕೇಡ್ಗಳನ್ನು ಅಳವಡಿಸಲಾಗಿತ್ತು. ಹಲವಾರು ಕಾರ್ಮಿಕರನ್ನು ಸಹ ಬಂಧಿಸಲಾಯಿತು. ಇದು ರಾಜಕೀಯ ಪ್ರೇರಿತ ಪ್ರಕರಣ. ಯಾವುದೇ ವಹಿವಾಟು, ಆಸ್ತಿ ವರ್ಗಾವಣೆ, ಆಸ್ತಿ ವಹಿವಾಟು ಇಲ್ಲ, ಯಾವುದೇ ಪ್ರಕರಣವಿಲ್ಲ. ನಾವು ಇದನ್ನು ಕಾನೂನುಬದ್ಧವಾಗಿ ಹೋರಾಡುತ್ತೇವೆ? ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿಯನ್ನು ಉದ್ದೇಶಪೂರ್ವಕವಾಗಿ ಗುರಿಯಾಗಿಸಲಾಗಿದೆ. ವಿರೋಧ ಪಕ್ಷದ ಧ್ವನಿಯನ್ನು ನಿಗ್ರಹಿಸಲು ಇದನ್ನು ಮಾಡಲಾಗಿದೆ? ಎಂದು ಹಿರಿಯ ನಾಯಕ ಸಚಿನ್ ಪೈಲಟ್ ಹೇಳಿದರು. ಕಾಂಗ್ರೆಸ್ನ ಅತ್ಯುನ್ನತ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಯಾದ ಕೇಂದ್ರ ಕಾರ್ಯಕಾರಿ ಸಮಿತಿಯು ಪ್ರಧಾನಿ ನರೇಂದ್ರ ಮೋದಿಯವರ ತವರು ರಾಜ್ಯವಾದ ಗುಜರಾತ್ನಲ್ಲಿ ಸಭೆ ಸೇರಿದ ನಂತರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ರಾಜ್ಯಸಭಾ ಸಂಸದ ಇಮ್ರಾನ್ ಪ್ರತಾಪ್ಗಢಿ ಹೇಳಿದರು.



ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಹಣ ಅಕ್ರಮ ವರ್ಗಾವಣೆ ತನಿಖೆಗೆ ಸಂಬಂಧಿಸಿದಂತೆ ಇಡಿ ವಿಶೇಷ ಪಿಎಂಎಲ್‌ಎ ನ್ಯಾಯಾಲಯದಲ್ಲಿ ಸೋನಿಯಾ ಮತ್ತು ರಾಹುಲ್ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ ನಂತರ ಪ್ರತಿಭಟನೆಗಳು ನಡೆದಿವೆ. ತನ್ನ ಚಾರ್ಜ್‌ಶೀಟ್ನಲ್ಲಿ, ಗಾಂಧಿಗಳು ಮತ್ತು ಇತರ ಆರೋಪಿಗಳು ನ್ಯಾಷನಲ್ ಹೆರಾಲ್ಡ್ ಪತ್ರಿಕೆಯ ಪ್ರಕಾಶಕರಾದ ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ (ಎಜೆಎಲ್) ನ ಆಸ್ತಿಗಳನ್ನು ರೂ. 2,000 ಕೋಟಿ ಮೌಲ್ಯದ ಆಸ್ತಿಗಳ ನಿಜವಾದ ಮಾರುಕಟ್ಟೆ ಮೌಲ್ಯಕ್ಕೆ ಹೋಲಿಸಿದರೆ ರೂ. 50 ಲಕ್ಷ ಕಡಿಮೆ ಬೆಲೆಗೆ ಪಡೆದಿದ್ದಾರೆ ಎಂದು ಇಡಿ ಆರೋಪಿಸಿದೆ.

## ಇಂಡಿಯಾ ಜಸ್ಟೀಸ್ ರಿಪೋರ್ಟ್-2025 ವರದಿ

# ವಿಚಾರಣಾಧೀನ ಕೈದಿಗಳಲ್ಲಿ 42% ಯುಪಿ, ಬಿಹಾರ, ಮಹಾರಾಷ್ಟ್ರದವರು

**ನವದೆಹಲಿ, ಏ. 16–** ಡಿಸೆಂಬರ್ 2022 ರ ಹೊತ್ತಿಗೆ ದೇಶದಾದ್ಯಂತ ಇರುವ ವಿಚಾರಣಾಧೀನ ಕೈದಿಗಳಲ್ಲಿ 42% ಜನರು ಉತ್ತರ ಪ್ರದೇಶ, ಬಿಹಾರ ಮತ್ತು ಮಹಾರಾಷ್ಟ್ರಗಳಲ್ಲಿದ್ದಾರೆ ಎಂದು ಇಂಡಿಯಾ ಜಸ್ಟೀಸ್ ರಿಪೋರ್ಟ್–2025 ವರದಿ ಹೇಳಿದೆ.

ಉತ್ತರ ಪ್ರದೇಶದಲ್ಲಿ ಅತಿ ಹೆಚ್ಚು ವಿಚಾರಣಾಧೀನ ಕೈದಿಗಳಿದ್ದಾರೆ ಎಂದು ವರದಿ ಹೇಳಿದೆ. ಯುಪಿಯಲ್ಲಿ 94,000ಕ್ಕೂ ಹೆಚ್ಚು ವಿಚಾರಣಾಧೀನ ಕೈದಿಗಳು ಇದ್ದು, ಇದು ದೇಶದಾದ್ಯಂತ ಇರುವ ವಿಚಾರಾಧೀನ ಕೈದಿಗಳಲ್ಲಿ ಸುಮಾರು 22% ರಷ್ಟು ಆಗುತ್ತದೆ ಎಂದು ವರದಿ ಹೇಳಿದೆ.

ಸೆಂಟರ್ ಫಾರ್ ಸೋಶಿಯಲ್ ಜಸ್ಟೀಸ್, ಕಾಮನ್ ಕಾಸ್, ಕಾಮನ್ವೆಲ್ತ್ ಹ್ಯೂಮನ್ ರೈಟ್ಸ್ ಇನಿಶಿಯೇಟಿವ್, ದಕ್ಷ, ಟಾಟಾ ಇನ್ಸ್ಟಿಟ್ಯೂಟ್ ಆಫ್ ಸೋಶಿಯಲ್ ಸೈನ್ಸಸ್–ಪ್ರಯಾಸ್, ವಿಧಿ ಸೆಂಟರ್ ಫಾರ್ ಲೀಗಲ್ ಪಾಲಿಸಿ ಮತ್ತು ಹೌ ಇಂಡಿಯಾ ಲೈವ್ಸ್ ಸೇರಿದಂತೆ ಸರ್ಕಾರೇತರ ಸಂಸ್ಥೆಗಳು ಮತ್ತು ನಾಗರಿಕ ಹಕ್ಕುಗಳ ಗುಂಪುಗಳು ಈ ವರದಿಯನ್ನು ಸಿದ್ಧಪಡಿಸಿದೆ.

ದೊಡ್ಡ ರಾಜ್ಯಗಳಾದ ಬಿಹಾರದಲ್ಲಿ ತನಿಖೆ ಅಥವಾ ವಿಚಾರಣೆ ಪೂರ್ಣಗೊಳ್ಳಲು ಕಾಯುತ್ತಿರುವ ಕೈದಿಗಳು 89% ರಷ್ಟಿದ್ದರೆ, ನಂತರ ಒಡಿಶಾದಲ್ಲಿ 85% ರಷ್ಟಿದ್ದಾರೆ ಎಂದು ವರದಿ ಹೇಳಿದೆ. ಜೈಲುಗಳಲ್ಲಿ ಹೆಚ್ಚಿನ ಜನದಟ್ಟಣೆಗೆ ವಿಚಾರಣೆಗಾಗಿ ಕಾಯುತ್ತಿರುವ ಕೈದಿಗಳೇ ಕಾರಣ ಎಂದು ಅಧ್ಯಯನವು ಹೇಳಿದೆ.

ಸರಾಸರಿಯಾಗಿ, ವಿಚಾರಣಾಧೀನ ಕೈದಿಗಳು ಮೊದಲಿಗಿಂತ ಹೆಚ್ಚು ಸಮಯವನ್ನು ಕಂಬಿಗಳ ಹಿಂದೆ ಕಳೆಯುತ್ತಿದ್ದಾರೆ ಎಂದು ವರದಿ ಹೇಳಿದ್ದು, 2022 ರ ಅಂತ್ಯದ ವೇಳೆಗೆ, ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚು ಕಾಲ ಬಂಧನದಲ್ಲಿದ್ದ ವಿಚಾರಣಾಧೀನ ಕೈದಿಗಳ ಸಂಖ್ಯೆ 11,448 ಆಗಿದ್ದು, ಇದು 2019 ರಲ್ಲಿ 5,011 ಮತ್ತು 2012 ರಲ್ಲಿ 2,028 ರಷ್ಟಿತ್ತು ಎಂದು ಹೇಳಿದೆ.

2022 ರ ಅಂತ್ಯದ ವೇಳೆಗೆ, ಉತ್ತರ ಪ್ರದೇಶವೊಂದರಲ್ಲೇ ಐದು ವರ್ಷಗಳಿಗೂ ಹೆಚ್ಚು ಕಾಲ ಜೈಲಿನಲ್ಲಿದ್ದ ಸುಮಾರು 40% ವಿಚಾರಣಾಧೀನ ಕೈದಿಗಳು ಇದ್ದರು. ಭಾರತದಲ್ಲಿ, ತನಿಖೆ ಅಥವಾ ವಿಚಾರಣೆ ನಡೆಯುತ್ತಿರುವಾಗ ಜೈಲು ಶಿಕ್ಷೆಗೆ ಬದಲಾಗಿ ಜಾಮೀನು ಹೆಚ್ಚಾಗಿ ಬಳಸಲ್ಪಡುತ್ತದೆ ಎಂದು ಅಧ್ಯಯನವು ಹೇಳಿದೆ. ಆದಾಗ್ಯೂ, ನ್ಯಾಯಾಧೀಶರು ಕಡಿಮೆ–ಅಪಾಯದ ಅಪರಾಧಿಗಳಿಗೆ ಸಂಬಂಧಿಸಿದಂತೆ ಕಸ್ಟಡಿಯೇತರ ಕ್ರಮಗಳನ್ನು ಜೈಲು ಶಿಕ್ಷೆಗೆ ಪರ್ಯಾಯವಾಗಿ ಬಳಸುವ ಅಧಿಕಾರವನ್ನು ಹೊಂದಿದ್ದಾರೆ ಎಂದು ಅದು ಹೇಳಿದೆ.

2012 ಮತ್ತು 2022 ರ ನಡುವೆ, ಒಟ್ಟಾರೆ ಜೈಲು ವಾಸದ ದರಗಳು 112% ರಿಂದ 132% ಕ್ಕೆ ಏರಿದೆ. ಅದೇ ಅವಧಿಯಲ್ಲಿ ದೇಶಾದ್ಯಂತ ಜೈಲು ಜನಸಂಖ್ಯೆಯು 3.8 ಲಕ್ಷದಿಂದ 5.7 ಲಕ್ಷಕ್ಕೆ ಅಂದರೆ 49% ರಷ್ಟು ಹೆಚ್ಚಾಗಿದೆ ಎಂದು ಅಧ್ಯಯನವು ತಿಳಿಸಿದೆ.

# ಆಸ್ಪತ್ರೆಯಲ್ಲಿ ಗಗನಸಖಿಯ ಮೇಲೆ ಲೈಂಗಿಕ ದೌರ್ಜನ್ಯ ಆರೋಪ


**ಗುರುಗ್ರಾಮ್, ಏ.16–** ಹರಿಯಾಣದ ಗುರುಗ್ರಾಮ್‌ನ್ನ ಖ್ಯಾತ ಖಾಸಗಿ ಆಸ್ಪತ್ರೆಯೊಂದರ ತೀವ್ರ ನಿಗಾ ಘಟಕದಲ್ಲಿ ವೆಂಟಿಲೇಟರ್‌ನಲ್ಲಿದ್ದ 46 ವರ್ಷದ ಗಗನಸಖಿಯೊಬ್ಬರು ಆಸ್ಪತ್ರೆಯ ಸಿಬ್ಬಂದಿಯಿಂದ ಲೈಂಗಿಕ ದೌರ್ಜನ್ಯಕ್ಕೊಳಗಾಗಿದ್ದಾರೆ ಎಂದು ಆರೋಪಿಸಿದ್ದಾರೆ. ಪೊಲೀಸರ ಪ್ರಕಾರ, ಏಪ್ರಿಲ್ 5ರಂದು ಈ ಗಗನಸಖಿಯು ತಾನು ತಂಗಿದ್ದ ಹೋಟೆಲ್‌ನ ಕೊಳದಲ್ಲಿ ಈಜಿದ ಬಳಿಕ ಅನಾರೋಗ್ಯಕ್ಕೀಡಾಗಿ ಗುರುಗ್ರಾಮದ ಮೆಡಾಂತ ಆಸ್ಪತ್ರೆಗೆ ದಾಖಲಾಗಿದ್ದರು. ತೀವ್ರ ಸ್ಥಿತಿಯಲ್ಲಿದ್ದ ಅವರನ್ನು ಐಸಿಯುನಲ್ಲಿ ವೆಂಟಿಲೇಟರ್ಗೆ ಸಂಪರ್ಕಿಸಲಾಗಿತ್ತು. ಏಪ್ರಿಲ್ 6ರಂದು, ಅರೆಪ್ರಜ್ಞಾವಸ್ಥೆಯಲ್ಲಿದ್ದ ಸಂದರ್ಭದಲ್ಲಿ ಆಸ್ಪತ್ರೆಯ ವಾರ್ಡ್ ಸಿಬ್ಬಂದಿಯೊಬ್ಬರು ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ. ಈ ವೇಳೆ ಇಬ್ಬರು ದಾದಿಯರು ಕೊಠಡಿಯಲ್ಲಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸಂತ್ರಸ್ತೆ ದೂರಿದ್ದಾರೆ.

ಏಪ್ರಿಲ್ 13ರಂದು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದ ಬಳಿಕ, ಬಾಧಿತ ಮಹಿಳೆ ತನ್ನ ಪತಿಗೆ ಘಟನೆಯ ಬಗ್ಗೆ ತಿಳಿಸಿದ್ದಾರೆ.ಏಪ್ರಿಲ್ 14ರಂದು ಸದರ್ ಪೊಲೀಸ್ ಠಾಣೆಂ ಯಲ್ಲಿ ದೂರು ದಾಖಲಿಸಿದ್ದಾರೆ. ದೂರಿನ ಆಧಾರದ ಮೇರೆಗೆ, ಗುರುಗ್ರಾಮ್ ಪೊಲೀಸರು ತನಿಖೆ ಆರಂಭಿಸಿದ್ದು, ಆಸ್ಪತ್ರೆಯ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ. ಆರೋಪಿಯನ್ನು ಗುರುತಿಸಲು ಆಸ್ಪತ್ರೆಯ ಕರ್ತವ್ಯ ವಿವರಗಳನ್ನು ಸಹ ಪರಿಶೀಲಿಸಲಾಗುತ್ತಿದೆ. ಈ ಬಗ್ಗೆ ಗುರುಗ್ರಾಮ್ ಪೊಲೀಸರ ಸಹಾಯಕ ಉಪನಿರೀಕ್ಷಕ ಸಂದೀಪ್ ಮಾತನಾಡಿ, ಮಹಿಳೆಯ ದೂರಿನ ಆಧಾರದ ಮೇರೆಗೆ ಎಫ್‌ಐಆರ್ ದಾಖಲಿಸಲಾಗಿದೆ. ಘಟನೆಯ ಸಂದರ್ಭದಲ್ಲಿ ಸಂತ್ರಸ್ತೆ ವೆಂಟಿಲೇಟರ್‌ನಲ್ಲಿದ್ದು, ಅರೆಪ್ರಜ್ಞಾವಸ್ಥೆಯಲ್ಲಿದ್ದರು ತನಿಖೆ ನಡೆಯುತ್ತಿದ್ದು, ಆರೋಪಿಯನ್ನು ಶೀಘ್ರವೇ ಬಂಧಿಸಲಾಗುವುದು ಎಂದು ತಿಳಿಸಿದ್ದಾರೆ. ಮೆಡಾಂತ ಆಸ್ಪತ್ರೆಯು ಈ ಆರೋಪಗಳ ಬಗ್ಗೆ ತನಿಖೆಗೆ ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದೆ. ಘಟನೆಯ ಬಗ್ಗೆ ಇನ್ನಷ್ಟೇ ಸ್ಪಷ್ಟತೆ ಬೇಕಾಗಿದೆ ಎಂದು ಆಸ್ಪತ್ರೆಯ ವಕ್ತಾರರು ಹೇಳಿದ್ದಾರೆ.

# ಪ್ರಾಂಶುಪಾಲೆ ಕಚೇರಿಗೆ ಸಗಣಿ ಬಳಿದು ವಿದ್ಯಾರ್ಥಿಗಳಿಂದ ಪ್ರತಿಭಟನೆ

**ನವದೆಹಲಿ, ಏ.16–** ದೆಹಲಿ ವಿಶ್ವವಿದ್ಯಾಲಯದ ವಿದ್ಯಾರ್ಥಿ ಒಕ್ಕೂಟದ (ಡಿಯುಎಸ್‌ಯು) ಅಧ್ಯಕ್ಷ ರೋನಕ್ ಖತ್ರಿ ನೇತೃತ್ವದ ವಿದ್ಯಾರ್ಥಿಗಳು ಲಕ್ಷ್ಮಿಬಾಯಿ ಕಾಲೇಜಿನ ಪ್ರಾಂಶುಪಾಲೆಯ ಕಚೇರಿಯ ಗೋಡೆಗಳಿಗೆ ಹಸುವಿನ ಸಗಣಿ ಬಳಿದಿದ್ದಾರೆ. ಬೇಸಿಗೆಯ ಬಿಸಿಲಿನ ತಾಪವನ್ನು ತಗ್ಗಿಸಲು ಕಾಲೇಜಿನ ತರಗತಿ ಕೊಠಡಿಗಳಿಗೆ ಸಗಣಿಯಿಂದ ಸಾರಿಸಿದ್ದ ಪ್ರಾಂಶುಪಾಲೆಯ ಕ್ರಮವನ್ನು ವಿರೋಧಿಸಿ ಈ ಪ್ರತಿಭಟನೆ ನಡೆದಿದೆ ಎಂದು ಖತ್ರಿ ಆರೋಪಿಸಿದ್ದಾರೆ. ಈ ಹಿಂದೆ ದೆಹಲಿ ವಿಶ್ವವಿದ್ಯಾಲಯದ ಲಕ್ಷ್ಮಿಬಾಯಿ ಕಾಲೇಜಿನ ಪ್ರಾಂಶುಪಾಲೆಯು ತರಗತಿಯ ಗೋಡೆಗಳಿಗೆ ಹಸುವಿನ ಸಗಣಿ ಬಳಿಯುತ್ತಿರುವ ವಿಡಿಯೊ ವೈರಲ್ ಆಗಿತ್ತು. ಸಾಮಾಜಿಕ ಮಾಧ್ಯಮಗಳಲ್ಲಿ ವ್ಯಾಪಕ ವ್ಯಂಗ್ಯಕ್ಕೀಡಾಗಿತ್ತು. ಕೃತ್ಯವನ್ನು ಸಮರ್ಥಿಸಿಕೊಂಡಿರುವ ಪ್ರಾಂಶುಪಾಲೆ ಪ್ರತ್ಯುಷ್ ವತ್ಸಲಾ, ಇದನ್ನು ಅಧ್ಯಾಪಕರ ನೇತೃತ್ವದಲ್ಲಿ ನಡೆಯುತ್ತಿರುವ ಸಂಶೋಧನಾ ಯೋಜನೆಯ ಭಾಗವಾಗಿ ಮಾಡಲಾಗಿದೆ ಎಂದು ಹೇಳಿದ್ದರು.

ಮಂಗಳವಾರ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ವೀಡಿಯೊದಲ್ಲಿ, ಕಾಲೇಜು ಪ್ರಾಂಶುಪಾಲರ ಅನುಪಸ್ಥಿತಿಯಲ್ಲಿ ಖತ್ರಿಯವರು ಉಪ ಪ್ರಾಂಶುಪಾಲೆಯವರೊಂದಿಗೆ ವಾಗ್ವಾದ ನಡೆಸುತ್ತಿರುವುದನ್ನು ಕಾಣಬಹುದು. ಕ್ಯಾಂಪಸ್ನಲ್ಲಿ ಪ್ರಚಾರ ಮಾಡಲಾದ ಅಸಂಬದ್ಧ ಮತ್ತು ಅವೈಜ್ಞಾನಿಕವಾದ ಈ ಸಗಣಿ ಬಳಿಯುವ ಪದ್ಧತಿಯನ್ನು ಎತ್ತಿತೋರಿಸುವ



ಉದ್ದೇಶದಿಂದ ತಮ್ಮ ಈ ಪ್ರತಿಭಟನೆಯ ಉದ್ದೇಶ ಎಂದು ಅವರು ಹೇಳಿದ್ದಾರೆ. ಪ್ರಾಂಶುಪಾಲೆಯ ಜೊತೆ ತೀವ್ರ ವಾಗ್ವಾದದ ನಂತರ ಡಿಯುಎಸ್ಯು ಅಧ್ಯಕ್ಷರು ಇತರ ವಿದ್ಯಾರ್ಥಿಗಳೊಂದಿಗೆ ಸೇರಿ ಪ್ರಾಂಶುಪಾಲೆಯ ಕಚೇರಿಯ ಗೋಡೆಗಳು ಮತ್ತು ಶೌಚಾಲಯದ ಮೇಲೆ ಸಗಣಿಯಿಂದ ಸಾರಿಸಿದ್ದಾರೆ. ಪ್ರಾಂಶುಪಾಲೆ ಕಾಲೇಜಿನ ಕೊಠಡಿಗೆ ಸಗಣಿ ಬಳಿಯುವ ಕ್ಲಿಪ್‌ನಲ್ಲಿ, ಸಿ ಬ್ಲಾಕ್‌ನಲ್ಲಿ ತರಗತಿ ಕೊಠಡಿಗಳನ್ನು ತಂಪಾಗಿಸಲು ಸ್ಥಳೀಯ ವಿಧಾನಗಳನ್ನು ಬಳಸಲಾಗುತ್ತಿದೆ ಎಂದು ಪ್ರಾಂಶುಪಾಲೆ ಪ್ರತ್ಯುಷ್ ವತ್ಸಲಾ ಸಿಬ್ಬಂದಿಯ ಸಹಾಯದಿಂದ ಗೋಡೆಗಳಿಗೆ ಲೇಪಿಸುತ್ತಿರುವುದನ್ನು ಕಾಣಬಹುದು.

ಈಗ ವೈರಲ್ ಆಗಿರುವ ವೀಡಿಯೊ ವಿಶ್ವವಿದ್ಯಾಲಯದಾದ್ಯಂತ ಆಕ್ರೋಶ ಮತ್ತು ಗೊಂದಲವನ್ನು ಹುಟ್ಟುಹಾಕಿತ್ತು ಮತ್ತು ಕಾಲೇಜು ಆಡಳಿತದ ಕ್ರಮಗಳ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿತು. ಪ್ರಾಂಶುಪಾಲರಾದ ಪ್ರತ್ಯುಷ್ ವತ್ಸಲಾ ಅವರು, ಅಧ್ಯಾಪಕರ ನೇತೃತ್ವದಲ್ಲಿ ನಡೆಯುತ್ತಿರುವ ಈ ಸಗಣಿ ಬಳಿಯುವ ಕ್ರಮವು ಸಂಶೋಧನಾ ಯೋಜನೆಯ ಭಾಗವಾಗಿದೆ ಎಂದು ಹೇಳಿದರು. ಸಾಂಪ್ರದಾಯಿಕ ಭಾರತೀಯ ಜ್ಞಾನವನ್ನು ಬಳಸಿಕೊಂಡು ಶಾಖ ಒತ್ತಡ ನಿಯಂತ್ರಣದ ಅಧ್ಯಯನ? ಎಂಬ ಶೀರ್ಷಿಕೆಯ ಅಧ್ಯಯನವು ಇನ್ನೂ ಪ್ರಗತಿಯಲ್ಲಿದೆ ಎಂದು ಅವರು ಹೇಳಿದ್ದರು.

ವಾರದ ನಂತರ ನಾನು ಪೂರ್ಣ ಸಂಶೋಧನೆಯ ವಿವರಗಳನ್ನು ಹಂಚಿಕೊಳ್ಳಲು ಸಾಧ್ಯವಾಗುತ್ತದೆ. ಪೋರ್ಟಾ ಕ್ಯಾಬಿನ್ಗಳಲ್ಲಿ ಸಂಶೋಧನೆಯನ್ನು ನಡೆಸಲಾಗುತ್ತಿದೆ. ನೈಸರ್ಗಿಕ ಮಣ್ಣನ್ನು ಮುಟ್ಟುವುದರಿಂದ ಯಾವುದೇ ಹಾನಿಯಾಗದ ಕಾರಣ ನಾನು ಅವುಗಳಲ್ಲಿ ಒಂದನ್ನು ನಾನೇ ಲೇಪಿಸಿದೆ. ಕೆಲವು ಜನರು ಪೂರ್ಣ ವಿವರಗಳನ್ನು ತಿಳಿಯದೆ ತಪ್ಪು ಮಾಹಿತಿಯನ್ನು ಹರಡುತ್ತಿದ್ದಾರೆ ಎಂದು ಪ್ರತ್ಯುಷ್ ವತ್ಸಲಾ ಹೇಳುತ್ತಾರೆ. ಕಾಲೇಜು ಆಡಳಿತವು ಇನ್ನೂ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡದಿದ್ದರೂ, ಅನೇಕ ವಿದ್ಯಾರ್ಥಿಗಳು ಈ ನಿರ್ಧಾರದಿಂದ ಅಸಮಾಧಾನ ವ್ಯಕ್ತಪಡಿಸಿದ್ದಾರೆ, ಆರೋಗ್ಯ ಕಾಳಜಿ ಮತ್ತು ಅಂತಹ ಕ್ರಮಕ್ಕೆ ವೈಜ್ಞಾನಿಕ ಆಧಾರಗಳ ಕೊರತೆಯನ್ನು

# ಜಾತಿಗಣತಿ ವರದಿ: ಸಿದ್ದರಾಮಯ್ಯ ವಿರುದ್ಧ ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ



**ಬೆಂಗಳೂರು, ಏ.16–** ಜಾತಿ ಗಣತಿ ವರದಿ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತಮ್ಮ ವಾಗ್ದಾಳಿಯನ್ನು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಯವರು ಮುಂದುವರೆಸಿದ್ದು, ಅತೀ ಹಿಂದುಳಿದ 20 ಪ್ರವರ್ಗದಲ್ಲಿ ಅತೀ ಹೆಚ್ಚು ಪಾಲು ಬೆಣ್ಣೆ ತಿಂದವರು ಯಾರು ಈಗಲಾದರೂ ಸತ್ಯ ಹೇಳಿ ಎಂದು ಆಗ್ರಹಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಜಾತಿ ಗಣತಿ ರಾಜಕೀಯ ಫಸಲಿಗೆ ಹೊಂಚು ಹಾಕಿರುವ ಶ್ರೀಮಾನ್ ಸಿದ್ದರಾಮಯ್ಯನವರೇ.. ಸತ್ಯವನ್ನೇ ಹೇಳಿ ಅತೀ ಹಿಂದುಳಿದ 20 ಪ್ರವರ್ಗದಲ್ಲಿ ಸಿಂಹಪಾಲು ಬೆಣ್ಣೆ ನುಂಗಿದ ಭೂಪರು ಯಾರು? ಕಿರುಬೆರಳ ತುದಿಯಲ್ಲೇ ದತ್ತಾಂಶವಿದೆ. ನೀವು ಸುಳ್ಳು ಹೇಳಿ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ, ಅಲ್ಲವೇ? ಎಂದು ಹೇಳಿದ್ದಾರೆ.

ನಿಮಗೂ ಗೊತ್ತು, 20 ಪ್ರವರ್ಗದಲ್ಲಿ 101 ಜಾತಿಗಳಿವೆ, 15% ಮೀಸಲು ಪಾಲು ಇದೆ. ಈ ಪಾಲಿನಲ್ಲಿ ಅತಿಹೆಚ್ಚು ಪಾಲು ನುಂಗಿದವರು ಯಾರು ದೇವ್ರು? ಈ ನುಂಗುವಿಕೆಯಲ್ಲಿಯೂ ನಿಮ್ಮ ಪಾತ್ರವೇನು ಸ್ವಾಮೀ ಸತ್ಯ ಹೇಳಿ. ಕಳೆದ 15-20 ವರ್ಷಗಳಲ್ಲಿ 'ಎ' ಗ್ರೂಪ್ ಗಳಲ್ಲಿ ನಡೆದಿರುವ ನೇಮಕಾತಿ, ವೃತ್ತಿಪರ ಕೋರ್ಸ್ ಪ್ರವೇಶ, ಇನ್ನಿತರೆ ಎಲ್ಲಾ ಪ್ರವೇಶಗಳ ಅಂಕಿ ಅಂಶ ಸುಳ್ಳು ಹೇಳುವುದಿಲ್ಲ, ಹೌದಲ್ಲವೇ?ವೃತ್ತಿಪರ ಕೋರ್ಸ್ ಅಂದರೆ ಮೆಡಿಕಲ್, ಡೆಂಟಲ್, ಎಂಜಿನಿಯರಿಂಗ್, ಡಿ ಫಾರ್ಮ, ಬಿ ಫಾರ್ಮ, ಕೃಷಿ ಇತ್ಯಾದಿ ವಿಭಾಗಗಳಲ್ಲಿ 20 ಪ್ರವರ್ಗದ ನೂರೊಂದು ಜಾತಿಗಳಲ್ಲಿ ಯಾವ್ಯಾವ ಜಾತಿಯ ಎಷ್ಟೆಷ್ಟು ಮಕ್ಕಳಿಗೆ ಪ್ರವೇಶ ಸಿಕ್ಕಿದೆ.

ಇಲ್ಲಿಯೂ ಸಿಂಹಪಾಲು ಪ್ರವೇಶ, ಲಾಭ ದಕ್ಕಿದ್ದು ಯಾರಿಗೆ? ಮಲ್ಲೇಶ್ವರಂ 18ನೇ ಅಡ್ಡರಸ್ತೆಯಲ್ಲಿ ಸಮಗ್ರ ದತ್ತಾಂಶ ಲಭ್ಯವಿದೆ, ತಾವು ತರಿಸಿ ನೋಡಬಹುದು.

20 ಪ್ರವರ್ಗದ ನೂರೊಂದು ಸಮಾಜಗಳ ಪೈಕಿ ಎಲ್ಲಾ ನೂರು ಸಮಾಜ ಗಳಲ್ಲಿ ನನ್ನ ಮನವಿ 'ಇಷ್ಟೇ; ಒಕ್ಕಲಿಗರು, ವೀರಶೈವ ಲಿಂಗಾಯತರ ಕಡೆ ಬೆರಳು ತೋರಿಸಿ ನಿಮ್ಮ ಮೂಗಿಗೆ ಬೆಣ್ಣೆ ಕೊಸರು ಸವರುತ್ತಿದ್ದಾರೆ! ನಿಮ್ಮ ನ್ಯಾಯಯುತ ಪಾಲಿನಲ್ಲಿ ಸಿಂಹಪಾಲು ಕಬಳಿಸಿದ್ದು ಯಾರೆಂದು ನಿಮಗೂ ಚೆನ್ನಾಗಿ ಗೊತ್ತು? ಆದರೂ ಸುಮ್ಮನಿದ್ದೀರಿ! ಯಾಕೆ? ನಿಮ್ಮ ಎದುರು ನಿಂತು ಲಿಂಗಾಯಿತರು, ಒಕ್ಕಲಿಗರನ್ನು ಬೈದರೆ ನಿಮ್ಮ ಹೊಟ್ಟೆ ತುಂಬುವುದೇ ನಿಮ್ಮ ಮಕ್ಕಳಿಗೆ ನ್ಯಾಯ ಸಿಗುವುದೇ ಅತೀ.. ಅತೀ ಹಿಂದುಳಿದ 20 ಪ್ರವರ್ಗದಲ್ಲಿ ಅತೀ ಹೆಚ್ಚು ಪಾಲು ಬೆಣ್ಣೆ ತಿಂದವರು ಯಾರು? ಈಗಲಾದರೂ ಸತ್ಯ ಹೇಳಿ ಸಿದ್ದರಾಮಯ್ಯನವರೇ.. ನಿಮ್ಮಿಂದ ಉತ್ತರ ನಿರೀಕ್ಷಿಸುತ್ತೇನೆಂದು ಹೇಳಿದ್ದಾರೆ.




ಬೆಂಗಳೂರಿನ ಶೇಷಾದ್ರಿಪುರಂ ಕಾಲೇಜಿನಲ್ಲಿ ಬುಧವಾರ SET ಪರೀಕ್ಷೆಗೆ ಅಭ್ಯರ್ಥಿಗಳು ಹಾಜರಾದರು.

# ಹಿಂದುಳಿದ ವರ್ಗಗಳ ಆಯೋಗ, ಸಮೀಕ್ಷಾ ವರದಿಗೆ ಸಂಪೂರ್ಣ ಅನುಮೋದನೆ: ದಿನೇಶ್ ಗುಂಡೂರಾವ್

**ಬೆಂಗಳೂರು, ಏ.16–** ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷಾ ವರದಿಗೆ ನನ್ನ ಸಂಪೂರ್ಣ ಅನುಮೋದನೆಯಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಚಿವ ಸಂಪುಟದಲ್ಲಿ ಈ ಸಮೀಕ್ಷಾ ವರದಿ ಮಂಡನೆಯಾಗಲಿದೆ. ಸಚಿವ ಸಂಪುಟವು ಈ ಸಮೀಕ್ಷಾ ವರದಿಯನ್ನು ಅಂಗೀಕರಿಸಿದ ಬಳಿಕ ವರದಿಯ ನ್ಯೂನತೆಗಳು ಹಾಗೂ ಪರಿಣಾಮಕಾರಿ ಅನುಷ್ಠಾನದ ಕುರಿತು ಮುಕ್ತ, ನ್ಯಾಯಯುತವಾದ ಚರ್ಚೆಗೆ ನಾಂದಿ ಹಾಡಬಹುದು ಎಂದಿದ್ದಾರೆ.

ಜಯಪ್ರಕಾಶ್ ಹೆಗ್ಡೆ ನೇತೃತ್ವದ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಆಧಾರದಲ್ಲಿ ಸಲ್ಲಿಸಿರುವ ಸಮೀಕ್ಷಾ ವರದಿಯನ್ನು ಪರಿಶೀಲಿಸಿದ್ದೇನೆ. ಸಾಮಾಜಿಕ ನ್ಯಾಯ ಮತ್ತು ಸಮಾನ ಬದುಕಿನ ಮೇಲೆ ನಮಗೆ ನಂಬಿಕೆಯಿದ್ದರೆ ಹಾಗೂ ಆ ತತ್ವಕ್ಕೆ ನಾವು ಬದ್ಧರಾಗಿದ್ದರೆ, ಈ ಸಮೀಕ್ಷಾ ವರದಿಯನ್ನು ವೈಜ್ಞಾನಿಕವಾಗಿ ವಿಶ್ಲೇಷಣೆ ಮಾಡುವುದು ಸೂಕ್ತ ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯ. ಜೊತೆಗೆ ಈ ವರದಿಯು ತಾರ್ಕಿಕ ಅಂಶಗಳನ್ನು ಒಳಗೊಂಡಿದೆ ಎಂಬುದನ್ನು ಒತ್ತಿ ಹೇಳಲು ಬಯಸುತ್ತೇನೆ ಎಂದು ಅವರು ತಿಳಿಸಿದ್ದಾರೆ. ಆಯೋಗ ಶಿಫಾರಸ್ಸು ಮಾಡಿರುವ ಕೆಲ ಅಂಶಗಳನ್ನು ನಾನು ಗಮನಿಸಿದ್ದೇನೆ. ಈ ಅಂಶಗಳಿಂದ ಯಾವುದೇ ಸಮುದಾಯ ಅಸಮಾಧಾನ ಗೊಳ್ಳುವ ಅಗತ್ಯವಿಲ್ಲ. ಈ ಅಂಶಗಳು ಯಾವುದೇ ಸಮುದಾಯವನ್ನು ಕಡೆಗಣಿಸಿಲ್ಲ ಎಂಬುದು ನನ್ನ ಭಾವನೆ. ಕೆಲವರು ವರದಿಯನ್ನು ಓದದೆ ಜನರನ್ನು ತಪ್ಪುದಾರಿಗೆ ಎಳೆಯುವ ಯತ್ನ ಮಾಡುತ್ತಿದ್ದಾರೆ. ಹಾಗಾಗಿ ನಾನು ಜನರಲ್ಲಿ ಮನವಿ ಮಾಡಿಕೊಳ್ಳುವುದೇ ನೆಂದರೆ, ವರದಿಯ ಕುರಿತು ಈಗಲೇ ಅಂತಿಮ ತೀರ್ಮಾನಕ್ಕೆ ಬರುವುದು ಬೇಡ. ಅನಗತ್ಯ ಗೊಂದಲಗಳಿಗೆ ಆಸ್ಪದ ಕೊಡುವುದು ಬೇಡ. ಮೊದಲು ವರದಿಯನ್ನು ಓದೋಣ. ನಂತರ ಚರ್ಚೆಗೆ ನಮ್ಮ ಮನಸ್ಸನ್ನು ಮುಕ್ತವಾಗಿರಿಸಿ ಕೊಳ್ಳೋಣ. ವರದಿಯನ್ನು ಸಂಪೂರ್ಣವಾಗಿ ಓದದೆ ಅವೈಜ್ಞಾನಿಕ ಎನ್ನುವುದು ಆತುರದ ನಿರ್ಧಾರವಾಗುತ್ತದೆ ಎಂದು ಅವರು ಹೇಳಿದ್ದಾರೆ.



# ಹುಬ್ಬಳ್ಳಿ ಎನ್‌ಕೌಂಟರ್: ಸಿಐಡಿ ತನಿಖೆಯಲ್ಲಿ ಸತ್ಯಾಂಶ– ಡಾ.ಪರಮೇಶ್ವರ

**ಬೆಂಗಳೂರು, ಏ.16–** ಹುಬ್ಬಳ್ಳಿ ಎನ್‌ಕೌಂಟರ್ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸ ಲಾಗಿದ್ದು, ತನಿಖೆಯಲ್ಲಿ ಏನು ಬರುತ್ತದೆ ನೋಡೋಣ. ತನಿಖೆಯಲ್ಲಿ ಸತ್ಯಾಂಶ ಹೊರಬರಲಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಅವರು ಹೇಳಿದರು.

ಸದಾಶಿವನಗರದಲ್ಲಿರುವ ಸಚಿವರ ಗೃಹಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಒಕ್ಕಲಿಗ ಸಮುದಾಯದ ಸಭೆ ನಡೆದಿರುವ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಯಿಸಿದ ಅವರು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಒಕ್ಕಲಿಗ ಸಮುದಾಯ ಸಭೆ ನಡೆದಿರುವುದಷ್ಟೆ ಗೊತ್ತು. ಒಳಗಡೆ ಏನೆಲ್ಲ ಚರ್ಚೆಯಾಗಿದೆ ಎಂಬುದು ನಮಗೆ ಮಾಹಿತಿ ಇಲ್ಲ. ಒಕ್ಕಲಿಗ ಸಮುದಾಯವು ತಮಗೆ ಅನ್ಯಾಯ ಆಗಬಾರದು ಎಂಬುದನ್ನು ಪ್ರಸ್ತಾಪ ಮಾಡಿದ್ದಾರೆ. ಇದನ್ನು ಹೊರತುಪಡಿಸಿ ಬೇರೆ ಏನು ಗೊತ್ತಿಲ್ಲ ಎಂದರು. ದಾವಣಗೆರೆಯಲ್ಲಿ ಮುಸ್ಲಿಂ ಮಹಿಳೆ ಮೇಲೆ ಹಲ್ಲೆ ಪ್ರಕರಣವನ್ನು ಸ್ಥಳೀಯ ಪೊಲೀಸರು ಗಮನಿಸುತ್ತಾರೆ. ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತಾರೆ. ಇಂತಹ ಘಟನೆಗಳಾದಾಗ ಯಾವುದೇ ರೀತಿಯ ಮುಲಾಜಿಲ್ಲದೆ ಕಾನೂನಿನ ಚೌಕಟ್ಟಿನಲ್ಲಿ ಕಠಿಣವಾದ ಕ್ರಮ ತೆಗೆದುಕೊಳ್ಳುವಂತೆ ಈಗಾಗಲೇ ಸೂಚಿಸಿದ್ದೇನೆ. ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ. ಅತ್ಯಾಚಾರ, ಮಹಿಳೆಯರ ಮೇಲೆ ಹಲ್ಲೆ ಪ್ರಕರಣಗಳಾದಾಗ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಕೆಲವು ವಿಶೇಷ ಸೂಚನೆಗಳನ್ನು ನೀಡಿದ್ದೇನೆ. ಅದರ ಪ್ರಕಾರ ಮಾಡಿಕೊಂಡು ಬರುತ್ತಿದ್ದಾರೆ. ಯಾವುದೇ ಪ್ರಕರಣವನ್ನು ಲಘುವಾಗಿ ತೆಗೆದುಕೊಂಡಿಲ್ಲ. ಎಲ್ಲ ಕೇಸ್ ಗಳಲ್ಲಿಯೂ ಆರೋಪಿಗಳನ್ನು ಬಂಧಿಸಿ, ಕಾನೂನು ಪ್ರಕಾರ ಕ್ರಮ ತೆಗೆದುಕೊಂಡಿದ್ದೇವೆ. ಒಬ್ಬೊಬ್ಬರ ಟೀಕೆಗೆ ಉತ್ತರಿಸಲು ಆಗುವುದಿಲ್ಲ. ಕೋಪ ಬಂದಾಗ, ನೋವಾದಾಗ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುತ್ತಾರೆ. ಅದಕ್ಕೆಲ್ಲ ಉತ್ತರಿಸಲು ಆಗುತ್ತದೆಯೇ ದೇಶದಲ್ಲಿ ಕಾನೂನು ಇದೆ. ಅದರ ಪ್ರಕಾರ ಪೊಲೀಸರು ಕ್ರಮ ತೆಗೆದುಕೊಳ್ಳುತ್ತಾರೆ ಎಂದು ಹೇಳಿದರು.ಟಾಟಾ ಟ್ರಸ್ಟ್‌ನವರು ಕೆಲವು ಮಾನದಂಡಗಳನ್ನು ಇಟ್ಟುಕೊಂಡು ನಡೆಸಿದ ಸಮೀಕ್ಷೆಯಲ್ಲಿ ಕರ್ನಾಟಕ ಪೊಲೀಸ್ ವ್ಯವಸ್ಥೆ ಮೊದಲ ಸ್ಥಾನದಲ್ಲಿದೆ. ಕರ್ನಾಟಕ ಪೊಲೀಸ್ ಬಹಳ ಶ್ರಮ ವಹಿಸಿ ಕೆಲಸ ಮಾಡುತ್ತಿದೆ ಎಂಬುದನ್ನು ಮೊದಲಿನಿಂದಲೂ ಅನೇಕ ಸಂದರ್ಭಗಳಲ್ಲಿ ಹೇಳಿದ್ದೇನೆ. ಇಂದು ಸತ್ಯವಾಗಿದೆ.

ಈ ವರದಿಯಿಂದ ರಾಜ್ಯ ಪೊಲೀಸ್ ಇಲಾಖೆಗೆ ಉತ್ತೇಜನ ನೀಡಿದಂತಾಗಿದೆ ಎಂದರು. ಜಾತಿಗಣತಿ ವರದಿ ಸಚಿವ ಸಂಪುಟದ ಕೈಸೇರಿದ ಬಳಿಕ ಒಂದೇ ದಿನದಲ್ಲಿ ಚರ್ಚಿಸಲು ಆಗುವುದಿಲ್ಲ. ವರದಿಯನ್ನು ಓದಲು ಸಮಯ ಬೇಕು ಎಂದು ಮುಖ್ಯಮಂತ್ರಿಯವರಿಗೆ ತಿಳಿಸಿದಾಗ, ವರದಿಯ ಪ್ರತಿ ನೀಡಿ, ಒಂದು ವಾರ ಕಾಲಾವಕಾಶ ನೀಡಿದ್ದಾರೆ. ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸುತ್ತೇವೆ. ಯಾರಿಗೆ ಏನೇನು ಅಭಿಪ್ರಾಯಗಳಿದೆ, ಅದನ್ನು ಕ್ಯಾಬಿನೆಟ್‌ನಲ್ಲಿ ಹೇಳುತ್ತಾರೆ. ಅಂತಿಮವಾಗಿ ಸರ್ಕಾರ ಏನು ತೀರ್ಮಾನ ಮಾಡುತ್ತದೆ ಎಂಬುದನ್ನು ಕಾದು ನೋಡೋಣ ಎಂದರು.



# ರಾಜ್ಯ ಶಿಕ್ಷಣ ನೀತಿ ಆಯೋಗ

# ವಯೋಮಿತಿ ಸಡಿಲ ಶಿಫಾರಸ್ಸಿನ ತಾತ್ಕಾಲಿಕ ವರದಿ ಪ್ರಕಟ: ಸಚಿವ ಮಧು ಬಂಗಾರಪ್ಪ

**ಬೆಂಗಳೂರು, ಏ. 16–** ಒಂದನೇ ತರಗತಿಗೆ ಪ್ರವೇಶ ಪಡೆಯುವ ಮಕ್ಕಳ ವಯೋಮಿತಿ ಸಡಿಲಗೊಳಿಸುವ ಕುರಿತ ಶಿಫಾರಸು ಒಳಗೊಂಡ ತಾತ್ಕಾಲಿಕ ವರದಿಯನ್ನು ರಾಜ್ಯ ಶಿಕ್ಷಣ ನೀತಿ ಆಯೋಗ ಸಲ್ಲಿಸಿದ್ದು, ಈ ಕುರಿತು ಶಾಲಾ ಶಿಕ್ಷಣ ಇಲಾಖೆ ನಿರ್ಧಾರ ಪ್ರಕಟಿಸಿದೆ. ಅದರ ಪ್ರಕಾರ 5 ವರ್ಷ 5 ತಿಂಗಳಾಗಿರುವ ಮಕ್ಕಳಿಗೆ ಇನ್ನು 1 ನೇ ತರಗತಿಗೆ ದಾಖಲಾತಿ ಮಾಡಲು ಸಾಧ್ಯವಾಗಲಿದೆ. ಇದಕ್ಕೂ ಮುನ್ನ ರಾಜ್ಯ ಪಠ್ಯಕ್ರಮದಲ್ಲಿ 1ನೇ ತರಗತಿಗೆ ಮಕ್ಕಳನ್ನು ದಾಖಲಾತಿ ಮಾಡಿಕೊಳ್ಳಲು 6 ವರ್ಷ ಆಗಿರಬೇಕಾಗಿರುವುದು ಕಡ್ಡಾಯವಾಗಿತ್ತು.

ಎಲ್ಕೆಜಿ, ಯುಕೆಜಿ ಆಗಿದ್ದರೆ ಮಾತ್ರ ಒಂದನೇ ತರಗತಿಗೆ ಪ್ರವೇಶ. ಮಕ್ಕಳಿಗೆ 5 ವರ್ಷ 5 ತಿಂಗಳಾಗಿರಬೇಕು. ಪೋಷಕರ ಒತ್ತಾಯದ ಮೇರೆಗೆ ಇದೊಂದು ವರ್ಷ ಮಾತ್ರ ಅವಕಾಶ. ಮುಂದಿನ ಶೈಕ್ಷಣಿಕ ವರ್ಷದಿಂದ ಕಡ್ಡಾಯವಾಗಿ 6 ವರ್ಷ ಆಗಿರಬೇಕು ಎಂದು ಮಧು ಬಂಗಾರಪ್ಪ ಸ್ಪಷ್ಟಪಡಿಸಿದರು. ಶಾಲಾ ಶಿಕ್ಷಣ ಇಲಾಖೆ 2022ರ ನವೆಂಬರ್‌ನಲ್ಲಿ ಹೊರಡಿಸಿದ ಆದೇಶದ ಪ್ರಕಾರ, ಜೂನ್ 1, 2025ರ ಒಳಗೆ ಆರು ವರ್ಷಗಳನ್ನು ಪೂರ್ಣಗೊಳಿಸಿದ ಮಕ್ಕಳು 2025–26 ಶೈಕ್ಷಣಿಕ ವರ್ಷಕ್ಕೆ ಒಂದನೇ ತರಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಇದರಿಂದ ಸಾವಿರಾರು ಮಕ್ಕಳ ಪ್ರವೇಶಕ್ಕೆ ಅಡ್ಡಿಯಾಗಿದೆ. ಮೊದಲು ಇದ್ದಂತೆ ಪೋಷಕರ ಇಚ್ಛೆಗೆ ಅನುಗುಣವಾಗಿ ಶಾಲೆಗೆ ಸೇರಿಸಲು ವಯೋಮಿತಿ ಸಡಿಲಿಕೆಯ ಅವಕಾಶ ನೀಡಬೇಕು ಎಂದು ಹಲವು ಪೋಷಕರು ಮನವಿ ಮಾಡಿದ್ದರು. ಅಂದರ್ರೆ 5 ವರ್ಷ 5 ತಿಂಗಳು ಇರುವ ಮಕ್ಕಳಿಗೆ ಈ ವರ್ಷ 1ನೇ ತರಗತಿ ನೋಂದಣಿಗೆ ಅವಕಾಶ ಮಾಡಲಾಗುತ್ತಿದೆ. 1ನೇ ತರಗತಿಯ ಅಡ್ಮಿಷನ್ ಜೊತೆಗೆ ಐಎಲು ಪ್ರವೇಶ ಪಡೆಯುವ ಮಕ್ಕಳಿಗೆ 4 ವರ್ಷ ವಯೋಮಿತಿ ನಿಗದಿಪಡಿಸಲಾಗುತ್ತಿದೆ. ಇದು ಕೇವಲ ರಾಜ್ಯಪತ್ಯ ಕ್ರಮಕ್ಕೆ ಮಾತ್ರ ಅನ್ವಯ. ಐಸಿಎಸ್ಸಿ, ಸಿಬಿಎಸ್‌ಇ ಬೋರ್ಡ್ ಬಗ್ಗೆ ನಾವು ನಿರ್ಧಾರ ಮಾಡಲು ಆಗೊಲ್ಲ ಎಂದು ಸ್ಪಷ್ಟಪಡಿಸಿದರು.

# ಸ್ವಪಕ್ಷದ ವಿರುದ್ಧವೇ ಕಿಡಿಕಾರುವ ಶಾಸಕರ ರಾಜೀನಾಮೆಗೆ ಶಿವಗಂಗಾ ಬಸವರಾಜ್ ಒತ್ತಾಯ

**ಬೆಂಗಳೂರು, ಏ.16–** ಜಾತಿಗಣತಿ ವಿಚಾರಕ್ಕೆ ಸಂಬಂಧಿಸಿದಂತೆ ಸ್ವಪಕ್ಷದ ವಿರುದ್ಧವೇ ಕಿಡಿಕಾರಿರುವ ಶಾಸಕ ಶಿವಗಂಗಾ ಬಸವರಾಜ್ ಲಿಂಗಾಯತ ಸಚಿವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಹೇಳಿದ್ದಾರೆ.

ದಾವಣಗೆರೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಡಿಕೆಶಿಯವರನ್ನು ಏಕೆ ಇಷ್ಟು ಇಷ್ಟ ಪಡುತ್ತೇವೆ ಅಂದ್ರೆ ಸಮಾಜಕ್ಕೆ ಅನ್ಯಾಯ ಆಗುತ್ತದೆ ಅಂದತಕ್ಷಣ ಸಭೆ ಕರೆದರು. ಆದರೆ ನಮ್ಮ ಲಿಂಗಾಯತ ಸಮಾಜದ 7 ಜನ ಸಚಿವರಿದ್ದರೂ ಧ್ವನಿ ಎತ್ತಿಲ್ಲ. ಶಾಸಕರು ಇದರ ಬಗ್ಗೆ ಚರ್ಚೆ ಮಾಡಲು ಫೋನ್ ಮಾಡಿದರೂ ಸಚಿವರು ರಿಸೀವ್ ಮಾಡಲ್ಲ. 7 ಜನ ಸಚಿವರು ಕೂಡ ಅಸಮರ್ಥರಿದ್ದಾರೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಲೇವಡಿ ಮಾಡಿದ್ದಾರೆ.

ಮೊನ್ನೆ ಈಶ್ವರ್ ಖಂಡ್ರೆಯವರಿಗೆ ಕಾಲ್ ಮಾಡಿದ್ದರೂ ರಿಸೀವ್ ಮಾಡಲಿಲ್ಲ. ಆದ್ರೆ ಒಕ್ಕಲಿಗ ಸಮಾಜಕ್ಕೆ ಅನ್ಯಾಯ ಆಗಿದೆ ಅಂದಕೂಡಲೇ ಡಿಕೆಶಿ ಸಭೆ ಮಾಡಿದ್ದಾರೆ. ಆ ಸಮಾಜದ ಶಾಸಕರ ಜೊತೆ ಚರ್ಚೆ ನಡೆಸಿದ್ದಾರೆ. ಆದ್ರೆ ಲಿಂಗಾಯತ ಸಮುದಾಯದ ಸಚಿವರು ಮಾತ್ರ ಚರ್ಚೆ ಮಾಡ್ತಾ ಇಲ್ಲ ಅಂತ ಸ್ವಪಕ್ಷದ ಸಚಿವರ ವಿರುದ್ಧ ಅಕ್ರೋಶ ಹೊರ ಹಾಕಿದ್ದಾರೆ. ನಮ್ಮ ಸಮಾಜದ ಸಚಿವರು ಅವರ ಸ್ವಾರ್ಥಕ್ಕಾಗಿ ಮಾತ್ರ ರಾಜಕೀಯ ಮಾಡ್ತಾ ಇದಾರೆ. ಜಾತಿಗಣತಿ ನಮ್ಮ ಸಚಿವರಿಗೆ ಅವಶ್ಯಕತೆ ಇಲ್ಲ. ಯಾವ ಯಾವ ಸಮುದಾಯಕ್ಕೆ ಅನ್ಯಾಯ ಆಗಿದೆಯೋ ಅವರೆಲ್ಲ ಸಭೆ ಮಾಡ್ತಿವಿ ಎಂದರಲ್ಲದೇ ಜಾತಿ ಜನಗಣತಿ ಮರುಸಮೀಕ್ಷೆಗೆ ಒತ್ತಾಯಿಸಿದ್ದಾರೆ. ನಾನು ಕೂಡ ನಮ್ಮ ಕ್ಷೇತ್ರದಲ್ಲಿ ಸಮೀಕ್ಷೆ ನಡೆಸುತ್ತಿದ್ದೇನೆ. ಇನ್ನೆರಡು ಮೂರು ದಿನಗಳಲ್ಲಿ ವರದಿ ನೀಡುತ್ತೇನೆ. ನಾಳೆ ಜಾತಿ ಜನಗಣತಿ ವರದಿ ಚರ್ಚೆ ಮಾಡಲಿ, ಆದ್ರೆ ಬಿಡುಗಡೆ ಮಾಡುವುದು ಬೇಡ. ಎಲ್ಲರ ಸಮೀಕ್ಷೆ ಮುಗಿದ ನಂತರ ಬಿಡುಗಡೆ ಮಾಡಲಿ. ಕ್ಷೇತ್ರದಲ್ಲಿ ಉತ್ತರ ಕೊಡುವವರು ನಾವು, ಎಲ್ಲಾ ಸಮುದಾಯಕ್ಕೆ ಉತ್ತರ ಕೊಡಬೇಕಿದೆ ಎಂದರು.



# ಜಾತಿಗಣತಿ ಸಮಸಮಾಜ ನಿರ್ಮಾಣಕ್ಕೆ ನಾಂದಿ– ಎಚ್.ಎಂ.ರೇವಣ್ಣ ಸಮರ್ಥನೆ

**ಬೆಂಗಳೂರು, ಏ. 16–** ಸಮಾನತೆ, ಸಾಮಾಜಿಕ ನ್ಯಾಯವನ್ನು ಎಲ್ಲಾ ವರ್ಗದ ಜನರಿಗೆ ನೀಡುವ ಉದ್ದೇಶದಿಂದ 2015 ರಲ್ಲಿ ರಾಜ್ಯದಲ್ಲಿ ಕೈಗೊಳ್ಳಲಾದ ಜಾತಿ ಸಮೀಕ್ಷೆ ವರದಿ ಸಮಸಮಾಜದ ಧ್ವನಿಯನ್ನು ಎತ್ತಿಹಿಡಿಯಲಿ ಎಂದು ಸರ್ಕಾರದ ಗ್ಯಾರೆಂಟಿ ಯೋಜನೆಯ ಅಧ್ಯಕ್ಷರಾದ ಎಚ್.ಎಂ.ರೇವಣ್ಣ ಪ್ರಕಟಿಸಿದರು. ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು, ಈ ಸಮೀಕ್ಷೆಯು ಸಾಮಾಜಿಕ, ಶೈಕ್ಷಣಿಕ ಹಾಗೂ ಅದ್ಯೋಗಿಕ ಸಮೀಕ್ಷೆಯೂ ಹೌದು. ನಮ್ಮ ರಾಜ್ಯದಲ್ಲಿ ಶಾಶ್ವತವಾದ ಹಿಂದುಳಿದ ವರ್ಗಗಳ ಆಯೋಗ ಅಸ್ತಿತ್ವದಲ್ಲಿದೆ. ಈ ಸಮೀಕ್ಷೆಯಿಂದ ಮೀಸಲಾತಿಯಲ್ಲಿ ಯಾವುದೇ ಬದಲಾವಣೆ ಯಾಗುವುದಿಲ್ಲ. ಖಚಿತವಾದ ಸಂಗತಿಗಳನ್ನು ಸರಿಪಡಿಸುವ ಉದ್ದೇಶ ಸಫಲವಾಗಲೆಂದು ಆಶಿಸುತ್ತೇನೆ. ಇದರಲ್ಲಿ ಒಟ್ಟು ಮೀಸಲಾತಿಯನ್ನು ಶೇಕಡ 75 ರಷ್ಟು ಹೆಚ್ಚಿಸಿದಂತಾಗುತ್ತದೆ.

ವಿಧಾನಪರಿಷತ್ ಮಾಜಿ ಸಭಾಪತಿ ವಿ.ಆರ್.ಸುದರ್ಶನ್ ಮಾತನಾಡಿ , 1931 ರಿಂದಲೂ ಯಾವುದೇ ರೀತಿಯ ಜಾತಿಗಣತಿ ನಡೆದಿಲ್ಲ. ಮಂಡಲ್ ತೀರ್ಪಿನ ನಂತರ ಸುಪ್ರೀಂಕೋರ್ಟ್‌ನ್ಯಾಯಾಲಯ ಅಂದಿನ ಹಿಂದುಳಿದ ವರ್ಗಗಳ ಸ್ಥಿತಿಗತಿಯನ್ನು ಅರಿತು, ಇವುಗಳಿಗೆ ಸಾಮಾಜಿಕ ನ್ಯಾಯ ಒದಗಿಸುವ ರಚನೆ ಶಾಶ್ವತ ಹಿಂದುಳಿದ ವರ್ಗಗಳ ಆಯೋಗವನ್ನು ಮಾಡಿ ನೀಡಿತು. ಅದರಂತೆ ಹಿಂದುಳಿದ ವರ್ಗಗಳ ಆಯೋಗ ಕೆಲಸ ನಿರ್ವಹಿಸುತ್ತಿದೆ. 2015 ರಲ್ಲಿ ಮುಖ್ಯ ಮಂತ್ರಿಯಾಗಿದ್ದ ಸಿದ್ದರಾಮಯ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದರು ಕಾಂತರಾಜ ಅವರಿಗೆ ಈ ಜಾತಿ ಸಮೀಕ್ಷೆ ನಡೆಸುವ ಜವಾಬ್ದಾರಿ ನೀಡಿದ್ದರು. ಗೆ 162 ಕೋಟಿ ರೂ ಖ ರ್ಚು ಮಾಡಿದ್ದನ್ನು ಸರ್ಕಾರ ಭರಿಸಿತ್ತು ಎಂದರು.

ಒಟ್ಟು 55 ಪ್ರಶ್ನಾವಳಿ ಆಧಾರದ ಮೇಲೆ ಕಾಂತರಾಜ ಆಯೋಗದ ಸಮೀಕ್ಷೆ ಮಾಡಿ ತಯಾರು ಮಾಡಿದ ವರದಿಯನ್ನು ತದನಂತರ ಬಂದ ಜಯಪ್ರಕಾಶ್ ಹೆಗ್ಡೆ ಆಯೋಗ ಸರ್ಕಾರಕ್ಕೆ ಒಪ್ಪಿಸಿದೆ. ಇದರ ಜೊತೆಗೆ ಜಯಪ್ರಕಾಶ್ ಹೆಗಡೆ ಆಯೋಗ ತಯಾರಿಸಿದ ನೂತನ ಮೀಸಲಾತಿ ಪಟ್ಟಿಯನ್ನು ಸಹ ಸರ್ಕಾರಕ್ಕೆ ಸಲ್ಲಿಸಿದೆ.

# ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರಾಗಿ.ರಘುನಾಥ್ ಅಧಿಕಾರ ಸ್ವೀಕಾರ

## ಹಿರಿಯ ಉಪಾಧ್ಯಕ್ಷರಾಗಿ ಆರ್.ಲಕ್ಷ್ಮಿಕಾಂತ್, ಖಜಾಂಚಿಯಾಗಿ ಸುಬ್ಬನರಸಿಂಹ ನೇಮಕ



**ಬೆಂಗಳೂರು, ಏ.16–** ಗಾಯಿತ್ರಿ ಭವನದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾದ ಎಸ್. ರಘುನಾಥ್ ರವರ ಪದಗ್ರಹಣ ಸಮಾರಂಭ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರಾಗಿ ಎಸ್.ರಘುನಾಥ್ ರವರು ವಿಶೇಷ ಪೂಜೆ ಸಲ್ಲಿಸಿ, ಪದಗ್ರಹಣ ಮಾಡಿದರು, ಹಿರಿಯ ಉಪಾಧ್ಯಕ್ಷರಾಗಿ ಆರ್.ಲಕ್ಷ್ಮಿಕಾಂತ್ ರವರು, ಖಜಾಂಚಿಯಾಗಿ ಸುಬ್ಬನರಸಿಂಹರವರನ್ನು ನೇಮಕ ಮಾಡಲಾಯಿತು.

ಎಸ್.ರಘುನಾಥ್ ರವರು ಮಾತನಾಡಿ ವಿಪ್ರರು ಬುದ್ಧಿವಂತರು, ವಿದ್ಯಾವಂತರು ಇಡಿ ವಿಶ್ವಕ್ಕೆ ಗೊತ್ತು, ಅದರು ನಮ್ಮಲ್ಲಿ ಆರ್ಥಿಕವಾಗಿ ಹಿಂದುಳಿದವರು ಇದ್ದಾರೆ ಮತ್ತು ವಿಪ್ರ ಸಮುದಾಯದ ಮಕ್ಕಳು ವಿದ್ಯಾಭ್ಯಾಸ ಪೂರೈಸಲು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಬ್ರಾಹ್ಮಣ ಸಮುದಾಯದ ಮಕ್ಕಳಿಗೆ ಶಿಕ್ಷಣಕ್ಕೆ, ಪ್ರಥಮ ಹಂತವಾಗಿ ಶಿಕ್ಷಣಕ್ಕೆ ಆದ್ಯತೆ ನೀಡಿ ಪ್ರೈಮರಿ ಶಾಲೆಯಿಂದ ಕಾಲೇಜಿನವರಗೆ ವಿದ್ಯಾಭ್ಯಾಸ ಮಾಡಲು ಕಟ್ಟಡ ಸ್ಥಾಪನೆ. ವಿಪ್ರರಿಗೆ ಆರ್ಥಿಕವಾಗಿ ಚೈತನ್ಯ ಶಕ್ತಿ ತುಂಬಬೇಕು ಈ ನಿಟ್ಟಿನಲ್ಲಿ ಹಲವಾರು ಯೋಜನೆಗಳು ರೂಪಿಸಲಾಗಿದೆ. ಚುನಾವಣೆ ಪೂರ್ವದಲ್ಲಿ ನೀಡಿದ ಭರವಸೆಗಳು ಈಡೇರಿಸಲು ಕಟಿಬದ್ಧವಾಗಿ ಶ್ರಮಿಸುತ್ತೇನೆ, ನುಡಿದಂತೆ ನಡೆ, ನಡೆದಂತೆ ನುಡಿಯುತ್ತೇನೆ. ರಾಜ್ಯದಲ್ಲಿರುವ ಎಲ್ಲ ವಿಪ್ರ ಭಾಂದವರು ಸಹಕಾರ, ಬೆಂಬಲ ನೀಡಬೇಕು. 100ಕೋಟಿ ರೂಪಾಯಿ ದೇಣಿಗೆ ದತ್ತಿ ನಿಧಿ ಯೋಜನೆಗೆ ಚಾಲನೆ ನೀಡಲಾಗಿದೆ 35ಲಕ್ಷಕ್ಕೂ ಹೆಚ್ಚು ಹಣ ದೇಣಿಗೆ ರೂಪದಲ್ಲಿ ಒಂದೇ ದಿನದಲ್ಲಿ ಬಂದಿದೆ, ಬ್ಯಾಂಕ್ ಡಿಪಾಸಿಟ್ ಮಾಡಲಾಗುವುದು ಆರ್.ಲಕ್ಷ್ಮಿಕಾಂತ್ ರವರು ಮಾತನಾಡಿ ಬ್ರಾಹ್ಮಣ ಎಂದರೆ ಎಲ್ಲರು ಒಂದೇ ನಮ್ಮಲ್ಲಿ ತಂಡಗಳು ಇಲ್ಲ, ಎಲ್ಲರೂ ಒಟ್ಟಾಗಿ ಒಂದು ತಂಡವಾಗಿ ವಿಪ್ರ ಶ್ರೇಯೋಭಿವೃದ್ಧಿಗೆ ಶ್ರಮಿಸಲಾಗುವುದು. 100 ಕೋಟಿ ದೇಣಿಗೆ ಸಂಗ್ರಹ ಮಾಡುವ ಕಾರ್ಯ ಆರಂಭವಾಗಿದೆ, ದಾನಿಗಳಿಂದ ಹಣ ವಿಪ್ರರ ಮಕ್ಕಳ ಶಿಕ್ಷಣ ಕ್ಷೇತ್ರಕ್ಕೆ ಸದಪಯೋಗವಾಗಲಿದೆ ಎಂದು ಹೇಳಿದರು

# ಬಾನುಮುಷ್ತಾಕ್ ಮನೆಗೆ ಭೇಟಿ ನೀಡಿ, 'ಅಮೃತ ಬೀಜ' ಕೃತಿ ನೀಡಿ ಅಭಿನಂದನೆ

**ಬೆಂಗಳೂರು, ಏ.16–** ಅಂತಾರಾಷ್ಟ್ರೀಯ ಬುಕರ್ ಪ್ರಶಸ್ತಿಗೆ ಪ್ರವೇಶ ಪಡೆದಿದ್ದ ಸಾಹಿತಿ ಬಾನುಮುಷ್ತಾಕ್ ಅವರ ಸಣ್ಣ ಕಥೆಗಳ ಅನುವಾದಿತ ಸಂಕಲನ 'ಹಾರ್ಟ್ ಲ್ಯಾಂಪ್' ಕೃತಿ ಅಂತಿಮ ಸುತ್ತಿಗೆ ಆಯ್ಕೆಯಾಗಿದೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)ದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಹಾಸನದಲ್ಲಿ ಬಾನುಮುಷ್ತಾಕ್ ಅವರ ಮನೆಗೆ ಭೇಟಿ ನೀಡಿ, ಅಮೃತ ಬೀಜ ಕೃತಿ ನೀಡಿ ಅಭಿನಂದಿಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ತಗಡೂರು ಅವರು, ಹಾಸನದಿಂದ ಪಿ.ಲಂಕೇಶ್ ಪತ್ರಿಕೆಯ ವರದಿಗಾರರಾಗಿ ಗುರುತಿಸಿಕೊಂಡ ಭಾನುಮುಷ್ತಾಕ್ ಅವರು ವಕೀಲರಾಗಿ, ನಗರಸಭೆ ಸದಸ್ಯರಾಗಿ ಹಾಗೂ ಪ್ರಗತಿಪರ ಸಾಹಿತಿಯಾಗಿ ಗುರುತಿಸಿಕೊಂಡವರು.



ಅನ್ಯಾಯದ ವಿರುದ್ಧ ಧ್ವನಿ ಎತ್ತಿದವರು. ಸಂಘಟಕಿಯಾಗಿಯೂ ಕೆಲಸ ಮಾಡಿದವರು. ಅವರ ಕೃತಿ ಬುಕರ್ ಪ್ರಶಸ್ತಿಯ ಹೊಸ್ತಿಲಿನ ತನಕ ಬಂದು ನಿಂತಿರುವುದು ಹೆಮ್ಮೆಯ ಸಂಗತಿ. ಗಿರೀಶ್ ಕಾಸರವಳ್ಳಿ ನಿರ್ದೇಶನ ಮಾಡಿದ ಹಸೀನಾ ಚಲನಚಿತ್ರ ಕಥೆ ಕೂಡ ಬಾನುಮುಷ್ತಾಕ್ ಅವರ ಹಸೀನಾ ಮತ್ತು ಇತರ ಕಥೆಗಳಿಂದಲೇ ಆಯ್ಕೆ ಮಾಡಿದ್ದು. ಹಸೀನಾ ಚಿತ್ರಕ್ಕೆ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಸಿಕ್ಕಾಗ ಇಡೀ ತಂಡವನ್ನು ಹಾಸನಕ್ಕೆ ಆಹ್ವಾನಿಸಿದ್ದ, ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘವು ಕಲಾಭವನದಲ್ಲಿ ಏರ್ಪಡಿಸಿದ್ದ ಅದ್ದೂರಿ ಕಾರ್ಯಕ್ರಮದಲ್ಲಿ ಸನ್ಮಾನಿಸಿತ್ತು. ಅದೆಲ್ಲವೂ ಮರೆಯಲಾಗದ ಕ್ಷಣ ಎನ್ನುವುದನ್ನು ಶಿವಾನಂದ ತಗಡೂರು ಸ್ಮರಿಸಿದರು.

ಬಾನುಮುಷ್ತಾಕ್ ಅವರ ಹಾರ್ಟ್ ಲ್ಯಾಂಪ್ ಕೃತಿ ಬುಕರ್ ಪ್ರಶಸ್ತಿಗೆ ಭಾಜನವಾಗಲಿ ಹಾರೈಸಲಾಯಿತು. ಹಾಸನ ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಕೆ.ಆರ್.ಮಂಜುನಾಥ್, ಔಟ್ ಲುಕ್ ಪತ್ರಿಕೆಯ ವರದಿಗಾರ ವಿಕಾರ್ ಅಹಮದ್ ಅವರು ಈ ಸಂದರ್ಭದಲ್ಲಿ ಹಾಜರಿದ್ದರು.

# ಶಿವಪೂಜೆ ಶಿವಧ್ಯಾನದಿಂದ ಮಾನಸಿಕ ಶಾಂತಿ ಪ್ರಾಪ್ತಿ: ಶ್ರೀ ರಂಭಾಪುರಿ ಜಗದ್ಗುರುಗಳು

**ಹಾವೇರಿ, ಏ.16–** ಆಧುನಿಕ ಕಾಲದಲ್ಲಿ ಬೇಕಾದಷ್ಟು ಪ್ರಗತಿಯನ್ನು ಕಂಡರೂ ಮನಸ್ಸಿಗೆ ಶಾಂತಿ ನೆಮ್ಮದಿ ಇಲ್ಲ. ಶಿವಪೂಜೆ ಶಿವ ಧ್ಯಾನದಿಂದ ಮಾನಸಿಕ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರ ಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಗುತ್ತಲ ಪಟ್ಟಣದ ಶ್ರೀ ಹೇಮಗಿರಿ ಚನ್ನಬಸವೇಶ್ವರ ಶಿಲಾ ಮಠ ಉದ್ಘಾಟನೆ ಹಾಗೂ ಕಳಸಾರೋಹಣ ಅಂಗವಾಗಿ ಜರುಗಿದ ಇಷ್ಟಲಿಂಗ ಮಹಾಪೂಜಾ ಮತ್ತು ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಮನುಷ್ಯ ಭೌತಿಕವಾಗಿ ಬಹಳಷ್ಟು ಸಂಪತ್ತು ಸಂಪನ್ಮೂಲ ಸಂಪಾದಿಸಿದರೂ ಇರಬೇಕಾದ ಸಂತೃಪ್ತಿ ಸಮಾಧಾನ ಇಲ್ಲ. ನಾಗರೀಕತೆಯ ನಾಗಾಲೋಟದಲ್ಲಿ ಮನುಷ್ಯ ಸಿಲುಕಿ ತೊಳಲಾಡುತ್ತಿದ್ದಾನೆ. ಗುರು ಕೊಟ್ಟ ಇಷ್ಟಲಿಂಗ ಪೂಜೆಯಿಂದ ಅನಿಷ್ಟಗಳು ದೂರವಾಗಿ ಇಷ್ಟಾರ್ಥಗಳು ಪ್ರಾಪ್ತವಾಗುತ್ತವೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ.

ಶಿವಪೂಜೆಯಿಂದ ಪೂರ್ವ ಜನ್ಮದ ಕರ್ಮಗಳು ಕೂಡ ನಾಶವಾಗುತ್ತವೆ. ಪ್ರತಿಯೊಬ್ಬರು ಶಿವನನ್ನು ಪೂಜಿಸಿ ತಮ್ಮ ಇಷ್ಟಾರ್ಥಗಳನ್ನು ಪಡೆದುಕೊಂಡಿದ್ದಾರೆ. ಬ್ರಹ್ಮ ವಿಷ್ಣು ಸಕಲ ದೇವಾನುದೇವತೆಗಳು ಸಹ ಶಿವನನ್ನು ಪೂಜಿಸಿ ಸತ್ಫಲಗಳನ್ನು ಪಡೆದಿದ್ದಾರೆ. ಜಗತ್ತನ್ನು ವ್ಯಾಪಿಸಿರುವ ಭಗವಂತ ವೀರಶೈವರ ಕರದಲ್ಲಿ



ಕರದಿಷ್ಟ ಲಿಂಗವಾಗಿ ಪೂಜೆಗೊಳ್ಳುತ್ತಿದ್ದಾನೆ. ದೇಹವೇ ದೇವಾಲಯ ಇಷ್ಟಲಿಂಗವೇ ಆರಾಧ್ಯ ದೈವವೆಂದು ಪೂಜಿಸುವ ಸಮುದಾಯ ಯಾವು ದಾದರೂ ಇದ್ದರೆ ಅದು ವೀರಶೈವ ಲಿಂಗಾಯತ ಸಮಾಜ. ಅಂಗದ ಮೇಲೆ ಲಿಂಗ ಇದ್ದವರೆಲ್ಲರೂ ವೀರಶೈವ–ಲಿಂಗಾಯತರು.

ಹೆಸರಿಗೆ ಲಿಂಗಾಯಿತ ರಾದರೆ ಸಾಲದು ಆಚರಣೆಯೊಂದಿಗೆ ವೀರಶೈವ–ಲಿಂಗಾಯಿತ ಆಗಬೇಕೆಂಬುದು ಆಚಾರ್ಯರ ಮತ್ತು ಶರಣರ ಸದಾಶಯ ಆಗಿದೆ. ವೀರಶೈವ ತತ್ವ ಸಿದ್ಧಾಂತಗಳಿಗೆ ತಲೆಬಾಗಿ ಬರುವರೆಲ್ಲರೂ ಇಷ್ಟ ಲಿಂಗವನ್ನು ಪೂಜಿಸಬಹುದೆಂದು ನಿರೂಪಿಸಿದ್ದಾರೆ. ಗುತ್ತಲದ ಹೇಮಗಿರಿ ಮಠ ಭವ್ಯ ಶಿಲಾ ಮಠವಾಗಿ ನಿರ್ಮಾಣಗೊಂಡಿದ್ದು ತಮಗೆ ಅತ್ಯಂತ ಸಂತೋಷವನ್ನು ಉಂಟುಮಾಡಿದೆ ಎಂದರು. ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಪ್ರಾಸ್ತಾವಿಕವಾಗಿ ಮಾತನಾಡಿದರು. ಅಂಗೂರ್ ಹಿರೇಮಠದ ಶಿವಯೋಗೀಶ್ವರ ಶ್ರೀಗಳು, ಗುತ್ತಲ ಅಗಡಿಯ ಗುರುಸಿದ್ಧ ಶ್ರೀಗಳು ಉಪಸ್ಥಿತರಿದ್ದರು. ಕೋವಳ್ಳಿ ಮಠದ ಕೊಟ್ರಯ್ಯ ಚನ್ನವೀರಪ್ಪ ಕುರುವತ್ತಿ, ಅಂಗಡಿ ಕೊಟ್ರೇಶಪ್ಪ ಹಾಗೂ ಹೇಮಗಿರಿ ಮಠದ ಎಲ್ಲ ವಂಶಸ್ಥರು ಪಾಲ್ಗೊಂಡಿದ್ದರು ಶ್ರೀ ರಂಭಾಪುರಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆಯಲ್ಲಿ ಸಹಸ್ರಾರು ಜನರು ಪಾಲ್ಗೊಂಡು ಆಶೀರ್ವಾದ ಪಡೆದರು. ಸಮಾರಂಭದ ನಂತರ ಅನ್ನದಾಸೋಹ ಜರಗಿತು.

**ಕರ್ನಾಟಕದ ಮುಕುಟ 'ಬೀದರ್' ನಲ್ಲಿ 2025ಕೋಟಿ ರೂ. ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದ ಸಿಎಂ**

# ಗ್ಯಾರಂಟಿಗಳನ್ನು ಜಾರಿಮಾಡಿ ನುಡಿದಂತೆ ನಡೆದ ಕಾಂಗ್ರೆಸ್ ಸರ್ಕಾರ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೀದರ್, ಏಪ್ರಿಲ್ 16:** ಗ್ಯಾರಂಟಿಗಳನ್ನು ಜಾರಿ ಮಾಡಿ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಬೀದರ್ ಜಿಲ್ಲೆಯಲ್ಲಿ ರೂ 2025 ಕೋಟಿ ಮೌಲ್ಯದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಸಮಾರಂಭ ಹಾಗೂ ಬೀದರ್ ಹಾಗೂ ಬೆಂಗಳೂರು ನಾಗರಿಕ ವಿಮಾನ ಸೇವೆಯ ಪುನರಾರಂಭ ಕಾರ್ಯಕ್ರಮ ದಲ್ಲಿ ಭಾಗವಹಿಸಿ* ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು. 2025ರ ಮೇ 20 ರಂದು ಸರ್ಕಾರಕ್ಕೆ ಎರಡು ವರ್ಷ ತುಂಬಲಿದ್ದು, ಸರ್ಕಾರದ ಎರಡು ವರ್ಷದ ಸಾಧನೆಯ ಕಾರ್ಯಕ್ರಮವನ್ನು ರಾಜ್ಯದ ಯಾವುದಾದರೂ ಜಿಲ್ಲೆಯಲ್ಲಿ ಆಚರಿಸಲಿದ್ದೇವೆ. ಕರ್ನಾಟಕ ರಾಜ್ಯದ ಮುಕುಟ ಎಂದೇ ಕರೆಯಲ್ಪಡುವ ಬೀದರ್ ಜಿಲ್ಲೆಯಲ್ಲಿ ಇಂದು 2025 ಕೋಟಿ. ರೂ. ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗಿದೆ. ಅರಣ್ಯ ಸಚಿವ ಈಶ್ವರ ಖಂಡ್ರೆ ಹಾಗೂ ಶಾಸಕ ರಹೀಂ ಖಾನ್ ರವರು ಕ್ಷೇತ್ರಕ್ಕೆ ಉತ್ತಮ ಕೊಡುಗೆ ನೀಡುತ್ತಿದ್ದಾರೆ. ಲೋಕಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಸಾಗರ್ ಖಂಡ್ರೆಯವರು ಭವಿಷ್ಯದಲ್ಲಿ ಉತ್ತಮ ಜನನಾಯಕನಾಗಿ ಹೊರಹೊಮ್ಮಲಿ ಎಂದು ಶುಭ ಹಾರೈಸಿದರು. ಬೀದರ್ ನ ಎಲ್ಲ ಕ್ಷೇತ್ರಗಳಿಗೆ ಭೇಟಿ ನೀಡಿದ್ದೇನೆ ಎಂದರು.

**ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಟೀಕಿಸಿದ ಬಿಜೆಪಿ;**


ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಚುನಾವಣಾ ಪೂರ್ವದಲ್ಲಿ ನೀಡಿದ್ದ ಐದು ಭರವಸೆಗಳನ್ನು ಕಾಂಗ್ರೆಸ್ ಸರ್ಕಾರ ಜಾರಿ ಮಾಡಿದೆ. ಗ್ಯಾರಂಟಿಗಳನ್ನು ಜಾರಿಮಾಡಲು ಸಾಧ್ಯವಿಲ್ಲ ಹಾಗೂ ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಪ್ರಧಾನಿ ಮೋದಿಯವರು ಹಾಗೂ ಬಿಜೆಪಿಯವರು ಟೀಕೆ ಮಾಡಿದರು. ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿನಂತೆ ನಡೆಯುತ್ತದೆ ಎಂಬುದನ್ನು ಜನರು ಅರಿತಿದ್ದಾರೆ. ಆದ್ದರಿಂದಲೇ ವಿಧಾನಸಭೆ ಹಾಗೂ ಲೋಕಸಭೆಯಲ್ಲಿ ರಾಜ್ಯದ ಜನ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದಾರೆ ಎಂದರು.

**ದೇಶದಲ್ಲಿ ಬೆಲೆಯೇರಿಕೆಯಾಗಲು ಕೇಂದ್ರದ ಬಿಜೆಪಿ ಸರ್ಕಾರ ಕಾರಣ:**

ಪ್ರತಿಪಕ್ಷಗಳು ಗ್ಯಾರಂಟಿ ಯೋಜನೆ ಜಾರಿ ಮಾಡಿ ಅಭಿವೃದ್ಧಿ ಕೆಲಸಗಳಿಗೆ ತಿಲಾಂಜಲಿ ಇಟ್ಟಿದ್ದಾರೆ ಎಂದು ಆರೋಪಿಸುತ್ತಾರೆ. ಬಿಜೆಪಿಯ ಆರ್.ಅಶೋಕ್, ನಾರಾಯಣಸ್ವಾಮಿ ಹಾಗೂ ವಿಜಯೇಂದ್ರ ಅವರು ಬೀದರ್ ಬಂದು ನೋಡಲು ಆಹ್ವಾನ ನೀಡುತ್ತೇನೆ ಎಂದು ಸವಾಲು ಹಾಕಿದ ಮುಖ್ಯಮಂತ್ರಿಗಳು, ಸರ್ಕಾರ ದಿವಾಳಿಯಾಗಿದ್ದರೆ 2025 ಕೋಟಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲು ಸಾಧ್ಯವಾಗುತ್ತಿತ್ತೆ ಎಂದರು. ಬಿಜೆಪಿ ರಾಜ್ಯಾದ್ಯಂತ ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ. ಬಿಜೆಪಿಗೆ ಮಾನ ಮರ್ಯಾದೆ ಇದ್ದರೆ, ಕಿಂಚಿತ್ತಾದರೂ ಜನಪರವಾದ ಕಾಳಜಿ ಇದ್ದರೆ ಸುಳ್ಳು ನಾಟಕವನ್ನು ಬಂದ್ ಮಾಡಬೇಕು. ದೇಶದಲ್ಲಿ ಬೆಲೆಯೇರಿಕೆಯಾಗಿದ್ದರೆ ಕೇಂದ್ರದ ಬಿಜೆಪಿ ಸರ್ಕಾರ ಕಾರಣ ಎಂದರು.

**ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜನಾಕ್ರೋಶ ಯಾತ್ರೆ:**

ಮನ್ ಮೋಹನ್ ಸಿಂಗ್ ಅವರ ಸರ್ಕಾರವಿದ್ದಾಗ ಪೆಟ್ರೋಲ್ ಬೆಲೆ 73 ರೂ. ಹಾಗೂ ಡೀಸೆಲ್ ಬೆಲೆ 46.59 ಪೈಸೆ ಇತ್ತು. ಇಂದು ಎಷ್ಟಾಗಿದೆ? ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು ಅಚ್ಚೆ ದಿನ್ ಬರುತ್ತದೆ ಎಂದು ನರೇಂದ್ರ ಮೋದಿ ಹೇಳಿದ್ದರು. ಅಚ್ಚೆ ದಿನ್ ಬಂದಿದೆಯೇ ಎಂದು ಪ್ರಶ್ನಿಸಿದರು.




ಅಬಕಾರಿ ಡ್ಯೂಟಿ ಡೀಸೆಲ್ ಮೇಲೆ 100.45 ರೂಗಳಿತ್ತು. 9.40 ರೂ ಪೆಟ್ರೋಲ್ ಮೇಲಿತ್ತು ಇಂದು ಎಷ್ಟಾಗಿದೆ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ 118 ರಿಂದ 120 ರೂ. ವರೆಗಿತ್ತು. ಮೊನ್ನೆಯವರೆಗೆ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಕಡಿಮೆಯಾಗಿದೆ. 35 ಡಾಲರ್ ಗಳಿಗೆ ಇಳಿದಿದೆ. 120 ಡಾಲರ್ ಇರುವಾಗ ಪೆಟ್ರೋಲ್ ಬೆಲೆ 73, ಡೀಸಲ್ ಬೆಲೆ 46 ರೂ.ಗಳಿದ್ದರೆ , ಇಂದು 90 ರೂ.ಗಳಿಗಿಂತ ಹೆಚ್ಚು ಮಾಡಿದ್ದಾರೆ. ಇದಕ್ಕೆ ನರೇಂದ್ರ ಮೋದಿಯವರ ಕೇಂದ್ರ ಸರ್ಕಾರ. ಬಿಜೆಪಿಯವರಿಗೆ ಮಾನ ಮರ್ಯಾದೆ ಇದ್ದರೆ ಇದ್ದನ್ನು ಕೇಳಬೇಕು. ಗ್ಯಾಸ್ ಸಿಲಿಂಡರ್ ಬೆಲೆ 420 ರೂ ಇತ್ತು, ಈಗ ಸಾವಿರ ರೂಪಾಯಿಗೆ ಏರಿದೆ. ಅವರ ಆಡಳಿತದ ತಪ್ಪು ಗಳನ್ನು ಮುಚ್ಚಿಕೊಂಡು ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜನಾಕ್ರೋಶ ಯಾತ್ರೆ ಕೈಗೊಂಡಿದ್ದಾರೆ. ಬಿಜೆಪಿ ಲಜ್ಜೆಗೆಟ್ಟವರು. 2018 ರಲ್ಲಿ ನೀಡಿದ್ದ 400 ಭರವಸೆಗಳಲ್ಲಿ 10% ಭರವಸೆಗಳನ್ನು ಈಡೇರಿಸಲಾಗಲಿಲ್ಲ. 2008,2018 ರಲ್ಲಿ ಜನರ ಆಶೀರ್ವಾದ ಪಡೆದು ಅಧಿಕಾರಕ್ಕೆ ಬಂದಿಲ್ಲ. ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದರು. ಆಪರೇಶನ್ ಕಮಲ ಮಾಡಿ ಅಧಿಕಾರಕ್ಕೆ ಬಂದವರು ನಮಗೆ ಪಾಠ ಹೇಳಲು ಬರುತ್ತಾರೆ. ಇವರು ಜನವಿರೋಧಿ ಸರ್ಕಾರ ಎಂದು ಹಣೆಪಟ್ಟಿ ಹಚ್ಚಲು ಹೊರಟಿದ್ದಾರೆ. ಕಳೆದ ವರ್ಷ 3 ಲಕ್ಷ 71ಸಾವಿರ ಕೋಟಿ ರೂ.ಗಳ ಬಜೆಟ್ ಮಂಡಿಸಿದ್ದು, ಈ ವರ್ಷ 4 ಲಕ್ಷದ 9 ಸಾವಿರ ಕೋಟಿ ರೂ. ಗಳ ಬಜೆಟ್ ಮಂಡಿಸಲಾಗಿದೆ. ಆರ್ಥಿಕವಾಗಿ ಸದೃಢವಿದ್ದುದ್ದಕ್ಕೆ 38 ಸಾವಿರ ಕೋಟಿಗಳಿಗೆ ಬಜೆಟ್ ಗಾತ್ರ ಹೆಚ್ಚಿಸಲು ಸಾಧ್ಯವಾಯಿತು ಎಂದರು.

**ಕರ್ನಾಟಕ ಆರ್ಥಿಕವಾಗಿ ಸದೃಢವಾಗಿದೆ:**

ಕಳೆದ ವರ್ಷ 56 ಸಾವಿರ ಕೋಟಿ ಬಂಡವಾಳ ವೆಚ್ಚ ಮಾಡಿದ್ದರೆ, ಈ ವರ್ಷ 83 ಸಾವಿರ ಕೋಟಿ. ಗಳ ಬಂಡವಾಳ ವೆಚ್ಚ ಮಾಡಲಾಗುವುದು. ದಿವಾಳಿಯಾಗಿರುವ ಸರ್ಕಾರ ಬಂಡವಾಳ ವೆಚ್ಚ ಮಾಡಲು ಸಾಧ್ಯವಿಲ್ಲ. 2002 ರಲ್ಲಿ ವಿತ್ತೀಯ ಹೊಣೆಗಾರಿಕೆ ಕಾಯ್ದೆಯನ್ನು ಕರ್ನಾಟಕದಲ್ಲಿ ಜಾರಿ ಮಾಡಿದ್ದು, ಅದರ ಮೂರು ಮಾನದಂಡಗಳ ಪ್ರಕಾರ ಬಜೆಟ್ ಮಂಡನೆ ಮಾಡುವಾಗ ಹಣಕಾಸಿನ ಪರಿಸ್ಥಿತಿ ಚೆನ್ನಾಗಿದ್ದರೆ ರಿವನ್ಯೂ ಸರ್ಪ್ಲಸ್ ಇರಬೇಕು. ಸಾಲ ಮಾಡುವಾಗ ಜಿಡಿಪಿ ಯ 25% ಒಳಗಿರಬೇಕು. ನಾವು ಈ ಮಾನದಂಡಗಳ ಒಳಗೆ ಇದ್ದೇವೆ. ನಾವು ಅಭಿವೃದ್ಧಿಗೆ, ಗ್ಯಾರಂಟಿ ಯೋಜನೆಗಳಿಗೆ ಹಣವನ್ನು ಮೀಸಲಿಟ್ಟಿದ್ದೇವೆ. ಕಳೆದ ವರ್ಷ ಗ್ಯಾರಂಟಿಗಳಿಗೆ 52009 ಸಾವಿರ ಕೋಟಿ ಮೀಸಲಿಟ್ಟು,ಈ ವರ್ಷ 50,018 ಕೋಟಿ ಗಳನ್ನು ಮೀಸಲಿಟ್ಟಿದ್ದು, ಕರ್ನಾಟಕ ಆರ್ಥಿಕವಾಗಿ ಸದೃಢವಾಗಿದೆ. ಆದ್ದರಿಂದಲೇ 2025 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಗಳನ್ನು ರೂಪಿಸಲಾಗಿದೆ ಎಂದರು.

**ಸುಳ್ಳೇ ಬಿಜೆಪಿ ಮನೆದೇವರು:**

ಬಿಜೆಪಿ ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ಸುಳ್ಳು ಅವರ ಮನೆದೇವರು. ರಾಜ್ಯದ ಜನರನ್ನು ಸುಳ್ಳು ಹೇಳಿ ದಾರಿ ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ. ಸರ್ಕಾರ, ಹಾಗೂ ನನ್ನ ಮೇಲೆ ಅಪಪ್ರಚಾರ ,ಸುಳ್ಳು ಆಪಾದನೆಗಳನ್ನು ಮಾಡಿದ್ದಾರೆ. ಆದರೂ ಮೂರೂ ಉಪಚುನಾವಣೆಗಳಲ್ಲಿ ನಾವು ಗೆದ್ದಿದ್ದೇವೆ ಎಂದರು

# ಬೀದರ್ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ: ಗೆಜೆಟ್ ಅಧಿಸೂಚನೆ ಹೊರಡಿಸಿದ ಸಿಎಂಗೆ ಖಂಡ್ರೆ ಧನ್ಯವಾದ

**ಬೀದರ, ಏ. 16:** ಬೀದರ್ ನಗರಸಭೆಯೊಂದಿಗೆ ಸಮೀಪದ 6 ಗ್ರಾಮ ಪಂಚಾಯ್ತಿಗಳ 16 ಗ್ರಾಮಗಳನ್ನು ಸೇರಿಸಿ ದೊಡ್ಡ ನಗರ ಪ್ರದೇಶ ಎಂದು ಘೋಷಿಸಲು ಮತ್ತು ಬೀದರ್ ಮಹಾನಗರ ಪಾಲಿಕೆ ಪ್ರದೇಶ ಎಂದು ನಿರ್ದಿಷ್ಟಪಡಿಸಲು ಗೆಜೆಟ್ ಅಧಿಸೂಚನೆ ಹೊರಡಿಸಿರುವ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹಾಗೂ ಪೌರಾಡಳಿತ ಸಚಿವ ರಹೀಂ ಖಾನ್ ಸರ್ಕಾರಕ್ಕೆ ಧನ್ಯವಾದ ಅರ್ಪಿಸಿದ್ದಾರೆ.

ಮುಖ್ಯಮಂತ್ರಿಗಳು ಬೀದರ್‌ಗೆ ಭೇಟಿ ನೀಡುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲನೆ ಮಾಡಿದ ಸಚವರು, ಈ ಗೆಜೆಟ್ ಅಧಿಸೂಚನೆ ಹೊರಬಿದ್ದಿದ್ದು, ಇದು ಬೀದರ್ ಪಾಲಿಗೆ ಐತಿಹಾಸಿಕ ಕ್ಷಣವಾಗಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ. ಬೀದರ್ ಮಹಾನಗರ ಪಾಲಿಕೆ ಆಗುವುದರಿಂದ ನಗರದ ಅಭಿವೃದ್ಧಿ ವೇಗ ಪಡೆಯಲಿದೆ ಮತ್ತು ಬೀದರ್ ಜಿಲ್ಲೆಯ ಸರ್ವಾಂಗೀಣ ಪ್ರಗತಿಗೆ ಅನುಕೂಲವಾಗುತ್ತದೆ ಎಂದು ಇಬ್ಬರೂ ಸಚಿವರು ತಿಳಿಸಿದ್ದಾರೆ.

ಸಂಸತ್ ಸದಸ್ಯ ಸಾಗರ ಖಂಡ್ರೆ ಅವರೂ ಬೀದರ್ ನಗರಸಭೆ ಯನ್ನು ಮಹಾನಗರ ಪಾಲಿಕೆಯಾಗಿ ಉನ್ನತೀಕರಿಸುವ



ನಿರ್ಧಾರ ಮಾಡಿ ಪ್ರಸ್ತಾವನೆಯ ಗೆಜೆಟ್ ಅಧಿಸೂಚನೆ ಹೊರಡಿಸಿರುವ ಬಗ್ಗೆ ಹರ್ಷ ವ್ಯಕ್ತಪಡಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಗರಾಭಿವೃದ್ಧಿ ಸಚಿವರು ಹಾಗೂ ಸರ್ಕಾರಕ್ಕೆ ಧನ್ಯವಾದ ಅರ್ಪಿಸಿದರು. ಇದೇ ಸಂದರ್ಭದಲ್ಲಿ ಬೀದರ್ ನಗರದ ಜನತೆಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಲೆಕ್ಕಪತ್ರ ಇಲಾಖೆ ಉಪನಿರ್ದೇಶಕಿ ಚೈತ್ರಾ ನಿಧನ

**ಬೆಂಗಳೂರು, ಏ. 16:** ರಾಜ್ಯ ಲೆಕ್ಕಪರಿಶೋಧನ ಮತ್ತು ಲೆಕ್ಕಪತ್ರ ಇಲಾಖೆಯ ಉಪನಿರ್ದೇಶಕಿ ಚೈತ್ರಾ ಆರ್ (32) ಕಡಿಮೆ ರಕ್ತದೊತ್ತಡದಿಂದಾಗಿ ಏಪ್ರಿಲ್ 14 ಸೋಮವಾರ ರಾತ್ರಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದರು. ತಾಂತ್ರಿಕ ಶಿಕ್ಷಣ ಇಲಾಖೆಯ ಲೆಕ್ಕಪತ್ರ ಶಾಖೆಯ ಉಪನಿರ್ದೇಶಕಿ ಹಾಗೂ ಇ–ಆಡಳಿತ ಇಲಾಖೆಯ ಲೆಕ್ಕಾಧಿಕಾರಿಯಾಗಿ ಅವರು ಕಾರ್ಯನಿರ್ವಹಿಸುತ್ತಿದ್ದರು. ತಂದೆ,ತಾಯಿ,ಓರ್ವ ಸಹೋದರಿ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.ಪಾರ್ಥಿವ ಶರೀರದ ಅಂತ್ಯಕ್ರಿಯೆ ಮಂಗಳವಾರ ಏಪ್ರೀಲ್ 15 ರ ಸಂಜೆ



ರಾಜಾಜಿನಗರದ ರುದ್ರಭೂಮಿಯಲ್ಲಿ ಜರುಗಿತು

# ಬಳ್ಳಾರಿಯಲ್ಲಿ ಮೊಟ್ಟ ಮೊದಲನೇ ಬಾರಿಗೆ ಅಂಬೇಡ್ಕರ್ ಕ್ರಿಕೆಟ್ ಪ್ರೀಮಿಯರ್ ಲೀಗ್ ಆಯೋಜನೆ

**ಬಳ್ಳಾರಿ ಏ 16:** ಡಾ" ಬಿ ಆರ್ ಅಂಬೇಡ್ಕರ್ ಅವರ 134ನೇ ಜಯಂತಿ ಅಂಗವಾಗಿ ಬಳ್ಳಾರಿಯಲಿ ಮೊಟ್ಟ ಮೊದಲನೇ ಬಾರಿಗೆ ಅಂಬೇಡ್ಕರ್ ಕ್ರಿಕೆಟ್ ಪ್ರೀಮಿಯರ್ ಲೀಗ್ ಕ್ರೀಡಾಕೂಟವನ್ನು ವಿಮ್ಸ್ ಕ್ರೀಡಾಂಗಣದಲ್ಲಿ ಏ.7 ರಿಂದ 14 ರವರೆಗೆ ಹಮ್ಮಿಕೊಳ್ಳಲಾಗಿತ್ತು, ಬಿ.ಆರ್.ಅಂಬೇಡ್ಕರ್ ರವರ ಜಯಂತಿಯಂದು ಅಂತಿಮ



ಪಂದ್ಯಾವಳಿಯಲ್ಲಿ (ಪ್ರಥಮ ಸ್ಥಾನವನ್ನು ಎಜೆ 11 ತಂಡ). ಮತ್ತು (ದ್ವಿತೀಯ ಸ್ಥಾನ ಜಿ 11ತಂಡದವರಿಗೆ) ಅತಿಥಿಗಳಾಗಿ ಆಗಮಿಸಿದ್ದ ಬಾಬು ಜಗ ಜೀವನರಾವ್, ಚರ್ಮ ಮತ್ತು ಕೈಗಾರಿಕಾ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಮುಂಡರಗಿ ನಾಗರಾಜ ಹಾಗೂ ಸಮುದಾಯದ ಹಿರಿಯ ಮುಖಂಡರಾದ ಎಲ್ ಮಾರೆಣ್ಣ ದಲಿತ ಹೋರಾಟಗಾರರಾದ ಹುಸೇನಪ್ಪ, ಮಲ್ಲೇಶ್ವರಿ. ವೆಂಕಟೇಶ ಮೂರ್ತಿ ಇನ್ನು ಅನೇಕ ದಲಿತ ಜಿಲ್ಲಾ ಮಟ್ಟದ ನಾಯಕರು ಪ್ರಶಸ್ತಿಯನ್ನು ನೀಡಿದರು. ಈ ಕ್ರಿಕೆಟ್ ಪಂದ್ಯಾವಳಿಗೆ ಶೀರ್ಷಿಕೆ ಸಹ ಪ್ರಾಯೋಜಕವನ್ನು ಜಿ ಕೆ ಸ್ವಾಮಿ (ವಿಜಯ್) ಜಿ ಕೆ ಫೌಂಡೇಷನ್ ಮತ್ತು ಜಿ ಕೆ ಗ್ರೂಪ್ ಕರ್ನಾಟಕ ಬಳ್ಳಾರಿ ವತಿಯಿಂದ ಯುವ ಹೋರಾಟಗಾರರಾದ ಕಟ್ಟೇಸ್ವಾಮಿ, ಶಿವ ಸ್ವಾಮಿ, ರತ್ನಯ್ಯ, ಮಾನಪ್ಪ, ದುರ್ಗಾಪ್ರಸಾದ್ , ಹರಿಕೃಷ್ಣ, ಮತ್ತು ಪಂದ್ಯಾವಳಿಯ ಆಯೋಜಕ ರಾದ, ಮಹೇಶ್ ಕುರುವಳ್ಳಿ, ಕೆ ವೆಂಕಟೇಶ, ಎ ಕೆ ತಿಪ್ಪಯ್ಯ ಎಸ್ ಪ್ರಕಾಶ್., ಇನ್ನೂ ಅನೇಕರು ಪಾಲ್ಗೊಂಡರು.

# ಮುಖ್ಯಮಂತ್ರಿಯಿಂದ ಜಾತಿ–ಜಾತಿಗಳ ಮಧ್ಯೆ ವಿಷಬೀಜ: ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ

**ಶಿರಸಿ, ಏಪ್ರಿಲ್ 16:** ಸಮರ್ಪಕ ಗಣತಿ ಮಾಡದೇ ಮನಸ್ಸಿಗೆ ಬಂದಂತೆ ರಾಜ್ಯ ಕಾಂಗ್ರೆಸ್ ಸರಕಾರ ತಪ್ಪು–ತಪ್ಪಾಗಿ ಜಾತಿ ಗಣತಿ ಮಾಡಿಸಿದೆ. ಜಾತಿ ಗಣತಿ ಮೂಲಕ ಸಿಎಂ ಅಧಿಕಾರದ ಕುರ್ಚಿ ಭದ್ರ ಪಡಿಸಲು ಹೊರಟಿದ್ದಾರೆ. ನೀರು ಕದಡಿ ಮೀನು ಹಿಡಿಯುವ ಕೆಲಸ ಸಿಎಂ ಮಾಡುತ್ತಿದ್ದಾರೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆಕ್ಷೇಪಿಸಿದರು. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಎಂ ಜಾತಿ–ಜಾತಿಗಳ ಮಧ್ಯೆ ವಿಷ ಬೀಜ ಬಿತ್ತಿದ್ದಾರೆ.

ಇದು ದುರದೃಷ್ಟಕರವಾದ ಕಾಂಗ್ರೆಸ್ ಸರಕಾರದಲ್ಲಿನ ಮತ್ತೊಂದು ನಿರ್ಧಾರ. ತಪ್ಪು ಅಂಕೆ–ಸಂಖ್ಯೆ ಕೊಡುತ್ತ ಜನರಿಗೆ ಗೊಂದಲ ಸೃಷ್ಟಿಸಿಕೊಂಡಿದ್ದಾರೆ. ಆಗುವುದಿದ್ದರೆ ವೈಜ್ಞಾನಿಕ ಗಣತಿ ಆಗಲಿ ಎಂದ ಅವರು ಕಾಂಗ್ರೆಸ್ ಓಲೈಕೆ ರಾಜಕಾರಣ ಮಾಡುತ್ತಿದೆ ಎಂದರು.ಸಿದ್ದರಾಮಯ್ಯ ಅವರು ನಿವೃತ್ತಿಯ ವಯಸ್ಸಿನಲ್ಲಿದ್ದಾರೆ. ಅವರು ಇನ್ನಾದರೂ ಎಚ್ಚೆತ್ತುಕೊಂಡು ಸಮಾಜಘಾತಕ ಕೆಲಸ ಮಾಡಬಾರದು. ಜೊತೆಗೆ ಗ್ಯಾರೆಂಟಿ ಮಾಡಿ ಬೆಲೆ ಏರಿಕೆ ಮಾಡುತ್ತಿದೆ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಬೆಲೆ ಏರಿಕೆ ಮಾಡದ



ವಸ್ತುಗಳೇ ಇಲ್ಲ ಎಂಬಾಂತಾಗಿದೆ ಎಂದು ಹೇಳಿದರು.ಕೇಂದ್ರ ಸರಕಾರ ತೀರ್ಮಾನದ ಕಾರಣದಿಂದ ಅಡಿಕೆ, ಕಾಳು ಮೆಣಸಿನ ದರ ಕೂಡ ಏರುತ್ತಿದೆ. ಹುರಿದ ಅಡಿಕೆ ಆಮದು ದರ ಕೂಡ ಹೆಚ್ಚಿಸಲಾಗಿದೆ. ವಿದೇಶಿ ಅಡಿಕೆ ಆಮದಾಗುವುದೂ ನಿಯಂತ್ರಣದಲ್ಲಿದೆ ಎಂದರು.ಈ ವೇಳೆ ಆರ್.ಡಿ.ಜಾನ್ಮನೆ, ಸದಾನಂದ ಭಟ್ಟ, ಶರ್ಮಿಳಾ ಮಾದನಗೇರಿ, ನಾಗರಾಜ ನಾಯ್ಕ, ಉಷಾ ಹೆಗಡೆ, ರಮಾಕಾಂತ ಭಟ್ಟ, ನವೀನ ಶೆಟ್ಟಿ, ನಾಗರಾಜ ಶೆಟ್ಟಿ, ರವಿಚಂದ್ರ ಶೆಟ್ಟಿ ಇದ್ದರು.

# ತುಂಗಭದ್ರಾ ಡ್ಯಾಂನಿಂದ ಕಾಲುವೆಗಳಿಗೆ ನೀರು ಬಿಡುಗಡೆ: 24 ಗಂಟೆ ಟಾಸ್ಕ್‌ಫೋರ್ಸ್ ಕಣ್ಗಾವಲು ಆರಂಭ

**ರಾಯಚೂರು ಏ. 16:** ಬೇಸಿಗೆಯಲ್ಲಿ ಕುಡಿಯುವ ನೀರು ಹಾಗೂ ಬೆಳೆಗಳಿಗೆ ಯಾವುದೇ ಸಮಸ್ಯೆಯಾಗದಂತೆ ತುಂಗಭದ್ರಾ ಡ್ಯಾಂನಿಂದ ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಿಗೆ ' ಕಾಲುವೆಗೆ 3 ಸಾವಿರ ಕ್ಯೂಸೆಕ್ಸ್ ನೀರು ಹರಿಸಲು ತೀರ್ಮಾನಿಸಲಾಗಿದೆ. ನೀರು ಹರಿಯುವ ಸಂದರ್ಭದಲ್ಲಿ ತುಂಗಭದ್ರಾ ಎಡದಂಡೆ ಕಾಲುವೆಯ ನೀರನ್ನು ಕಳ್ಳತನದಿಂದ ತಮ್ಮ ಗದ್ದೆಗಳಿಗೆ ಹರಿಸಿಕೊಳ್ಳುವದನ್ನು ತಡೆಯಲು ಕಾಲುವೆ ಮೇಲೆ 24 ತಾಸು ನಿಗಾವಹಿಸಬೇಕು ಎಂದು ಪ್ರಾದೇಶಿಕ ಆಯುಕ್ತರಾದ ಎಂ. ಸುಂದರೇಶ ಬಾಬು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ ಮೂಲಕ ಬೇಸಿಗೆಯ ಅವಧಿಯಲ್ಲಿ ಕುಡಿಯುವ ನೀರು ಒಳಗೊಂಡಂತೆ ಹಾಗೂ ಬೆಳೆಗಳ ಸಂರಕ್ಷಣೆಗಾಗಿ 3000 ಕ್ಯೂಸೆಕ್‌ನಂತೆ ನೀರು ಹರಿಸಲು ಸೂಚನೆ ನೀಡಲಾಗಿದೆ. ಫಸಲಿಗಾಗಿ ಕಾಯುತ್ತಿರುವ ಬೆಳೆದು ನಿಂತ ಬೆಳೆಗಳಿಗೆ ನೀರು ಒದಗಿಸಲಾಗುವುದು. ರೈತರು ಆತಂಕ ಪಡಬೇಕಿಲ್ಲ ಎಂದು ಸರ್ಕಾರ ಅಭಯ ನೀಡಿದೆ. ನೀರು ಕೊನೆಯ ಭಾಗದ ರೈತರಿಗೆ




ನೀರು ತಲುಪುವಂತೆ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು. ಯಾವುದೇ ತೊಂದರೆಯಾಗದ ರೀತಿಯಲ್ಲಿ ನಿಷೇಧಾಜ್ಞೆ ಮೂಲಕ ನೀರು ಹರಿಸಲಾಗುವುದು. ರೈತರು ಮತ್ತು ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಸಚಿವರು ಭರವಸೆ ನೀಡಿದ್ದಾರೆ. ನೀರಿನ ಹರಿವಿನ ಮೇಲೆ ನಿಗಾ: ತುಂಗಭದ್ರಾ ಎಡದಂಡೆ ಕಾಲುವೆಯ ಹಂಚಿಕೆಯಾದ ನೀರನ್ನು ಸಮ ಪ್ರಮಾಣದಲ್ಲಿ ಹಂಚಿಕೆಯಾಗುವಂತೆ ನೋಡಿಕೊಳ್ಳಲು ದಿನದ 24 ತಾಸು ಟಾಸ್ಕ್‌ಫೋರ್ಸ್ ಸಮಿತಿಯವರು ನಿಗಾವಹಿಸಬೇಕೆಂದು ಕಲಬುರಗಿ ವಿಭಾಗದ ಪ್ರಭಾರಿ ಪ್ರಾದೇಶಿಕ ಆಯುಕ್ತ ಎಂ. ಸುಂದರೇಶ ಬಾಬು ಹೇಳಿದ್ದಾರೆ. ನಂಬರ್–17 ದಾಸನಾಳ ಬ್ರಿಜ್ ಗಂಗಾವತಿ ಇಲ್ಲಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ತುಂಗಭದ್ರಾ ಎಡದಂಡೆ ಕಾಲುವೆಗಳಿಗೆ ಹರಿಸಲಾದ ನೀರಿನ ಸಮರ್ಪಕ ಹಂಚಿಕೆಗೆ ಸಂಬಂದಪಟ್ಟಂತೆ ಪರಿಶೀಲಿಸಿ, ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆದೇಶದಂತೆ ತುಂಗಭದ್ರಾ ಎಡದಂಡೆ ಕಾಲುವೆಗೆ ಭೇಟಿ ನೀಡಿ ಸರಿಯಾದ ಪ್ರಮಾಣದಲ್ಲಿ ನೀರಿನ ಹರಿವನ್ನು ಖಾತ್ರಿ ಪಡಿಸಿಕೊಂಡು 3 ಸಾವಿರ ಕ್ಯೂಸೆಕ್‌ನಂತೆ ತುಂಗಭದ್ರಾ ಎಡದಂಡೆ ಕಾಲುವೆಗಳಿಗೆ ಹರಿಸಲಾಗುತ್ತಿರುವ ನೀರು ಈಗಾಗಲೇ ವಿವಿಧ ಡಿಸ್ಟ್ರಿಬ್ಯೂಟಗಳಿಗೆ ಹಂಚಿಕೆಯಂತೆ ಹರಿಸುವುದರ ಜೊತೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ನಿಗಾವಹಿಸಬೇಕೆಂದು ಹೇಳಿದರು. ತುಂಗಭದ್ರಾ ಎಡದಂಡೆ ಕಾಲುವೆ ನೀರು ಯಾವುದೇ ರೀತಿಯಲ್ಲಿ ಅನಾವಶ್ಯಕವಾಗಿ ವ್ಯಯ ಆಗದಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಸೂಚನೆ ನೀಡಿದರು. ಈಗಾಗಲೇ ನಿರ್ಧರಿಸಿದಂತೆ 3 ಸಾವಿರ ಕ್ಯೂಸೆಕ್ ನೀರನ್ನು ಪ್ರತಿದಿನ ಬಿಡಬೇಕು. ಸಂಬಂಧಿಸಿದ ಡಿಸ್ಟ್ರಿಬ್ಯೂಟಗಳಲ್ಲಿ ಈಗಾಗಲೇ ಆದೇಶಿಸಿದಂತೆ ಗೇಜ್‌ಗಳ ನಿಯಂತ್ರಣ ಮಾಡಲು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ರೀತಿಯಲ್ಲಿ ನೀರು ಅನಾವಶ್ಯಕವಾಗಿ ವ್ಯಯ ಆಗದಂತೆ ನೋಡಿಕೊಳ್ಳಬೇಕೆಂದು ಎಂದರು.

# ಕವಿ ಶಾಂತರಸರ ಜನ್ಮ ಶತಮಾನೋತ್ಸವ

**ರಾಯಚೂರು, ಏ. 16:** ರಕಾಸತ್ತಾತ್ಮಕ ಮವಲ್ಯಗಳನ್ನು ಬಿತ್ತಿ, ಕಥೆ, ಕವನ, ಕಾದಂಬರಿಗಳ ಮೂಲಕ ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಕವಿ ಶಾಂತರಸರ ಕೊಡುಗೆ ನೀಡಿದಾರೆಂದು ಜ್ಞಾನ ಭಾರತಿ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷ ಡಾ.ವಿ.ಬಸವರಾಜ ಹೇಳಿದರು.

ನಗರದ ಜ್ಞಾನ ಭಾರತಿ ವಿದ್ಯಾ ಸಂಸ್ಥೆ ಆವರಣದಲ್ಲಿ ಬಹುಮುಖಿ ಕಲಾ ಕೇಂದ್ರ, ಸಂಸ ಥಿಯೇಟರ್ ಸಹಯೋಗದೊಂದಿಗೆ ಆವರಣದಲ್ಲಿ ನಡೆದ ಶಾಂತರಸರ ಜನ್ಮ ಶತಮಾನೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಕವಿ ಶಾಂತರಸರು ಪ್ರಾಥಮಿಕ ಶಾಲಾ ಶಿಕ್ಷಕರಾಗಿ, ಜೂನಿಯರ್ ಕಾಲೇಜು ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿ ನಿವೃತ್ತಿಯ ನಂತರ ಮಾನವೀಯತೆಯ ಪ್ರತಿಪಾದಕರಾಗಿ ಸೇವೆ ಸಲ್ಲಿಸಿದರು. ಪುಸ್ತಕ ಪ್ರೇಮಿಯಾಗಿದ್ದ ಅವರು ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು. ಶಿವಶರಣರ ಮನೋಧರ್ಮವನ್ನು ಉಸಿರಾಗಿಸಿಕೊಂಡು ಕನ್ನಡಪರ ಚಟುವಟಿಕೆಗಳಲ್ಲಿ ಸದಾ ತೊಡಗಿಕೊಳ್ಳುತ್ತಿದ್ದರು. ರಾಜ್ಯೋತ್ಸವ ಪ್ರಶಸ್ತಿಯನ್ನು ತಿರಸ್ಕರಿಸಿ ದಿಟ್ಟತನ ಮೆರೆದ ಅವರು ನಿಷ್ಠುರವಾದಿಯಾಗಿದ್ದರೆಂದು ಗುಣಗಾನ ಮಾಡಿದರು.

ಉಪನ್ಯಾಸಕ ಸಲಬೊಮ್ಮನಹಳ್ಳಿ




ಆರ್.ಶಿವಣ್ಣ ಮಾತನಾಡಿ, ಶಾಂತರಸರವರ ಮೂಲ ಹೆಸರು ಶಾಂತಯ್ಯ. ರಾಯಚೂರು ಜಿಲ್ಲೆಯ ಹೆಂಬರಾಳು ಗ್ರಾಮದಲ್ಲಿ 1924 ಏಪ್ರಿಲ್ 7 ರಂದು ಜನಿಸಿದರು. ಸಂಪ್ರದಾಯದ ಕುಟುಂಬದಲ್ಲಿ ಜನರಿಸಿದ ಅವರು ಮೂಢ ನಂಬಿಕೆಗಳ ವಿರುದ್ಧ ಹೋರಾಟ ನಡೆಸಿದರು. ಕನ್ನಡ ಭಾಷೆ ಉಳಿವಿಗಾಗಿ ಆರು ದಶಕಗಳ ಕಾಲ ಚಳುವಳಿಯಲ್ಲಿ ತೊಡಗಿ ಗೋಕಾಕ್ ಚಳುವಳಿಗೆ ಕಾವು ಹಚ್ಚಿದರು. ಕುವೆಂಪು, ಹರಿಹರ ಕವಿಗಳ ಬರವಣಿಗೆ ಇವರ ಮೇಲೆ ಗಾಢ ಪ್ರಭಾವ ಬೀರಿತು ಎಂದು ಸ್ಮರಿಸಿದರು. ಉದಯೋನ್ಮುಖ ಬರಹಗಾರರನ್ನು ಉತ್ತೇಜಿಸಲು ಸತ್ಯ ಸ್ನೇಹಿ ಎಂಬ ಪ್ರಕಾಶನ ಆರಂಭಿಸಿ 50 ಕ್ಕೂ ಹೆಚ್ಚು ಕೃತಿಗಳನ್ನು ಕನ್ನಡ ನಾಡಿಗೆ ಸಮರ್ಪಿಸಿದರು. 1942 ರಲ್ಲಿ ಬ್ರಿಟೀಷರೆ ಭಾರತ ಬಿಟ್ಟು ತೊಲಗಿ ಚಳುವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. 2006 ರಲ್ಲಿ ಬೀದರ್‌ನಲ್ಲಿ ನಡೆದ 72 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸ ್ ವ ಾ ್ ದ ್ ್ ಕ ್ ್ ರ ಾ ಗಿ ಆಯ್ಕೆಯಾಗಿದ್ದರೆನ್ನುವುದನ್ನು ನೆನಪಿಸಿಕೊಂಡರು.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಎಸ್.ಜಿ.ರಂಗಸ್ವಾಮಿ ಸಕ್ಕರ ಮಾತನಾಡಿ, ಕವಿ ಶಾಂತರಸ ವೃತ್ತಿಯಲ್ಲಿ ಶಿಕ್ಷಕರಾಗಿ, ಉಪನ್ಯಾಸಕರಾಗಿ ಪ್ರಾಚಾರ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರವೃತ್ತಿಯಲ್ಲಿ ಸಾಹಿತಿಗಳಾಗಿ ಬರಹಗಾರರಾಗಿ ರಾಜ್ಯದಲ್ಲಿ ಗುರುತಿಸಿಕೊಂಡವರು ಎಂದು ಗುಣಗಾನ ಮಾಡಿದರು. ಜ್ಞಾನಭಾರತಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಎನ್.ಧನಂಜಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಖ್ಯಾತ ರಂಗಕರ್ಮಿ ಮಲ್ಲಪ್ಪನಹಳ್ಳಿ ಮಹಾಲಿಂಗಪ್ಪ, ಬಹುಮುಖಿ ಕಲಾ ಕೇಂದ್ರದ ಕಾರ್ಯದರ್ಶಿ ಟಿ.ಮಧು, ಟಿ.ಶ್ರೀನಿವಾಸಮೂರ್ತಿ, ದೊರೇಶ್ ಹಾಗೂ ಇನ್ನಿತರರು ಹಾಜರಿದ್ದರು.

# ಜಾತಿಗಣತಿ ಅಲ್ಲ, ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ: ಖರ್ಗೆ

**ಕಲಬುರಗಿ, ಏ. 16:** ಹಿಂದುಳಿದ ವರ್ಗಗಳ ಆಯೋಗವು ನೀಡಿರುವ ವರದಿಯು ಜಾತಿ ಗಣತಿಯಲ್ಲ. ಇದು ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆಯಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ಪೊಲೀಸ್ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನಗತ್ಯವಾಗಿ ಜಾತಿ ಗಣತಿ ಎಂದು ಗುಲ್ಲೆಬ್ಬಿಸಲಾಗುತ್ತಿದೆ. ಇದು ಜಾತಿ ಗಣತಿ ಅಲ್ಲವೇ ಅಲ್ಲ ಎಂದು ಸ್ಪಷ್ಟಪಡಿಸಿದರಲ್ಲದೇ ಇದನ್ನು ಜಾತಿ ಗಣತಿ ಎಂದು ಯಾಕೆ ಹೇಳುತ್ತಿದ್ದೀರಿ? ಇದೇ 17 ರಂದು ಆಯೋಗದವರು ಸಚಿವ ಸಂಪುಟಕ್ಕೆ ಸಂಪೂರ್ಣ ವರದಿ ಸಲ್ಲಿಸಲಿದ್ದಾರೆ. ಈ ಬಗ್ಗೆ ಸಂಪುಟದಲ್ಲಿ ನಂತರ ಅಧಿವೇಶನದಲ್ಲಿ ಚರ್ಚೆ ನಡೆಸಲಾಗುವುದು ಎಂದು ವಿವರಣೆ ನೀಡಿದರು.

ಹಿಂದುಳಿದ ವರ್ಗಗಳ ಆಯೋಗ ನೀಡಿರುವ ವರದಿಗೆ ಸಚಿವರಲ್ಲಿ ಅಪಸ್ವರ ಇಲ್ಲ ಎಂದು ಸುದ್ದಿ ಗೋಷ್ಠಿಯಲ್ಲಿದ್ದ ಉಪಸ್ಥಿತರಿದ್ದ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಹೇಳಿದರು.

**ಶೈಕ್ಷಣಿಕ ಸುಧಾರಣೆಗೆ ಆತ್ಮಾವಲೋಕನ:** ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಸುಧಾರಣೆ ನಿಟ್ಟಿನಲ್ಲಿ ಹಿಂದೆಂದಿಗಿಂತಲೂ ಹೆಚ್ಚಿನ ನಿಟ್ಟಿನಲ್ಲಿ ಆತ್ಮಾವಲೋಕನ ನಡೆಸುವುದು ಅಗತ್ಯತೆ ಮನಗಂಡು ಕೆಲವು ಸುಧಾರಣಾ ಕ್ರಮಗಳನ್ನು ಜಾರಿಗೆ ತರಲಾಗುವುದು. ಇಷ್ಟು ದಿನ ಆಗಿದ್ದೇ ಬೇರೆ, ಇನ್ನು ಮುಂದೆ ದಿಟ್ಟ ಕ್ರಮ ಕೈಗೊಳ್ಳಲು ಮುಂದಾಗುವುದು ಅಗತ್ಯತೆವಿದೆ ಎಂಬುದಾಗಿ ಅನ್ನಿಸುತ್ತಿದೆ. ಖಾಲಿ ಹುದ್ದೆಗಳ



ಭರ್ತಿ ಜತೆಗೆ ಶಿಕ್ಷಕರ ಬೋಧನೆ ಮೇಲೂ ನಿಗಾ ವಹಿಸಬೇಕಿದೆ ಎಂದು ಸಚಿವರಾದ ಪ್ರಿಯಾಂಕ್ ಖರ್ಗೆ, ಡಾ. ಶರಣಪ್ರಕಾಶ ಪಾಟೀಲ್ ಮತ್ತು ಕೆಕೆಆರ್ ಡಿಬಿ ಅಧ್ಯಕ್ಷ ಡಾ. ಅಜಯಸಿಂಗ್ ಜಂಟಿಯಾಗಿ ತಿಳಿಸಿದರು.

ಇದೇ ಏ. 23 ರಂದು ರಾಯಚೂರಲ್ಲಿ ಕಕ ಭಾಗದ ಸರ್ವ ಶಾಸಕರ ಹಾಗೂ ಶಿಕ್ಷಣ ತಜ್ಞರ ಸಭೆ ಕರೆದು ಸಮಾಲೋಚಿಸಲಾಗುವುದು. ದಕ್ಷಿಣ ಕನ್ನಡ ಭಾಗದಲ್ಲಿನ ಶಿಕ್ಷಣ ಸುಧಾರಣೆಯು ನಮ್ಮಲ್ಲಿ ಯಾಕೆ ಆಗುವುದಿಲ್ಲ ಎಂಬುದು ಅಧಿಕಾರಿಗಳು, ಜನಪ್ರತಿನಿಧಿಗಳಾದ ನಾವು ಹಾಗೂ ಶಿಕ್ಷಕರು ಆತ್ಮಾವಲೋಕನ ನಡೆಸಬೇಕಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ತುಂಬಲು ಕ್ರಮ ವಹಿಸಲಾಗುತ್ತಿದೆ. ಮೊದಲಿಗೆ ಪ್ರಾಥಮಿಕ ಶಾಲೆಗಳಿಗೆ ಒಟ್ಟು 5,520 ಶಿಕ್ಷಕರ ಹುದ್ದೆ ತುಂಬಲಾಗುವುದು ಎಂದು ಹೇಳಿದರು.ಯುವಕರು ಡ್ರಗ್ಸ್ ಹಾಗೂ ಅಫೀಮುಗಳಂತ ದುಷ್ಚಟಗಳಿಗೆ ಬಲಿಯಾಗಿ ಅಡ್ಡದಾರಿ ಹಿಡಿಯದಂತೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ದಿಟ್ಟ ಕ್ರಮವಹಿಸುತ್ತಿದ್ದು, ಪೊಲೀಸ್ ಇಲಾಖೆ ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಾರ್ವಜನಿಕರ ಅರಿವು ಮೂಡಿಸಬೇಕು ಎಂದು ಇದೇ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಗೃಹ ಸಚಿವರ ನೇತೃತ್ವದ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ಸಮಗ್ರ ಚರ್ಚೆ ನಡೆಸಲಾಗಿದ್ದು, ಡ್ರಗ್ಸ್ ಹಾವಳಿ ಸಂಪೂರ್ಣ ನಿಯಂತ್ರಣ ಮಾಡಲು ಸಂಬಂಧಿಸಿದ ಇಲಾಖೆಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಡ್ರಗ್ಸ್ ಹಾವಳಿಯಿಂದ ಯುವಕರನ್ನು ಅದರಲ್ಲೂ ವಿದ್ಯಾರ್ಥಿಗಳನ್ನು ಕಾಪಾಡುವ ದೃಷ್ಟಿಯಿಂದ ಹಲವಾರು ಜಾಗೃತಿ ಕಾರ್ಯಕ್ರಮನಡೆಸಲಾಗುವುದು ಎಂದ ಸಚಿವರು, ಶಾಲಾ ಕಾಲೇಜು ಹಾಗೂ ಯೂನಿವರ್ಸಿಟಿ ಗಳಲ್ಲಿ ಜಾಗೃತಿ ಸಭೆ ಹಾಗೂ ಕಾರ್ಯಕ್ರಮ ನಡೆಸಲಾಗುವುದು. ನಂತರ, ಅಭಿಯಾನ ನಡೆಸಿ ಸಾರ್ವಜನಿಕ ಅರಿವು ಮೂಡಿಸಲಾಗುವುದು ಎಂದರು.

ಕಲಬುರಗಿಯನ್ನು ಹೆಲ್ತ್ ಕ್ಲಬ್ ಮಾಡುವ ಉದ್ದೇಶದಿಂದ ಹಲವಾರು ಆರೋಗ್ಯ ಸಂಸ್ಥೆಗಳನ್ನು ಸ್ಥಾಪಿಸಲಾಗುತ್ತಿದೆ. ಕಲಬುರಗಿ ಜಿಮ್ಸ್ ಸಂಸ್ಥೆಯ ಆವರಣದಲ್ಲಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯನ್ನು ಸಹ ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು.




ಒಂದು ವರ್ಷದ ಹಿಂದೆ ಬೀದರ್ ವಿಮಾನ ನಿಲ್ದಾಣದಲ್ಲಿ ವಾಣಿಜ್ಯ ವಿಮಾನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದ್ದ ಬೀದರ್–ಬೆಂಗಳೂರು ದೈನಂದಿನ ವಿಮಾನಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಬೀದರ್‌ನಲ್ಲಿ ಪುನರಾರಂಭಿಸಿದರು.

# ಸಿಇಟಿ: ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಟಿ. ಭೂಬಾಲನ್ ಭೇಟಿ, ಪರಿಶೀಲನೆ

**ವಿಜಯಪುರ ಏ. 16 :** ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಬುಧವಾರ ನಗರದ ವಿಬಿ ದರಬಾರ ಕಾಲೇಜಿನಲ್ಲಿ ನಡೆದ ಸಾಮಾನ್ಯ ಪ್ರವೇಶ ಪರೀಕ್ಷಾ (ಸಿಇಟಿ) ಕೇಂದ್ರಕ್ಕೆ ಭೇಟಿ ನೀಡಿ, ಪರೀಕ್ಷಾ ವ್ಯವಸ್ಥೆ, ವಿದ್ಯಾರ್ಥಿಗಳ ಆಸನ ವ್ಯವಸ್ಥೆ, ಪರೀಕ್ಷಾ ಕಾರ್ಯಕ್ಕೆ ನಿಯೋಜಿಸಿದ ಅಧಿಕಾರಿ, ಸಿಬ್ಬಂದಿಗಳ ಕಾರ್ಯ ವಿಧಾನವನ್ನು ಅವರು ಪರಿಶೀಲಿಸಿದರು. ಪರೀಕ್ಷಾ ಪ್ರಕ್ರಿಯೆ ನಿರ್ವಹಣೆಗೆ ನಿಯೋಜಿತ ಅಧಿಕಾರಿಗಳು ಪರೀಕ್ಷಾ ಮಾರ್ಗಸೂಚಿಯನ್ವಯ ಕಾರ್ಯ ನಿರ್ವಹಣೆ ಹಾಗೂ ಅವರಿಂದ ಪರೀಕ್ಷಾ ಕಾರ್ಯದ ಬಗ್ಗೆ ಮಾಹಿತಿ ಪಡೆದುಕೊಂಡರು. ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ



ಪರೀಕ್ಷೆಗಳನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪರೀಕ್ಷಾ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಬಾರದಂತೆ ಎಚ್ಚರಿಕೆ ವಹಿಸಬೇಕು. ಯಾವುದೇ ಪರೀಕ್ಷಾ ಕೇಂದ್ರದಿಂದ ದೂರಿಗೆ ಆಸ್ಪದ ನೀಡದೇ ಪರೀಕ್ಷಾ ನಿಯಮಗಳನ್ನು ನಸರಿಸಿ, ವಹಿಸಿಕೊಟ್ಟ ಜವಾಬ್ದಾರಿಯನ್ನು ಸುಸೂತ್ರವಾಗಿ ಹಾಗೂ ಸಮರ್ಪಕವಾಗಿ ನಿರ್ವಹಿಸಬೇಕೆಂದು ಹೇಳಿದರು. ಸದರಿ ಪರೀಕ್ಷಾ ಕೇಂದ್ರದಲ್ಲಿನ ವೆಬ್ ಕಾಸ್ಟಿಂಗ್ ಕಾರ್ಯ ನಿರ್ವಹಣೆ ವ್ಯವಸ್ಥೆ ಬಗ್ಗೆ ವೀಕ್ಷಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಶಾಂತ ಪೂಜಾರಿ, ಪರೀಕ್ಷೆಗೆ ನಿಯೋಜಿತ ಅಧಿಕಾರಿ, ಸಿಬ್ಬಂದಿ ಉಪಸ್ಥಿತರಿದ್ದರು.



# ಸಿವಿಲ್ ಜಡ್ಜ್ ಮನೆ ಕಳ್ಳತನ: ಆರೋಪಿಗಳ ಬಂಧನ

**ಬೀದರ, ಏ. 16:** ನಗರದ ಸಿವಿಲ್ ಜಡ್ಜ್ ಮನೆ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಪಾದ್ರಿ ಗ್ಯಾಂಗ್‌ನ ಮೂವರನ್ನು ಪೊಲೀಸರು ಬಂಧಿಸಿ, ಆರೋಪಿಗಳಿಂದ 1.77 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದ್ದಾರೆ. ಮಹಾರಾಷ್ಟ್ರದ ಉದ್ಗೀರ ರೈಲ್ವೆ ನಿಲ್ದಾಣದಲ್ಲಿ ಆರೋಪಿಗಳನ್ನು ಬಂಧಿಸಿದ್ದು, ಮಧ್ಯಪ್ರದೇಶದ ಇನ್ನೊಬ್ಬ ಆರೋಪಿ ತಲೆಮರೆಸಿಕೊಂಡಿದ್ದಾನೆ.

ಕರಣ್, ಧನರಾಜ್, ನಿಗಮ್ ಎಂಬ ಮೂವರು ಆರೋಪಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬಂಧಿತರಿಂದ 1.77 ಲಕ್ಷ ಮೌಲ್ಯದ ಸ್ವತ್ತನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಅಲ್ಲದೇ, 10 ಗ್ರಾಂ ಚಿನ್ನದ ಚೈನ್, 2 ಚಿನ್ನದ ಬಳೆ, 20 ಗ್ರಾಂ ಬೆಳ್ಳಿ ಚೈನ್, 30 ಗ್ರಾಂ ಬೆಳ್ಳಿ ಉಂಗುರ ವಶಕ್ಕೆ ಪಡೆದಿದ್ದಾರೆ. ಬಂಧಿತ ಆರೋಪಿಗಳು ಜಡ್ಜ್ ಮನೆಗೆ ಮಾರ್ಚ್ 31ರಂದು ತಡರಾತ್ರಿ ಬೀಗ ಮುರಿದು ಒಳನುಗ್ಗಿದ್ದ ಖದೀಮರು ಕಳ್ಳತನ ಮಾಡಿದ್ದರು. ಜೆಎಂಎಫ್‌ಸಿ ನ್ಯಾಯಾಲಯದ ಜಡ್ಜ್ ಎಂ.ಡಿ.ಶೈಜ್ ಚೌಟಾಯಿ ಎಂಬುವವರ ಮನೆ ಕಳ್ಳತನ ಮಾಡಿದ್ದರು. ಈ ಪ್ರಕರಣದ ತನಿಖೆಗೆ 3 ತಂಡಗಳನ್ನು ಎಸ್ಪಿ ಪ್ರದೀಪ್ ಗುಂಟಿ ರಚಿಸಿದ್ದರು.

ನ್ಯೂಟೌನ್ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ವಿಜಯ್‌ಕುಮಾರ್



ನೇತೃತ್ವದಲ್ಲಿ ಪ್ರಕರಣ ಬೇಧಿಸಲಾಗಿತ್ತು. ಆರೋಪಿಗಳು ಮೂರ್ನಾಲ್ಕು ದಿನ ಜಡ್ಜ್ ಮನೆಯ ಸುತ್ತಲೂ ಓಡಾಡಿ, ಆನಂತರ ಕಳ್ಳತನ ಮಾಡಿದ್ದರು ಎನ್ನಲಾಗಿದೆ. ಸದ್ಯ ಆರೋಪಿಗಳನ್ನು ಬಂಧಿಸಿರುವ ಪೊಲೀಸರು ತನಿಖೆ ನಡೆಸಿದ್ದಾರೆ. ಈ ಕುರಿತು ಸುದ್ದಿಗೋಷ್ಠಿಯಲ್ಲಿ ಎಸ್ಪಿ ಪ್ರದೀಪ್ ಗುಂಟಿ ಮಾಹಿತಿ ನೀಡಿದ್ದಾರೆ.

# ಶಿಕ್ಷಕರು ಸಮಾಜದ ಶಿಲ್ಪಿಗಳು: ಡಾ.ವಿಠಲ್ ರೆಡ್ಡಿ

**ಬೀದರ, ಏ. 16:** ಶಿಕ್ಷಕರು ಸಮಾಜದ ಶಿಲ್ಪಿಗಳು. ಒಂದು ರಾಷ್ಟ್ರ ವಿಶ್ವದಲ್ಲಿ ಎಲ್ಲಾ ಕ್ಷೇತ್ರಗಳಲ್ಲಿ ಉನ್ನತ ಹಂತಕ್ಕೆ ಬರಬೇಕದರೆ ಶಿಕ್ಷಕರ ಪಾತ್ರ ಬಹಳ ಮುಖ್ಯವಾಗಿದೆ ಎಂದು ಪ್ರಾಚಾರ್ಯ ಡಾ.ಪಿ.ವಿಠಲ್ ರೆಡ್ಡಿ ಹೇಳಿದರು.ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದ ವರಣದಲ್ಲಿನ ನ್ಯಾಷನಲ್ ಆಂಗ್ಲ ಮಾಧ್ಯಮ ಪಬ್ಲಿಕ್ ಶಾಲೆ ಮತ್ತು ಸೈನಿಕ ಶಾಲೆಯ ಸಂಯುಕ್ತಾಶ್ರಯದಲ್ಲಿ ಒಂದು ದಿನದ ಶಿಕ್ಷಕರಿಗೋಸ್ಕರ ಸಾಮರ್ಥ್ಯವೃದ್ಧಿ ವಿಚಾರ ಸಂಕಿರಣದ ಉದ್ಘಾಟನೆ ನೆರವೇರಿಸಿ ಮಾತನಡಿದ ಅವರು, ಶಿಕ್ಷಕರಿಂದಲೇ ವಕೀಲರು, ವೈದ್ಯರು, ಅಭಿಯಂತರರು, ಕವಿಗಳು, ಸಾಹಿತಿಗಳು ಹಾಗೂ ವಿಜ್ಞಾನಿಗಳು ಆಗಲು ಸಾಧ್ಯ ಉದಾಹರಣೆಗೆ ಭಾರತದ ಎರಡನೇಯ ರಾಷ್ಟಪತಿ ಡಾ. ಎಸ್. ರಾಧಾಕೃಷ್ಣನ್ ಶಿಕ್ಷಕ ವೃತ್ತಿಯಿಂದಲೆ ರಾಷ್ಟ್ರಪತಿ ಹುದ್ದೆಗೇರಿದ ಪ್ರಥಮ ವ್ಯಕ್ತಿ ಅದು ಶಿಕ್ಷಕ ಸಮುದಾಯಕ್ಕೆ ಹೆಮ್ಮೆಯ ವಿಷಯ, ಅಷ್ಟೇ ಅಲ್ಲದೆ ಗುರು ದ್ರೋಣಾಚಾರ್ಯರು ತಮ್ಮ ಶಿಷ್ಯನಾದ ಅರ್ಜುನನಿಗೆ ಬಿಲ್ವಿದ್ಯೆಯಲ್ಲಿ ಪಾರಂಗತ ಮಾಡಿ, ಕುರುಕ್ಷೇತ್ರದಲ್ಲಿ ಕೌರವರ ವಿರುದ್ಧ ಗೆಲ್ಲಲು ಸಾಧ್ಯವಾಯಿತು. ಅದಕ್ಕೆ ಗುರುವೇ ಕಾರಣ ಇಂದು ಶಿಕ್ಷಕರು ಹೊಸ ಹೊಸ ತಂತ್ರಜ್ಞಾನದ ತರಬೇತಿ ಪಡೆದುಕೊಂಡು ವಿದ್ಯಾರ್ಥಿಗಳಿಗೆ ಧಾರೆಯೇರೆದು ಉನ್ನತ ಪದವಿ ಪಡೆಯಲು ಪ್ರೋತ್ಸಾಹಿಸಬೇಕೆಂದು ನುಡಿದರು. ವೇದಿಕೆಯ ಮೇಲೆ ನ್ಯಾಷನಲ್ ಆಂಗ್ಲ ಮಾಧ್ಯಮ



ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ಶ್ರೀಲತಾ ಜಿ. ಸ್ವಾಮಿ ಉಪಸ್ಥಿತರಿದ್ದರು. ಕಾರ್ಯಕ್ರಮದ ಸಂಚಾಲನೆಯನ್ನು ಶಿಕ್ಷಕರಾದ ಜಗದೀಶ ಮಾಡಿದರೆ, ಸಾಗರ ಸ್ವಾಗತ ಹಾಗೂ ಆಕಾಶ ಕೊಳಾರೆ ವಂದಿಸಿದರು. ಮಹಾವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಆಂಗ್ಲ ಮಾಧ್ಯಮ ಶಾಲೆ ಶಿಕ್ಷಕರು, ಶಿಕ್ಷಕಿಯರು ಉಪಸ್ಥಿತರಿದ್ದರು.

# ನೀರಾವರಿ ಯೋಜನೆಗಳಿಂದ ರೈತರ ಬಾಳು ಹಸನು: ಎಂ.ಬಿ.ಪಿ

**ವಿಜಯಪುರ, ಏ. 16:** ರೈತರ ಬಾಳನ್ನು ಹಸನಾಗಿಸಲು ರೂಪಿಸಿರುವ ನೀರಾವರಿ ಯೋಜನೆಗಳಿಂದಾಗಿ ಅನ್ನದಾತರ ಬಂಜರು ಜಮೀನು ಬಂಗಾರದ ಭೂಮಿಯಾಗಿ ಪರಿವರ್ತನೆಯಾಗಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಹೇಳಿದರು. ಜಿಲ್ಲೆಯ ತಿಕೋಟಾ ತಾಲೂಕಿನ ಮಲಕನದೇವರಹಟ್ಟಿಯ ಸಾಳುಂಕೆ ವಸ್ತಿಯ ಬಳಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ರೂ. 250 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಜಿನುಗು ಕೆರೆ ನಿರ್ಮಾಣ(ಸೈಟ್– 2)ಕ್ಕೆ ಭೂಮಿಪೂಜೆ ನೆರವೇರಿಸಿ ಅವರು ಮಾತಮಾಡಿದರು. ಈ ಜಿನುಗು ಕೆರೆ 4.73 ಚ. ಕಿ.ಮೀ. ವ್ಯಾಪ್ತಿಯನ್ನು ಒಳಗೊಂಡಿದ್ದು, 9 ಎಕರೆ ಪ್ರದೇಶದಲ್ಲಿ 240 ಮೀಟರ್ ಅಂದರೆ 787 ಅಡಿ ಬಂಡ್ ಹೊಂದಿದೆ. 29 ಅಡಿ ಆಳದವರೆಗೆ ಒಟ್ಟು 2.33 ಎಂ.ಸಿ.ಎಫ್.ಟಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿದೆ. ಇದರಿಂದ 136 ಎಕರೆ ಜಮೀನಿಗೆ ನೀರಾವರಿ ಸೌಲಭ್ಯ ದೊರೆಯಲಿದ್ದು, ತೆರೆದ ಭಾವಿ ಮತ್ತು ಬೋರವೆಲ್‌ಗಳಲ್ಲಿ ಅಂತರ್ಜಲ ಕೂಡ ವೃದ್ಧಿಯಾಗಲಿದೆ. ಈ ಜಿನುಗು ಕೆರೆಗೆ ವರ್ಷದಲ್ಲಿ ಎರಡು ಬಾರಿ ನೀರು ಹರಿಸಲಾಗುವುದು ಎಂದು ಸಚಿವರು ತಿಳಿಸಿದರು. ನೀರಾವರಿಯಿಂದಾಗಿ ರೈತರ ಭೂಮಿಗೆ ಭಾರಿ ಬೆಲೆ ಬಂದಿದ್ದು, ಯಾರೂ ಭೂಮಿ ಮಾರಿಕೊಳ್ಳಬೇಡಿ. ಎಲ್ಲರು ಕಾಮಗಾರಿಗೆ ಸಹಕರಿಸಿಬೇಕು. ಮೂರು ತಿಂಗಳಲ್ಲಿ ಈ ಕಾಮಗಾರಿ ಪೂರ್ಣವಾಗಲಿದ್ದು, ಈ ಕೆರೆ ಮತ್ತು ಈ ಮುಂಚೆ ನಿರ್ಮಿಸಲಾಗಿರುವ



ಕೆರೆ ಎರಡನ್ನು ಒಟ್ಟಿಗೆ ಉದ್ಘಾಟನೆ ಮಾಡಲಾಗುವುದು ಎಂದು ತಿಳಿಸಿದ ಅವರು, ಗುಣಮಟ್ಟದ ಕಾಮಗಾರಿ ಮಾಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಬಚಿ– ಬಬಲೇಶ್ವರ ಏತನೀರಾವರಿ ಯೋಜನೆಯಡಿ ನಮಗೆ ಹಂಚಿಕೆಯಾಗಿರುವ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಯೋಜನೆ ರೂಪಿಸಲಾಗಿದೆ. ಎರಡು ಕಡೆ ಸರಕಾರಿ ಜಮೀನಿನಲ್ಲಿ ಹೊಂಡಗಳನ್ನು ನಿರ್ಮಿಸಿ ಅಲ್ಲಿ ಒಂದು ಟಿಎಂಸಿ ನೀರು ಸಂಗ್ರಹಿಸಲು ಯೋಜನೆ ರೂಪಿಸಲಾಗುತ್ತಿದೆ. ಇದಕ್ಕೆ ಎಷ್ಟೇ ಹಣ ಖರ್ಚಾದರೂ ಅದನ್ನು ಜಾರಿ ಮಾಡಲಾಗುವುದು ಎಂದು ಅವರು ತಿಳಿಸಿದರು. ಸಣ್ಣ ನೀರಾವರಿ ಇಲಾಖೆ ಸೆಕ್ಷನ್ ಆಫೀಸರ್ ವಿಶ್ವನಾಥ ಪೀರಶೆಟ್ಟಿ ಮಾತನಾಡಿ, ಕೆರೆ ನಿರ್ಮಾಣದ ಮಾಹಿತಿ ನೀಡಿದರು. ಜಿ. ಪಂ. ಮಾಜಿ ಅಧ್ಯಕ್ಷ ಸೋಮನಾಥ ಬಾಗಲಕೋಟ ಮಾತನಾಡಿ, ಈ ಯೋಜನೆಯಿಂದ ಸುತ್ತಮುತ್ತಲಿನ ಪ್ರದೇಶಕ್ಕೆ ಅನುಕೂಲವಾಗಲಿದೆ. ಮಳೆಗಾಲದಲ್ಲಿ ಮಾತ್ರವಲ್ಲ ಬೇಸಿಗೆಯಲ್ಲೂ ನೀರು ಪೂರೈಸಲು ಕ್ರಮ ಕೈಗೊಂಡಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ತಿಕೋಟಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದು ಗೌಡನವರ, ಮುಖಂಡರಾದ ದಯಾನಂದ ಮಠಪತಿ, ಜಲಸಂಪನ್ಮೂಲ ಇಲಾಖೆ ಎಇಇ ಅಂಬಣ್ಣ ಹರಳಯ್ಯ, ತಹಸೀಲ್ದಾರ ಸುರೇಶ ಚವಲರ, ತಾ. ಪಂ. ಇಓ ಬಸವಂತರಾಯ, ಬಿರಾದಾರ, ಬಿಇಓ ಪ್ರಮೋದಿನಿ ಬಳೂಲಮಟ್ಟಿ, ಸಣ್ಣ ನೀರಾವರಿ ಇಲಾಖೆ ಎಇಇ ವಿನೋದ ವಸ್ತ್ರದ, ಹೆಸ್ಕಾಂ ಎಇಇ ಗೋವಿಂದ ಎಸ್. ದೇಶಮುಖ ಮುಂತಾದವರು ಉಪಸ್ಥಿತರಿದ್ದರು.

# ಏ.20ರಂದು ಮುಂಡರಗಿಯಲ್ಲಿ ಗುರು ವಂದನೆ ಕಾರ್ಯಕ್ರಮ–ಡಾ.ಡಿ.ಸಿ.ಮಠ

**ಗದಗ ಏ 16:** ಜಿಲ್ಲೆಯ ಮುಂಡರಿಗಿ ಪ್ರತಿಷ್ಠಿತ ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾ ಸಮಿತಿಯ ಶತಮಾನೋತ್ಸವ ಸಂಭ್ರಮದ ಹಿನ್ನೆಲೆಯಲ್ಲಿ ಇದೇ ಏ.20ರಂದು ಕೆ.ಆರ್.ಬೆಲ್ಲದ್ ಕಲಾ ಹಾಗೂ ವಾಣಿಜ್ಯ ಮಹಾ ವಿದ್ಯಾಲಯ ಮತ್ತು ಅರ್ಥಶಾಸ್ತ್ರ ಸ್ನಾತಕೋತ್ತರ ಅಧ್ಯಯನ ವಿಭಾಗ ಮುಂಡರಗಿ ಹಾಗೂ ಹಿರಿಯ ವಿದ್ಯಾರ್ಥಿಗಳ ಸಂಘ ಇವರ ಆಶ್ರಯದಲ್ಲಿ ಗುರುವಂದನೆ, ಹಿರಿಯ ವಿದ್ಯಾರ್ಥಿಗಳ ಸಮಾಗಮ ಹಾಗೂ ಸಾಧಕ ವಿದ್ಯಾರ್ಥಿಗಳ ಸನ್ಮಾನ ಸಮಾರಂಭ ಜರುಗಲಿದೆ. ಕಾಲೇಜಿನ ಆವರಣದಲ್ಲಿ ಬೆಳಿಗ್ಗೆ 10 ಗಂಟೆಗೆ ಜರುಗಲಿರುವ ಸಮಾರಂಭದಲ್ಲಿ ಮುಂಡರಗಿ ಸಂಸ್ಥಾನ ಮಠದ ಶ್ರೀ ಮ.ನಿ.ಪ್ರ. ಜಗದ್ಗುರು, ನಾಡೋಜ ಡಾ. ಅನ್ನದಾನೀಶ್ವರ ಮಹಾ ಶಿವಯೋಗಿಗಳು ದಿವ್ಯ ಸಾನಿಧ್ಯವಹಿಸಲಿದ್ದಾರೆ.

ಶ್ರೀ ಜಗದ್ಗುರು ಅನ್ನದಾನೀಶ್ವರ ಮಠದ ಉತ್ತರಾಧಿಕಾರಿಗಳಾದ ಶ್ರೀ ಮ.ನಿ.ಪ್ರ.ಡಾ. ಮಲ್ಲಿಕಾರ್ಜುನಸ್ವಾಮಿಗಳು ನೇತೃತ್ವ ವಹಿಸಲಿದ್ದಾರೆ. ಕ. ರಾ.ಬೆಲ್ಲದ ಕಾಲೇಜು ಮೇಲ್ವಿಚಾರಣಾ ಸಮಿತಿಯ ಕಾರ್ಯಾಧ್ಯಕ್ಷರಾದ ಪ್ರೊ.ಆರ್. ಎಲ್.ಪೊಲೀಸ್ ಪಾಟೀಲ್ ಅಧ್ಯಕ್ಷತೆ ವಹಿಸಲಿದ್ದಾರೆ.

ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾ ಸಮಿತಿಯ ಆಡಳಿತಾಧಿಕಾರಿ ಡಾ. ಬಿ. ಜಿ.ಜವಳಿ ಉಪಸ್ಥಿತಿ ವಹಿಸಲಿದ್ದಾರೆ. ಧಾರವಾಡ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪಿ.ಎಫ್. ದೊಡ್ಡಮನಿ, ಹುಬ್ಬಳ್ಳಿಯ ಪ್ರಧಾನ ಹಿರಿಯ ಸಿವಿಲ್




ನ್ಯಾಯಾಧೀಶರಾದ ಯಮನೂರಪ್ಪ ಕೆ., ಹರಪನಹಳ್ಳಿಯ ಡಿವೈಎಸ್‌ಪಿ ವೆಂಕಟಪ್ಪ ನಾಯಕ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆಂದು ಕಾಲೇಜಿನ ಪ್ರಾಚಾರ್ಯರಾದ ಡಾ.ಡಿ.ಸಿ.ಮಠ ತಿಳಿಸಿದ್ದಾರೆ.

# ಬೆಳವಣಿಗೆ ನಿರೀಕ್ಷೆಯಲ್ಲಿ ಉಜ್ಜೀವನ ಸ್ಮಾಲ್ ಫೈನಾನ್ಸ್ ಬ್ಯಾಂಕ್–ಸಂಜೀವ್ ನೌಟಿಯಾಲ್

**ಹೊಸಪೇಟೆ ಏ 16.** ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಪ್ರಗತಿಯ ಪಥದಲ್ಲಿದ್ದು, ವೈವಿಧ್ಯಮಯ ಅಡಮಾನ ಸಹಿತ ಸ್ವತ್ತು ಪೋರ್ಟ್‌ಫೋಲಿಯೋ ಮತ್ತು ಸಮತೋಲಿನ ಸಾಲ ಮಿಶ್ರಣದ ಬದಲಾವಣೆಯಿಂದ ಇದು ಸಾಧ್ಯವಾಗಿದೆ. "ಪ್ರಸ್ತುತ ತ್ರೈಮಾಸಿಕದಲ್ಲಿ, ಕಡಿಮೆ ದರದ ವಸತಿ, ಸಣ್ಣ ಅಡಮಾನಗಳು, ಎಂಎಸ್‌ಎಂಇ, ವಾಹನ ಸಾಲ, ಚಿನ್ನದ ಸಾಲ ಮತ್ತು ಕೃಷಿ ಸಾಲವು ನಮ್ಮ ಅಡಮಾನ ಸಹಿತ ಸ್ವತ್ತು ಪೋರ್ಟ್‌ಫೋಲಿಯೋದಲ್ಲಿ ಬೆಳವಣಿಗೆಯನ್ನು ಪ್ರೋತ್ಸಾಹಿಸಿವೆ.

ವಾರ್ಷಿಕವಾಗಿ 50% ಬೆಳವಣಿಗೆ ಸಾಧಿಸುವ ಗುರಿ ಹೊಂದಿದ್ದೇವೆ" ಎಂದು ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಓ ಸಂಜೀವ್ ನೌಟಿಯಾಲ್ ಹೇಳಿದ್ದಾರೆ. ಈ ಗುರಿಗೆ ಅನುಗುಣವಾಗಿ, ನಮೂದಿಸಿದ ಸೆಗ್ಮೆಂಟ್‌ಗಳಲ್ಲಿ ವೈವಿಧ್ಯಮಯ ಅಡಮಾನ ಸಹಿತ ಸಾಲದ ಪೋರ್ಟ್‌ಫೋಲಿಯೋದ ಮೇಲೆ ಬ್ಯಾಂಕ್ ಹೆಚ್ಚು ಗಮನ ಕೇಂದ್ರೀಕರಿಸಿದೆ. ಅಂದರೆ, ಕಡಿಮೆ ದರದ ವಸತಿ, ಎಂಎಸ್‌ಎಂಇ, ವಾಹನ, ಕೃಷಿ, ಚಿನ್ನದ ಸಾಲ ಮತ್ತು ಅತಿ ಸಣ್ಣ ಅಡಮಾನಗಳ ಮೇಲೆ ಗಮನ ಕೇಂದ್ರೀಕರಿಸಲಾಗಿದ್ದು, ವಾರ್ಷಿಕವಾಗಿ 52% ಏರಿಕೆಯೊಂದಿಗೆ ರ್ವದಲ್ಲಿ ಈ ದಿನದವರೆಗೆ 33% ಬೆಳವಣಿಗೆ ಸಾಧಿಸಲಾಗಿದೆ. ಸದ್ಯ ಇದು 39:61 ಅನುಪಾತ ಅಡಮಾನ ಸಹಿತ ಮತ್ತು ಅಡಮಾನ ರಹಿತ ಸಾಲ ಖಾತೆಯನ್ನು ನಿರ್ವಹಿಸುತ್ತಿದೆ. ಇನ್ನಷ್ಟು ಹೆಚ್ಚು ಸಮತೋಲಿತ ಪೋರ್ಟ್‌ಫೋಲಿಯೋ ಖಚಿತಪಡಿಸಲು ಮುಂದಿನ ಐದು ವರ್ಷಗಳಲ್ಲಿ 65:35 ಅಡಮಾನ

ಸಹಿತ ಮತ್ತು ಅಡಮಾನ ರಹಿತ ಸಾಲದ ಅನುಪಾತ ಸಾಧಿಸುವ ಮಹತ್ವಾಕಾಂಕ್ಷೆಯನ್ನು ನಾವು ಹೊಂದಿದ್ದೇವೆ.

ಕಡಿಮೆ ದರದ ವಸತಿ ಖಾತೆಯು ವಾರ್ಷಿಕ 45% ಬೆಳವಣಿಗೆ ಕಂಡಿದ್ದು, 6,393 ಕೋಟಿ ತಲುಪಿದೆ.,ಎಂಎಸ್‌ಎಂಇ ಖಾತೆಯು ವಾರ್ಷಿಕವಾಗಿ 21% ಏರಿಕೆಯಾಗಿ, 1694 ಕೋಟಿ ಆಗಿದೆ.,ವಾಹನ ಹಣಕಾಸು ಸೌಲಭ್ಯವು ವಾರ್ಷಿಕವಾಗಿ 155% ಏರಿಕೆಯಾಗಿದ್ದು, 375 ಕೋಟಿಗೆ ತಲುಪಿದೆ., ಚಿನ್ನದ ಸಾಲ ವಹಿವಾಟು ತ್ರೈಮಾಸಿಕವಾಗಿ 115 ಕೋಟಿ ರೂ. ಆಗಿದೆ ಮತ್ತು 85% ಏರಿಕೆ ಕಂಡಿದೆ., ಜಾನುವಾರು ಮತ್ತು ಬೆಳೆ ಸಾಲ ಒಳಗೊಂಡಿರುವ ಸುರಕ್ಷಿತ ಕೃಷಿ ಸಾಲವು ತ್ರೈಮಾಸಿಕದ ಆಧಾರದಲ್ಲಿ 44% ರಷ್ಟು ಗಮನಾರ್ಹ ಬೆಳವಣಿಗೆ ಕಂಡಿದ್ದು, 459 ಕೋಟಿ ಆಗಿದೆ. ಇನ್ನು ಠೇವಣಿ ವಿಯದಲ್ಲಿ, ಉತ್ತಮ ಬಾಧ್ಯತೆಯನ್ನು ನಿರ್ಮಾಣ ಮಾಡುವಿಕೆಯನ್ನು ಉಜ್ಜೀವನ್ ಮುಂದುವರಿಸುತ್ತಿದೆ. ಬ್ಯಾಂಕ್‌ನ ಒಟ್ಟು ಠೇವಣಿಯು 34,494 ತಲುಪಿದ್ದು, ವಾರ್ಷಿಕ 16% ಬೆಳವಣಿಗೆ ಸಾಧಿಸಿದೆ.

ಇದರಲ್ಲಿ ಚಾಲ್ತಿ ಮತ್ತು ಉಳಿತಾಯ ಖಾತೆ ಠೇವಣಿಗಳು ವಾರ್ಷಿಕ 15% ಏರಿಕೆಯಾಗಿದ್ದು, 8,662 ಕೋಟಿ ಆಗಿದೆ. ಇದು ಒಟ್ಟು ಠೇವಣಿಯಲ್ಲಿ 25% ಆಗಿದೆ. ಉಜ್ಜೀವನ್‌ನ ಸಾಮರ್ಥ್ಯವು ಇದರ ಚಿಲ್ಲರೆ ಠೇವಣಿಯಲ್ಲಿದ್ದು, ಇದು ಈಗ 25,274 ಕೋಟಿ ಆಗಿದ್ದು, ಒಟ್ಟು ಠೇವಣಿಗಳಲ್ಲಿ 73% ಆಗಿದೆ. ಕಳೆದ ಎಂಟು ತಿಂಗಳುಗಳಲ್ಲಿ, ಚಿಲ್ಲರೆ ಠೇವಣಿಗಳು 70% ಕ್ಕಿಂತ ಹೆಚ್ಚಾಗಿಯೇ ಇದೆ.

ಯುಪಿಐ ಆಪ್ ಆಗಿರುವ ಉಜ್ಜೀವನ್ ಪೇ ಅನ್ನೂ ಬಿಡುಗಡೆ ಮಾಡುವುದರಲ್ಲಿದೆ. ಇದು ಡಿಜಿಟಲ್ ಪೇಮೆಂಟ್ ವ್ಯವಸ್ಥೆಯನ್ನು ಇನ್ನಷ್ಟು ವಿಸ್ತರಿಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಇನ್ನಷ್ಟು ಬೆಳವಣಿಗೆ ಮತ್ತು ಗ್ರಾಹಕರ ತೊಡಗಿಸಿಕೊಳ್ಳುವಿಕೆಯನ್ನು ಇನ್ನಷ್ಟು ವಿಸ್ತರಿಸಲು, ಉಜ್ಜೀವನ ರಚನಾತ್ಮಕ ಬದಲಾವಣೆ ಮಾಡುತ್ತಿದೆ. ಅಧಿಕ ಮೌಲ್ಯದ ಗ್ರಾಹಕರ ವಿಭಾಗಗಳಲ್ಲಿ ಹೆಚ್ಚು ಗಮನಹರಿಸುತ್ತಿದೆ. ಈ ಬದಲಾವಣೆಯು ಗ್ರಾಹಕರ ಸ್ವಾಧೀನ ಹೆಚ್ಚಿಸುವ ನಿರೀಕ್ಷೆಯಿದೆ.

# ಚೀನಾದ ಆಮದಿನ ಮೇಲೆ 245% ತೆರಿಗೆ: ವಾಣಿಜ್ಯ ಯುದ್ಧ ಆರಂಭಿಸಿದ ಟ್ರಂಪ್




ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಚೀನಾದಿಂದ ಆಮದಾಗುವ ಸರಕುಗಳ ಮೇಲೆ ಶೇಕಡಾ 245 ವರೆಗಿನ ದೊಡ್ಡ ಮಟ್ಟದ ತೆರಿಗೆಯನ್ನು ವಿಧಿಸಿದೆ. ಈ ಕ್ರಮವು ವಿಶ್ವದ ಎರಡು ದೊಡ್ಡ ಆರ್ಥಿಕ ಶಕ್ತಿಗಳಾದ ಅಮೆರಿಕ ಮತ್ತು ಚೀನಾದ ನಡುವಿನ ವಾಣಿಜ್ಯ ಯುದ್ಧವನ್ನು ಮತ್ತಷ್ಟು ತೀವ್ರಗೊಳಿಸಿದೆ. ವೈಟ್‌ಹೌಸ್‌ನ ಇತ್ತೀಚಿನ ಹೇಳಿಕೆಯ ಪ್ರಕಾರ, ಚೀನಾದ ಪ್ರತೀಕಾರದ ಕ್ರಮಗಳಿಗೆ ಪ್ರತಿಕ್ರಿಯೆಯಾಗಿ ಈ ತೆರಿಗೆ ವಿಧಿಸಲಾಗಿದೆ. ಈ ಕ್ರಮವು ಟ್ರಂಪ್ ಅಮೆರಿಕ ಫಸ್ಟ್ ಟ್ರೇಡ್ ಪಾಲಿಸಿಯ ಭಾಗವಾಗಿದ್ದು, ಇದು ಅಮೆರಿಕದ ಆರ್ಥಿಕ ಸ್ವಾತಂತ್ರ್ಯವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಟ್ರಂಪ್ ಆಡಳಿತವು ಏಪ್ರಿಲ್ 2, 2025ರಂದು "ಲಿಬರೇಷನ್ ಡೇ" ಎಂದು ಕರೆಯಲಾದ ದಿನದಂದು ಎಲ್ಲಾ ವಿದೇಶಿ ಆಮದುಗಳ ಮೇಲೆ ಕನಿಷ್ಠ 10% ತೆರಿಗೆ ಘೋಷಿಸಿತ್ತು. ಜೊತೆಗೆ ಅಮೆರಿಕದ ರಫ್ತುಗಳ ಮೇಲೆ ತೆರಿಗೆ ವಿಧಿಸುವ ರಾಷ್ಟ್ರಗಳಿಗೆ "ಪ್ರತೀಕಾರದ" ತೆರಿಗೆ ವಿಧಿಸಿತು. ಚೀನಾದ ಆಮದುಗಳ ಮೇಲಿನ ತೆರಿಗೆಯನ್ನು ಆರಂಭದಲ್ಲಿ 54%ನಿಂದ 145%ಕ್ಕೆ ಏರಿಸಲಾಯಿತು, ಮತ್ತು ಇದೀಗ 245%ವರೆಗೆ ಏರಿಕೆಯಾಗಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ, ಚೀನಾವು ಅಮೆರಿಕದ ಸರಕುಗಳ ಮೇಲಿನ ತನ್ನ ತೆರಿಗೆಯನ್ನು 84%ನಿಂದ 125%ಕ್ಕೆ ಏರಿಸಿದೆ, ಇದು ಎರಡು ರಾಷ್ಟ್ರಗಳ ನಡುವಿನ ತಿಕ್ಕಾಟವನ್ನು ತೀವ್ರಗೊಳಿಸಿದೆ. ವೈಟ್ ಹೌಸ್ ಪ್ರಕಾರ, ಚೀನಾವು ತನ್ನ ಪ್ರತೀಕಾರದ ಕ್ರಮಗಳಿಂದಾಗಿ ಈಗ ಅಮೆರಿಕ ಸಂಯುಕ್ತ ಸಂಸ್ಥಾನಕ್ಕೆ ಆಮದಾಗುವ ಸರಕುಗಳ ಮೇಲೆ 245% ವರೆಗಿನ ತೆರಿಗೆಯನ್ನು ಎದುರಿಸುತ್ತಿದೆ." ಈ ಕ್ರಮವನ್ನು ಟ್ರಂಪ್ ಆಡಳಿತವು ಚೀನಾದ "ಅನ್ಯಾಯದ ವಾಣಿಜ್ಯ ನೀತಿಗಳು" ಮತ್ತು ಅಮೆರಿಕದ ಆರ್ಥಿಕ ಹಿತಾಸಕ್ತಿಗಳಿಗೆ ಧಕ್ಕೆ ತರುವ ಕ್ರಮಗಳಿಗೆ ಪ್ರತಿಕ್ರಿಯೆ ಎಂದು ಸಮರ್ಥಿಸಿಕೊಂಡಿದೆ

## ಚೀನಾದ ಎಚ್ಚರಿಕೆ:




ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಈ ತೆರಿಗೆ ಏರಿಕೆಯನ್ನು "ಅಪಾಯಕಾರಿ ಮತ್ತು ಫಲಪ್ರದವಲ್ಲ" ಎಂದು ಟೀಕಿಸಿದ್ದಾರೆ. "ತೆರಿಗೆ ಮತ್ತು ವಾಣಿಜ್ಯ ಯುದ್ಧದಲ್ಲಿ ಯಾರೂ ಗೆಲ್ಲುವುದಿಲ್ಲ. ಅಮೆರಿಕವು ಈ ವಿಷಯವನ್ನು ಸಂವಾದ ಮತ್ತು ಸಮಾಲೋಚನೆಯ ಮೂಲಕ ಪರಿಹರಿಸಲು ಬಯಸಬೇಕು, ಸಮಾನತೆ, ಗೌರವ ಮತ್ತು ಪರಸ್ಪರ ಲಾಭದ ಆಧಾರದ ಮೇಲೆ ಚೀನಾದೊಂದಿಗೆ ಮಾತನಾಡಬೇಕು," ಎಂದು ಲಿನ್ ಜಿಯಾನ್ ಹೇಳಿದ್ದಾರೆ.

ಚೀನಾದ ಇತ್ತೀಚಿನ ಪ್ರತೀಕಾರದ ಕ್ರಮಗಳಲ್ಲಿ ಅಮೆರಿಕದ ಬೋಯಿಂಗ್ ಜೆಟ್‌ಗಳ ವಿತರಣೆಯನ್ನು ತನ್ನ ವಿಮಾನಯಾನ ಸಂಸ್ಥೆಗಳಿಗೆ ನಿಲ್ಲಿಸುವ ಆದೇಶವೂ ಸೇರಿದೆ. ಈ ಕ್ರಮವು ಅಮೆರಿಕದ ವಿಮಾನ ತಯಾರಿಕಾ ಕ್ಷೇತ್ರಕ್ಕೆ ಗಂಭೀರ ಪರಿಣಾಮ ಬೀರಬಹುದು ಎಂದು ವಿಶ್ಲೇಷಕರು ಎಚ್ಚರಿಸಿದ್ದಾರೆ.

## ರಾಷ್ಟ್ರೀಯ ಭದ್ರತೆಯ ತನಿಖೆ

ಶೇಕಡಾ 245 ತೆರಿಗೆಯ ಜೊತೆಗೆ, ಟ್ರಂಪ್ ಆಡಳಿತವು "ಅಮೆರಿಕದ ಸಂಸ್ಕರಿಸಿದ ಖನಿಜಗಳ ಮತ್ತು ಅವುಗಳ ಉತ್ಪನ್ನಗಳ ಆಮದಿನ ರಾಷ್ಟ್ರೀಯ ಭದ್ರತೆಗೆ ಉಂಟಾಗುವ ಅಪಾಯಗಳ" ಕುರಿತ ತನಿಖೆಯನ್ನು ಆರಂಭಿಸುವ ಕುರಿತು ಕಾರ್ಯಾದೇಶಕ್ಕೆ ಸಹಿ ಹಾಕಿದೆ. ವೈಟ್ ಹೌಸ್‌ನ ಹೇಳಿಕೆಯ ಪ್ರಕಾರ, ಚೀನಾದಂತಹ "ವಿರೋಧಿ ರಾಷ್ಟ್ರಗಳು" ತಮ್ಮ ಪೂರೈಕೆ ಸರಪಳಿಯ ಪ್ರಾಬಲ್ಯವನ್ನು ಭೌಗೋಳಿಕ ಮತ್ತು ಆರ್ಥಿಕ ಒತ್ತಡದ ಸಾಧನವಾಗಿ ಬಳಸುತ್ತಿವೆ. ಇದು ಅಮೆರಿಕದ ರಾಷ್ಟ್ರೀಯ ಭದ್ರತೆಗೆ ಬೆದರಿಕೆ ಎಂದಿದೆ

# ಗಾಜಾ, ಲೆಬನಾನ್, ಸಿರಿಯಾದಲ್ಲಿ ಅನಿರ್ದಿಷ್ಟಾವಧಿವರೆಗೆ ಸೇನೆ ನಿಯೋಜನೆ: ಇಸ್ರೇಲ್ ಸಚಿವ



**ಜೆರುಸಲೇಂ, ಏ.16:** ಗಾಜಾಪಟ್ಟಿ, ಲೆಬನಾನ್ ಮತ್ತು ಸಿರಿಯಾದ ಭದ್ರತಾ ವಲಯಗಳು ಎಂದು ಕರೆಯಲಾಗುವ ಪ್ರದೇಶಗಳಲ್ಲಿ ನಮ್ಮ ಸೇನೆಯು ಅನಿರ್ದಿಷ್ಟಾವಧಿ ವರೆಗೆ ಇರಲಿದೆ' ಎಂದು ಇಸ್ರೇಲ್‌ನ ರಕ್ಷಣಾ ಸಚಿವ ಇಸ್ರೇಲ್ ಕ್ಯಾಟ್ಸ್ ಬುಧವಾರ ಹೇಳಿದ್ದಾರೆ.

'ತೆರವುಗೊಳಿಸಿದ ಅಥವಾ ವಶಪಡಿಸಿಕೊಂಡ ಸ್ಥಳಗಳಿಂದ ಸೇನೆಯು ಹೋಗುವುದಿಲ್ಲ. ಗಾಜಾ, ಲೆಬನಾನ್ ಮತ್ತು ಸಿರಿಯಾದಲ್ಲಿ ಯಾವುದೇ ತಾತ್ಕಾಲಿಕ ಮತ್ತು ಶಾಶ್ವತ ಪರಿಸ್ಥಿತಿಗಳಲ್ಲಿ ಸೇನೆಯು ಶತ್ರುಗಳು ಮತ್ತು ಇಸ್ರೇಲ್ ಸಮುದಾಯದ ನಡುವೆ ಗೋಡೆಯಾಗಿ ನಿಲ್ಲಲಿದೆ' ಎಂದು ಅವರು ತಿಳಿಸಿದ್ದಾರೆ. '2023 ಅಕ್ಟೋಬರ್ 7ರಂದು ಹಮಾಸ್ ನಡೆಸಿದಂತಹ ದಾಳಿ ಪುನರಾವರ್ತನೆಯಾಗದಂತೆ ತಡೆಯಲು ಭದ್ರತಾ ವಲಯಗಳನ್ನು ನಿಯಂತ್ರಣದಲ್ಲಿಟ್ಟುಕೊಳ್ಳುವುದು ಅಗತ್ಯವಾಗಿದೆ' ಎಂದೂ ಅವರು ಹೇಳಿದ್ದಾರೆ.

# ಪಾಕಿಸ್ತಾನದಲ್ಲಿ ವಾಯುಪಡೆಯ ವಿಮಾನ ಪತನ: ಪೈಲಟ್‌ಗಳು ಪಾರು

ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದಲ್ಲಿ ವಾಯುಪಡೆಯ ವಿಮಾನವೊಂದು ಪತನಗೊಂಡಿದೆ. ಪಾಕಿಸ್ತಾನ ವಾಯುಪಡೆಯ (ಪಿಎಎಫ್) ತರಬೇತಿ ವಿಮಾನ ಮಿರಾಜ್ ವಿ ರೋಸ್ ಲಾಹೋರ್‌ನಿಂದ ನೈಋತ್ಯಕ್ಕೆ ಸುಮಾರು 350 ಕಿ.ಮೀ ದೂರದಲ್ಲಿರುವ ವಹಾರಿ ಜಿಲ್ಲೆಯ ಉಪನಗರದಲ್ಲಿರುವ ರಟ್ಟಾ ಟಿಬ್ಬಾ ಹೊಲದಲ್ಲಿ ಪತನಗೊಂಡಿದೆ. ಇಬ್ಬರು ಪೈಲಟ್‌ಗಳು ಹೊರಗೆ ಹಾರುವಲ್ಲಿ ಯಶಸ್ವಿಯಾಗಿದ್ದಾರೆ. ಅವರಿಗೆ ಯಾವುದೇ ಗಾಯಗಳಾಗಿಲ್ಲ. ಆದರೆ, ಇಬ್ಬರನ್ನು ಹತ್ತಿರದ ಸೇನಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ತಿಳಿಸಿವೆ. ರಕ್ಷಣಾ 1122, ಮಿಲಿಟರಿ ಮತ್ತು ಪೊಲೀಸ್ ಸಿಬ್ಬಂದಿ ಮತ್ತು ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಿದವು. ಡಾನ್ ಪತ್ರಿಕೆ ವರದಿ ಪ್ರಕಾರ, ಇಬ್ಬರೂ ಪೈಲಟ್‌ಗಳಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅವರನ್ನು ಸೇನಾ ಹೆಲಿಕಾಪ್ಟರ್‌ನಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪಿಎಎಫ್ ವಿಮಾನವು ತರಬೇತಿ ಹಾರಾಟದಲ್ಲಿತ್ತು ಆದರೆ ಕೆಲವು ತಾಂತ್ರಿಕ ದೋಷದಿಂದಾಗಿ ಅಪಘಾತಕ್ಕೀಡಾಯಿತು.

# ವಲಸೆ: ಭಾರತ ಸೇರಿ 7 ದೇಶ ಸುರಕ್ಷಿತ– ಐರೋಪ್ಯ ಒಕ್ಕೂಟ



ಬ್ರುಸೆಲ್ಸ್(ಬೆಲ್ಜಿಯಂ): ಯುರೋಪ್ ರಾಷ್ಟ್ರಗಳಿಗೆ ವಲಸೆ ಬರುವವರ ವಿಚಾರಕ್ಕೆ ಸಂಬಂಧಿಸಿ ಭಾರತ ಸೇರಿ 7 'ಸುರಕ್ಷಿತ ದೇಶ'ಗಳ ಹೆಸರು ಇರುವ ಪಟ್ಟಿಯನ್ನು ಐರೋಪ್ಯ ಒಕ್ಕೂಟ ಬುಧವಾರ ಪ್ರಕಟಿಸಿದೆ. ಭಾರತ, ಕೊಸೋವೊ, ಬಾಂಗ್ಲಾದೇಶ, ಕೊಲಂಬಿಯಾ, ಈಜಿಪ್ಟ್, ಮೊರಾಕ್ಕೋ ಮತ್ತು ಟ್ಯುನೀಷಿಯಾ ಈ ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ವಲಸಿಗರನ್ನು ವಾಪಸ್ ಕಳಿಸುವ ಪ್ರಕ್ರಿಯೆಗೆ ವೇಗ ನೀಡುವ ಸಲುವಾಗಿ ಒಕ್ಕೂಟ ಈ ಪಟ್ಟಿಯನ್ನು ಸಿದ್ಧಪಡಿಸಿದೆ.





ರೋಮ್‌ನಲ್ಲಿ ಮಂಗಳವಾರ ಭಾರತೀಯ ರಕ್ಷಣಾ ತಯಾರಕರ ಸಂಘ ಮತ್ತು ಇಟಲಿಯ ಏರೋಸ್ಪೇಸ್, ರಕ್ಷಣಾ ಮತ್ತು ಭದ್ರತೆಗಾಗಿ ಕಂಪನಿಗಳ ಒಕ್ಕೂಟದ ನಡುವಿನ ಒಪ್ಪಂದಕ್ಕೆ ಸಹಿಹಾಕುವ ಕಾರ್ಯಕ್ರಮದಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್‌ಕುಮಾರ್ ಸಿಂಗ್ ಮತ್ತು ಇಟಲಿಯ ರಕ್ಷಣಾ ಪ್ರಧಾನ ಕಾರ್ಯದರ್ಶಿ ಲೂಯಿಸಾ ರಿಕಾರ್ಡಿ ಭಾಗವಹಿಸಿದ್ದರು.

# ದುಬೈನಲ್ಲಿ ಪಾಕಿಸ್ತಾನ ಪ್ರಜೆ ದಾಳಿ; ತೆಲಂಗಾಣದ ಇಬ್ಬರ ಸಾವು



ಹೈದರಾಬಾದ್: ಪಾಕಿಸ್ತಾನದ ಪ್ರಜೆಯೊಬ್ಬ ದುಬೈನ ಬೇಕರಿಯೊಂದರಲ್ಲಿ ಕೆಲಸ ಮಾಡುತ್ತಿದ್ದ ತಲಂಗಾಣ ಮೂಲದ ಇಬ್ಬರನ್ನು ಇರಿದು ಕೊಂದಿದ್ದಾನ. ಹಲ್ಲೆಯಿಂದಾಗಿ ಮತ್ತೊಬ್ಬರು ಗಾಯಗೊಂಡಿದ್ದಾರೆ ಎಂದು ಆರೋಪಿಸಲಾಗಿದೆ. ಮೃತಪಟ್ಟವರನ್ನು ತೆಲಂಗಾಣದ ನಿರ್ಮಲ್ ಜಿಲ್ಲೆಯ ಅಷ್ಮಪು ಪ್ರೇಮಸಾಗರ್ (35) ಹಾಗೂ ನಿಜಾಮಾಬಾದ್ ಜಿಲ್ಲೆಯ ಶ್ರೀನಿವಾಸ್ ಎಂದು ಗುರುತಿಸಲಾಗಿದೆ. ನಿಜಾಮಾಬಾದ್‌ನ ಸಾಗರ್ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ದುಬೈನ 'ಮಾಡರ್ನ್ ಬೇಕರಿ ಎಲ್‌ಎಲ್‌ಸಿ'ಯಲ್ಲಿ ಏ. 11ರಂದು ಈ ಘಟನೆ ನಡೆದಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್ 'ಎಕ್ಸ್'ನಲ್ಲಿ ತಿಳಿಸಿದ್ದಾರೆ. ದಾಳಿಕೋರನು ಧಾರ್ಮಿಕ ಘೋಷಣೆಗಳನ್ನು ಕೂಗುತ್ತಾ ಖಡ್ಗದಿಂದ ಇರಿದು ಕೊಂದಿದ್ದಾನ ಎಂದು ಮೃತರ ಕುಟುಂಬಸ್ಥರು ಆರೋಪಿಸಿದ್ದಾರೆ. ಕೇಂದ್ರ ಸಚಿವ ಜಿ. ಕಿಶನ್ ರೆಡ್ಡಿ ಅವರು ಘಟನೆಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಪಾರ್ಥಿವ ಶರೀರವನ್ನು ಭಾರತಕ್ಕೆ ಕರೆತರುವ ಬಗ್ಗೆ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗೆ ಚರ್ಚಿಸಿದ್ದಾಗಿ ತಿಳಿಸಿದ್ದಾರೆ.

# ಅಮೆರಿಕದ ಗಡೀಪಾರು ಕ್ರಮ: ಕೋರ್ಟ್ ಮೊರೆಹೋದ ಭಾರತೀಯ ವಿದ್ಯಾರ್ಥಿ



**ನ್ಯೂಯಾರ್ಕ್, ಏ.16:** ಅಮೆರಿಕದಲ್ಲಿ ತಮ್ಮ ವಿದ್ಯಾರ್ಥಿ ವಲಸೆ ವೀಸಾವನ್ನು ರದ್ದುಗೊಳಿಸಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ಕ್ರಮವನ್ನು ಭಾರತೀಯ ವಿದ್ಯಾರ್ಥಿಯೊಬ್ಬರು ಸೇರಿದಂತೆ ನಾಲ್ವರು ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದಾರೆ. ಈ ಮೂಲಕ ವಿದ್ಯಾರ್ಥಿಗಳು ತಮ್ಮ ಸಂಭಾವ್ಯ ಗಡೀಪಾರು ವಿರುದ್ಧ ಮೊಕದ್ದಮೆ ದಾಖಲಿಸಿದ್ದಾರೆ.

ಮಿಶಿಗನ್ ಪಬ್ಲಿಕ್ ಯುನಿವರ್ಸಿಟಿಯ ವಿದ್ಯಾರ್ಥಿಗಳಾದ ಭಾರತದ ಚಿನ್ಮಯ್ ದೇವ್ರೋರೆ, ಚೀನಾದ ಕ್ಸಿಯಾಂಗ್‌ಯುನ್ ಬು ಮತ್ತು ಕಿಯುಯಿ ಯಾಂಗ್ ಹಾಗೂ ನೇಪಾಳದ ಯೋಗೇಶ್ ಜೋಶಿ ಅವರು ಗೃಹ ಇಲಾಖೆ ಮತ್ತು ವಲಸೆ ಅಧಿಕಾರಿಗಳ ವಿರುದ್ಧ ಮೊಕದ್ದಮೆ ಹೂಡಿದ್ದಾರೆ.

ವಿದ್ಯಾರ್ಥಿ ಮತ್ತು ವಿನಿಮಯ ಮಾಹಿತಿ ವ್ಯವಸ್ಥೆಯಲ್ಲಿ (ಎಸ್‌ಇವಿಐಎಸ್) ತಮ್ಮ ವಲಸೆ ಸ್ಥಿತಿಯನ್ನು ಯಾವುದೇ ಸೂಚನೆ ಮತ್ತು ವಿವರಣೆ ನೀಡದೆ ಕಾನೂನುಬಾಹಿರವಾಗಿ ತೆಗೆದುಹಾಕಲಾಗಿದೆ ಎಂದು ವಿದ್ಯಾರ್ಥಿಗಳು ಅರ್ಜಿಯಲ್ಲಿ ದೂರಿದ್ದಾರೆ. ಎಸ್‌ಇವಿಐಎಸ್ ಎಂಬುದು ಅಮೆರಿಕದಲ್ಲಿ ವಲಸೆರಹಿತ ವಿದ್ಯಾರ್ಥಿಗಳು ಮತ್ತು ವಿನಿಮಯ ಸಂದರ್ಶಕರ ದತ್ತಾಂಶವನ್ನು 'ಟ್ರ್ಯಾಕ್' ಮಾಡುವ ವ್ಯವಸ್ಥೆಯಾಗಿದೆ.

**ತಡೆಯಾಜ್ಞೆಗೆ ಮನವಿ:** ವಿದ್ಯಾರ್ಥಿಗಳನ್ನು ಪ್ರತಿನಿಧಿಸುತ್ತಿರುವ ಮಿಚಿಗನ್ ಅಮೆರಿಕನ್ ಸಿವಿಲ್ ಲಿಬರ್ಟಿಸ್ ಯೂನಿಯನ್ (ಎಸಿಎಲ್‌ಯು), ಟ್ರಂಪ್ ಆಡಳಿತದ ಈ ಕ್ರಮಕ್ಕೆ ತುರ್ತಾಗಿ ತಡೆಯಾಜ್ಞೆ ನೀಡಿ, ವಿದ್ಯಾರ್ಥಿಗಳ ಹಿತಾಸಕ್ತಿ ಕಾಪಾಡುವಂತೆ ಮನವಿ ಮಾಡಿದೆ. ಈ ವಿದ್ಯಾರ್ಥಿಗಳಿಗೆ ತಮ್ಮ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸಲು ಮತ್ತು ಬಂಧನ, ಗಡೀಪಾರು ಕ್ರಮಗಳಿಂದ ಇವರಿಗೆ ರಕ್ಷಣೆ ಒದಗಿಸಬೇಕು ಹಾಗೂ ಅವರ ವೀಸಾ ಸ್ಥಾನಮಾನವನ್ನು ಪುನರ್ ಸ್ಥಾಪಿಸುವಂತೆ ಕೋರಿದೆ.

ಭಾರತೀಯ ವಿದ್ಯಾರ್ಥಿ ಗಡೀಪಾರಿಗೆ ತಡೆ ಅಮೆರಿಕದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ಭಾರತದ 21 ವರ್ಷದ ವಿದ್ಯಾರ್ಥಿಯ ವೀಸಾ ರದ್ದುಗೊಳಿಸಿ ಗಡೀಪಾರಿಗೆ ಮುಂದಾಗಿದ್ದ ಟ್ರಂಪ್ ಆಡಳಿತದ ಕ್ರಮಕ್ಕೆ ಅಮೆರಿಕದ ಫೆಡರಲ್ ನ್ಯಾಯಾಧೀಶರು ತಾತ್ಕಾಲಿಕವಾಗಿ ತಡೆ ನೀಡಿದ್ದಾರೆ.

ವಿಸ್ಕಾನ್ಸಿನ್–ಮ್ಯಾಡಿಸನ್ ವಿಶ್ವವಿದ್ಯಾಲಯದಲ್ಲಿ ಕಂಪ್ಯೂಟರ್ ಎಂಜಿನಿಯರಿಂಗ್ ಪದವಿ ವ್ಯಾಸಂಗ ಮಾಡುತ್ತಿರುವ ಕ್ರಿಶ್ ಲಾಲ್ ಇಸ್ಸರ್‌ದಾಸಾನಿ ವಿರುದ್ಧ ಟ್ರಂಪ್ ಆಡಳಿತ ಕ್ರಮ ತೆಗೆದುಕೊಂಡಿತ್ತು. ಈ ವಿದ್ಯಾರ್ಥಿಯು 2021ರಿಂದ 'ಎಫ್–1' ವಿದ್ಯಾರ್ಥಿ ವೀಸಾದೊಂದಿಗೆ ಅಮೆರಿಕದಲ್ಲಿ ವ್ಯಾಸಂಗ ಮಾಡುತ್ತಿದ್ದರೆ. 'ಕ್ರಿಶ್ಲಾಲ್ ಅವರು ಉತ್ತಮ ಶೈಕ್ಷಣಿಕ ಸ್ಥಿತಿಯನ್ನು ಕಾಯ್ದುಕೊಂಡಿದ್ದು ಅಂತಿಮ ವರ್ಷದ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.


ಮೇ 10ಕ್ಕೆ ಅವರ ಪದವಿ ಅವಧಿ ಮುಗಿಯಲಿದೆ' ಎಂಬ ಮಾಹಿತಿಯನ್ನು ನ್ಯಾಯಾಲಯದ ಗಮನಕ್ಕೆ ತರಲಾಗಿತ್ತು. ವಿದ್ಯಾರ್ಥಿ ವೀಸಾ ರದ್ದುಗೊಳಿಸುವ ಮತ್ತು ಬಂಧಿಸುವ ಅಥವಾ ಪರೋಕ್ಷವಾಗಿ ಇತರ ಕ್ರಮಗಳನ್ನು ತೆಗೆದುಕೊಳ್ಳುವುದಕ್ಕೆ ತಾತ್ಕಾಲಿಕ ತಡೆ ನೀಡಿದ ನ್ಯಾಯಾಲಯವು ವಿಚಾರಣೆಯನ್ನು ಇದೇ 28ಕ್ಕೆ ಮುಂದೂಡಿತು. ವಿದೇಶಿ ವಿದ್ಯಾರ್ಥಿಗಳ ವೀಸಾಗಳನ್ನು ರದ್ದುಗೊಳಿಸುವ ಕುರಿತ ಟ್ರಂಪ್ ಆಡಳಿತದ ಆದೇಶದ ವಿರುದ್ಧ ರಾಷ್ಟ್ರ ಮಟ್ಟದಲ್ಲಿ ದೊರೆತ ಪ್ರಮುಖ ಜಯಗಳಲ್ಲಿ ಇದೂ ಒಂದು ಎಂದು ಮ್ಯಾಡಿಸನ್ ವಕೀಲರಾದ ಶಬ್ಬಮ್ ಲೊಟ್ಟಿ ಪ್ರತಿಕ್ರಿಯಿಸಿದ್ದಾರೆ.

ದೇಶದಾದ್ಯಂತ ಸುಮಾರು 1300 ವಿದ್ಯಾರ್ಥಿಗಳ ವೀಸಾವನ್ನು ದಿಢೀರನೇ ರದ್ದುಗೊಳಿಸಲಾಗಿದೆ. ಈ ಮೂಲಕ ಟ್ರಂಪ್ ಆಡಳಿತವು ಅಮೆರಿಕದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿ ವ್ಯಾಸಂಗ ನಡೆಸುತ್ತಿರುವ ವಿದೇಶಿ ವಿದ್ಯಾರ್ಥಿಗಳನ್ನು ಗುರಿಯಾಗಿಸಿದೆ ಎಂದು ಸಿಎನ್‌ಎನ್ ವರದಿ ಮಾಡಿದೆ.



ಜರ್ಮನಿಯ ಡಾರ್ಟ್ಮಂಡ್‌ನಲ್ಲಿ ನಡೆದ ಬೊರುಸ್ಸಿಯಾ ಡಾರ್ಟ್ಮಂಡ್ ಮತ್ತು ಎಫ್‌ಸಿ ಬಾರ್ಸಿಲೋನಾ ನಡುವಿನ UEFA ಚಾಂಪಿಯನ್ಸ್ ಲೀಗ್ ಕ್ವಾರ್ಟರ್‌ಫೈನಲ್ 2 ನೇ ಲೆಗ್ ಫುಟ್‌ಬಾಲ್ ಪಂದ್ಯದ ಸಮಯದಲ್ಲಿ ಬೊರುಸ್ಸಿಯಾ ಡಾರ್ಟ್ಮಂಡ್‌ನ ರಾಮಿ ಬೆನ್ಸೆಬೈನಿ (ಎಲ್) ಮತ್ತು ಎಫ್‌ಸಿ ಬಾರ್ಸಿಲೋನಾ ತಂಡದ ರಾಬರ್ಟ್ ಲೆವಾಂಡೋವ್ಸ್ಕಿ ಚೆಂಡಿಗಾಗಿ ಸೆಣಸಾಡಿದರು

# ರಾಜಸ್ಥಾನ್ ರಾಯಲ್ಸ್ ವಿರುದ್ಧ ಡೆಲ್ಲಿ ತಂಡಕ್ಕೆ ರೋಚಕ ಸೂಪರ್ ಓವರ್ ಜಯ




ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ್ ನಡುವಿನ ಐಪಿಎಲ್ 2025ರ 32ನೇ ಪಂದ್ಯದಲ್ಲಿ ಪಂದ್ಯ ರೋಚಕ ಅಂತ್ಯಕಂಡಿದೆ. ಡೆಲ್ಲಿ ಕ್ಯಾಪಿಟಲ್ಸ್ ಸೂಪರ್ ಓವರ್‌ನಲ್ಲಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 188 ರನ್‌ಗಳಿಸಿದರೆ, ಇದಕ್ಕೆ ಉತ್ತರವಾಗಿ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು ಅಷ್ಟೇ ರನ್‌ಗಳಿಸಿತು. ಆದರೆ ಸೂಪರ್ ಓವರ್‌ನಲ್ಲಿ ರಾಜಸ್ಥಾನ್ ಇನ್ನೊಂದು ಎಸೆತವಿರುವಂತೆ 11 ರನ್‌ಗಳಿಸಿತು. 12 ರನ್‌ಗಳ ಸೂಪರ್ ಓವರ್ ಗುರಿಯನ್ನ ಬೆನ್ನಟ್ಟಿದ ಡೆಲ್ಲಿ ತಂಡ 4 ಎಸೆತಗಳಲ್ಲಿ 13 ರನ್‌ಗಳಿಸಿ ಗೆಲುವು ಸಾಧಿಸಿತು. ರಾಹುಲ್ 7, ಟ್ರಿಸ್ಟಾನ್ ಸ್ಟಬ್ಸ್ 6 ರನ್‌ಗಳಿಸಿ ಗೆಲುವು ತಂದುಕೊಟ್ಟರು.

189ರನ್‌ಗಳ ಗುರಿಯನ್ನ ಬೆನ್ನಟ್ಟಿದ ಡೆಲ್ಲಿ ರಾಜಸ್ಥಾನ್ ರಾಯಲ್ಸ್ ಭರ್ಜರಿ ಆರಂಭ ಪಡೆದುಕೊಂಡಿತು. ಸಂಜು ಸ್ಯಾಮ್ಸನ್ ಹಾಗೂ ಯಶಸ್ವಿ ಮೊದಲ ವಿಕೆಟ್‌ಗೆ 63 ರನ್‌ಗಳ ಜೊತೆಯಾಟ ನೀಡಿದರು. 19 ಎಸೆತಗಳಲ್ಲಿ 2 ಬೌಂಡರಿ, 3 ಸಿಕ್ಸರ್ ಸಹಿತ 31 ರನ್‌ಗಳಿಸಿದ್ದ ಸಂಜು ಸ್ಯಾಮ್ಸನ್ ರಿಟೈರ್ಟ್ ಹರ್ಟ್ ತೆಗೆದುಕೊಂಡರು. ನಂತರ ಬಂದ ರಿಯಾನ್ ಪರಾಗ್ 11 ಎಸೆತಗಳಲ್ಲಿ ಕೇವಲ 8 ರನ್‌ಗಳಿಸಿ ಅಕ್ಷರ್ ಪಟೇಲ್ ಬೌಲಿಂಗ್‌ನಲ್ಲಿ ಬೌಲ್ಡ್ ಆದರು.

3ನೇ ವಿಕೆಟ್‌ಗೆ ನಿತೀಶ್ ರಾಣಾ ಮತ್ತು ಜೈಸ್ವಾಲ್ 36 ರನ್‌ಗಳಿಸಿದರು. ಜೈಸ್ವಾಲ್ 37 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸರ್‌ಗಳ ಸಹಿತ 51 ರನ್‌ಗಳಿಸಿ ಔಟ್ ಆದರು. ನಿತೀಶ್ ರಾಣಾ 28 ಎಸೆತಗಳಲ್ಲಿ 6 ಬೌಂಡರಿ, 2 ಸಿಕ್ಸರ್‌ಗಳ ಸಹಿತ 51 ರನ್‌ಗಳಿಸಿದರು. ಅವರು ಔಟ್ ಆಗುವ ಮುನ್ನ ಧ್ರುವ್ ಜುರೆಲ್ ಜೊತೆ 26 ಎಸೆತಗಳಲ್ಲಿ 49 ರನ್‌ಗಳ ಮ್ಯಾಚ್ ವಿನ್ನಿಂಗ್ ಜೊತೆಯಾಟ ನಡೆಸಿದ್ದರು.

ನಂತರ ಧ್ರುವ್ ಜುರೆಲ್ ಹಾಗೂ ಹೆಟ್ಮೆಯರ್ 14 ಎಸೆತಗಳಲ್ಲಿ 27 ರನ್ ಜೊತೆಯಾಟ ನಡೆಸಿ ಪಂದ್ಯವನ್ನ ಟೈ ಮಾಡಿದರು. ಕೊನೆಯ ಓವರ್‌ನಲ್ಲಿ ರಾಜಸ್ಥಾನ್ ಗೆಲುವಿಗೆ 9 ರನ್‌ಗಳ ಅಗತ್ಯವಿತ್ತು. ಆದರೆ ಸ್ಟಾರ್ಕ್ ಒಂದೂ ಬೌಂಡರಿ ಕೊಡದೆ ಕೇವಲ 8 ರನ್ ಮಾತ್ರ ಬಿಟ್ಟುಕೊಟ್ಟು ಪಂದ್ಯ ಟೈ ಆಗಲು ನೆರವಾದರು. ಜುರೆಲ್ 17 ಎಸೆತಗಳಲ್ಲಿ 26, ಶಿಮ್ರಾನ್ ಹೆಟ್ಮೆಯರ್ 9 ಎಸೆತಗಳಲ್ಲಿ 15 ರನ್‌ಗಳಿಸಿ ಅಜೇಯರಾಗಿ ಉಳಿದರು. ಕೊನೆಯ ಎಸೆತದಲ್ಲಿ 2 ರನ್‌ಗಳ ಅಗತ್ಯವಿತ್ತು. ಜುರೆಲ್ ಕೇವಲ 1 ರನ್‌ಗಳಿಸಿ ರನ್‌ಔಟ್ ಆದರು..

**ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ್ ರಾಯಲ್ಸ್ ತಂಡಗಳು ಇಲ್ಲಿಯವರೆಗೆ 29 ಬಾರಿ ಮುಖಾಮುಖಿಯಾಗಿದ್ದು, ಡೆಲ್ಲಿ 14 ಹಾಗೂ ರಾಜಸ್ಥಾನ್ 15ರಲ್ಲಿ ಗೆಲುವು ಸಾಧಿಸಿವೆ. ಅರುಣ್ ಜೇಟ್ಲಿ ಮೈದಾನದಲ್ಲಿ ನಡೆದಿರುವ 9 ಪಂದ್ಯಗಳಲ್ಲಿ ಡೆಲ್ಲಿ 6ರಲ್ಲಿ ಗೆದ್ದಿದ್ದರೆ, ರಾಯಲ್ಸ್ 3ರಲ್ಲಿ ಮಾತ್ರ ಗೆಲುವು ಸಾಧಿಸಿದೆ. ರಾಜಸ್ಥಾನ್ ವಿರುದ್ಧ ಡೆಲ್ಲಿ ತಂಡ ಈ ಮೈದಾನದಲ್ಲಿ ಪ್ರಾಬಲ್ಯ ಸಾಧಿಸಿದರೂ ಒಟ್ಟಾರೆ ಇಲ್ಲಿ ನಡೆದಿರುವ 86 ಪಂದ್ಯಗಳಲ್ಲಿ 38ರಲ್ಲಿ ಗೆಲುವು ಸಾಧಿಸಿದ್ದರೆ, 46 ಸೋಲು ಕಂಡಿದೆ. ಒಂದು ಪಂದ್ಯ ರದ್ದು, ಒಂದು ಟೈ ಆಗಿದೆ.**

## ಅಭಿಷೇಕ್-ರಾಹುಲ್‌ರಿಂದ ಚೇತರಿಕೆಯ ಆಟ

**3ನೇ ವಿಕೆಟ್‌ಗೆ ಅಭಿಷೇಕ್ ಪೊರೆಲ್ ಹಾಗೂ ಕೆಎಲ್ ರಾಹುಲ್ 63 ರನ್‌ಗಳಿಸಿದರು. ಆದರೆ ಇವರಿಬ್ಬರು ವೇಗವಾಗಿ ರನ್‌ಗಳಿಸುವಲ್ಲಿ ವಿಫಲರಾದರು. 63 ರನ್‌ಗಳಿಗಾಗಿ 57 ಎಸೆತಗಳನ್ನೆದುರಿಸಿದರು. 7 ಎಸೆತಗಳಲ್ಲಿ 24 ರನ್‌ಗಳಿಸಿದ್ದ ಪೊರೆಲ್ ಒಟ್ಟಾರೆ 37 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಸಹಿತ 49 ರನ್‌ಗಳಿಸಿ ಔಟ್ ಆದರು. ಪವರ್ ಪ್ಲೇನ 2ನೇ ಓವರ್‌ನಲ್ಲೆ 4 ಬೌಂಡರಿ, 1 ಸಿಕ್ಸರ್ ಸಿಡಿಸಿದ್ದ ಪೊರೆಲ್ ನಂತರ 30 ಎಸೆತಗಳಲ್ಲಿ ಕೇವಲ 1 ಬೌಂಡರಿ ಮಾತ್ರ ಸಿಡಿಸಿದರು. ಇನ್ನೂ ರಾಹುಲ್ ಕೂಡ ತಮ್ಮ ಸಾಮರ್ಥ್ಯಕ್ಕೆ ತಕ್ಕಂತೆ ಆಡಲಿಲ್ಲ. ಅವರು 32 ಎಸೆತಗಳಲ್ಲಿ 2 ಬೌಂಡರಿ, 2 ಸಿಕ್ಸರ್‌ಗಳ ಸಹಿತ 38 ರನ್‌ಗಳಿಸಿ ಆರ್ಚರ್‌ಗೆ ವಿಕೆಟ್ ನೀಡಿದರು.**

## ಪಟೇಲ್-ಸ್ಟಬ್ಸ್ ಅಬ್ಬರ

**ನಾಯಕ ಅಕ್ಷರ್ ಪಟೇಲ್ 14 ಎಸೆತಗಳಲ್ಲಿ 4 ಬೌಂಡರಿ, 2 ಸಿಕ್ಸರ್ ಸಹಿತ 32, ಟ್ರಿಸ್ಟಾನ್ ಸ್ಟಬ್ಸ್ 18 ಎಸೆತಗಳಲ್ಲಿ ತಲಾ 2 ಬೌಂಡರಿ, ಸಿಕ್ಸರ್ ಸಹಿತ ಅಜೇಯ 32, ಅಶುತೋಷ್ ಶರ್ಮಾ 11 ಎಸೆತಗಳಲ್ಲಿ ಅಜೇಯ 15 ರನ್‌ಗಳಿಸಿ ತಂಡದ ಮೊತ್ತವನ್ನ ಹೆಚ್ಚಿಸಿದರು. ರಾಜಸ್ಥಾನ್ ರಾಯಲ್ಸ್ ಪರ ಜೋಫ್ರಾ ಆರ್ಚರ್ 32ಕ್ಕೆ2, ವನಿಂದು ಹಸರಂಗ 38ಕ್ಕೆ1, ಮಹೀಶ್ ತೀಕ್ಷಣ 40ಕ್ಕೆ1 ವಿಕೆಟ್ ಪಡೆದು ಮಿಂಚಿದರು.**

ಮುಂದುವರಿದ ಡೆಲ್ಲಿ ತಂಡದ ಆರಂಭಿಕ ವೈಫಲ್ಯ

ಟಾಸ್ ಗೆದ್ದ ರಾಜಸ್ಥಾನ್ ರಾಯಲ್ಸ್ ಅತಿಥೇಯ ತಂಡಕ್ಕೆ ಬ್ಯಾಟಿಂಗ್ ನೀಡಿತು. ಬ್ಯಾಟಿಂಗ್‌ಗೆ ಇಳಿದ ಡೆಲ್ಲಿಗೆ ಇಂದೂ ಕೂಡ ಉತ್ತಮ ಆರಂಭ ಸಿಗಲಿಲ್ಲ. ಆಸೀಸ್ ಯುವ ಬ್ಯಾಟರ್ ಜೇಕ್ ಪ್ರೇಸರ್ ಮೆಕ್‌ಗರ್ಕ್ ಕೇವಲ 9 ರನ್‌ಗಳಿಸಿ ಜೋಫ್ರಾ ಆರ್ಚರ್ ಬೌಲಿಂಗ್‌ನಲ್ಲಿ ಜೈಸ್ವಾಲ್‌ಗೆ ಕ್ಯಾಚ್ ನೀಡಿ ಔಟ್ ಆದರು. ನಂತರ ಬಂದ ಕಳೆದ ಪಂದ್ಯದಲ್ಲಿ 89 ರನ್‌ಗಳಿಸಿದ್ದ ಕನ್ನಡಿಗ ಕರುಣ್ ನಾಯರ್ ರನ್ ಕದಿಯುವ ಆತುರದಲ್ಲಿ ಒಂದೂ ರನ್‌ಗಳಿಸದೇ ರನ್‌ಔಟ್ ಆಗಿ ಪೆವಿಲಿಯನ್ ಸೇರಿಕೊಂಡರು.

# ಏಷ್ಯನ್ 18 ವರ್ಷದೊಳಗಿನ ಅಥ್ಲೆಟಿಕ್ಸ್: ನಿತಿನ್‌ಗೆ ಬೆಳ್ಳಿ




ನವದೆಹಲಿ: ಭಾರತದ ನಿತಿನ್ ಗುಪ್ತಾ ಅವರು ಆರನೇ ಏಷ್ಯನ್ 18 ವರ್ಷದೊಳಗಿನವರ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನ 5000 ಮೀ. ರೇಸ್ ವಾಕ್‌ನಲ್ಲಿ ಬುಧವಾರ ಬೆಳ್ಳಿ ಪದಕ ಗೆದ್ದರು. 17 ವರ್ಷ ವಯಸ್ಸಿನ ಗುಪ್ತಾ 20ನಿ.21.51 ಸೆಕಂಡಗುಳಲ್ಲಿ ನಿಗದಿತ ದೂರವನ್ನು ಕ್ರಮಿಸಿ ಎರಡನೇ ಸ್ಥಾನ ಪಡೆದರು. ಚೀನಾದ ಝು ನಿಂಗ್‌ಹಾವೊ ಈ ದೂರವನ್ನು 20 ನಿ.21.50 ಸೆ.ಗಳಲ್ಲಿ ಪೂರೈಸಿ ಚಿನ್ನ ಗೆದ್ದರು. ಚೀನಾ ಪಿಯ ಶೆಂಗ್ ಕ್ವಿನ್ ಲೊ (210.37.88 ಸೆ.) ಕಂಚಿನ ಪದಕ ಪಡೆದರು. ಪಟ್ನಾದಲ್ಲಿ ಕಳೆದ ತಿಂಗಳು ನಡೆದ ರಾಷ್ಟ್ರೀಯ ಯುವ ಅಥ್ಲೆಟಿಕ್ ಕೂಟದಲ್ಲಿ ಗುಪ್ತಾ ಅವರು ಈ ಸ್ಪರ್ಧೆಯನ್ನು 19ನಿ.24.48 ಸೆ.ಗಳಲ್ಲಿ ಕ್ರಮಿಸಿ ತಮ್ಮದೇ ರಾಷ್ಟ್ರೀಯ ದಾಖಲೆಯನ್ನು ಸುಧಾರಿಸಿದ್ದರು.